22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 273 | ನವದೆಹಲಿ | ಬೆಲೆ ₹ 10 | ಏಪ್ರಿಲ್ 8 2025, ಮಂಗಳವಾರ



**ಶ್ರೀ ಸಿದ್ದರಾಮಯ್ಯ**
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



**ಶ್ರೀ ಡಿ.ಕೆ. ಶಿವಕುಮಾರ್**
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ








# ಫಲಿತಾಂಶ ನೀಡುವ ನಾಯಕತ್ವ, ಸ್ಫೂರ್ತಿ ನೀಡುವ ಸಾಧನೆ

**ಶ್ರೀ ಎಂ.ಬಿ. ಪಾಟೀಲ**, ಮಾನ್ಯ ಬೃಹತ್ & ಮಧ್ಯಮ ಕೈಗಾರಿಕೆಗಳು ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು, ಮತ್ತು **ಶ್ರೀ ಅಪ್ಪಾಜಿ ಸಿ.ಎಸ್. ನಾಡಗೌಡ**, ಮಾನ್ಯ ಶಾಸಕರು & ಅಧ್ಯಕ್ಷರು-ಕೆಎಸ್‌ಡಿಎಲ್, ಇವರು ಸನ್ಮಾನ್ಯ ಮುಖ್ಯಮಂತ್ರಿಗಳಾದ **ಶ್ರೀ ಸಿದ್ದರಾಮಯ್ಯ** ಅವರಿಗೆ ಮೈಸೂರ್ ಸ್ಯಾಂಡಲ್ ಉತ್ಪನ್ನಗಳನ್ನು ನೀಡುತ್ತಿರುವುದು.

## ಅದ್ಭುತ ಫಲಿತಾಂಶಗಳೊಂದಿಗೆ, 2024-25ರಲ್ಲಿ ಕೆಎಸ್‌ಡಿಎಲ್‌ನಿಂದ ಮತ್ತೊಮ್ಮೆ ಗಮನಾರ್ಹ ಸಾಧನೆ

ಕರ್ನಾಟಕದ ಐತಿಹಾಸಿಕ ಮೈಸೂರ್ ಸ್ಯಾಂಡಲ್ ಸೋಪ್ ತಯಾರಿಸುವ **ಕರ್ನಾಟಕ ಸೋಪ್ಸ್ & ಡಿಟರ್ಜೆಂಟ್ಸ್ ಲಿಮಿಟೆಡ್ (ಕೆಎಸ್‌ಡಿಎಲ್)** ಮೊದಲಿನಿಂದಲೂ ಅತ್ಯುತ್ತಮ ಗುಣಮಟ್ಟ ಹಾಗೂ ಶ್ರೀಮಂತ ಪರಂಪರೆಗಾಗಿ ಗುರುತಿಸಿಕೊಂಡಿದೆ. ಕಳೆದ ಎರಡು ವರ್ಷಗಳಲ್ಲಿ ಇನ್ನೂ ಕೆಲವು ಸಾಧನೆಗಳ ಗರಿಗಳನ್ನು ಮುಡಿಗೇರಿಸಿಕೊಂಡಿದೆ: ಕಾರ್ಯಪ್ರದರ್ಶನ, ದಾಖಲೆಯ ಲಾಭಗಳು, ಉತ್ಪಾದನೆ ಹೆಚ್ಚಳ, ಬಲಿಷ್ಠ ಮಾರುಕಟ್ಟೆ ಅಸ್ತಿತ್ವ ಇವೆಲ್ಲವೂ ಚುರುಕು ದೃಷ್ಟಿ, ಉತ್ತಮ ಅನುಷ್ಠಾನ ಹಾಗೂ ಅಭಿವೃದ್ಧಿ ಹೊಂದುವ ಇಚ್ಛಾಶಕ್ತಿಯ ಫಲಿತಾಂಶವಾಗಿದೆ.




ನಿವ್ವಳ ಲಾಭ




### ವಾರ್ಷಿಕ ವಹಿವಾಟು

| ವರ್ಷ | ವಹಿವಾಟು |
|---|---|
| 2022–23 | ₹1,375 ಕೋಟಿ |
| 2023–24 | ₹1,571 ಕೋಟಿ |
| 2024–25 | ₹1,788 ಕೋಟಿ |

### ಈ ಮಹತ್ತರ ಬೆಳವಣಿಗೆಗೆ ಮುಖ್ಯ ಕಾರಣಗಳು

**ಉತ್ಪಾದನಾ ಕ್ಷಮತೆ**
ನಿರಂತರವಾಗಿ **110%** ಸಾಧನೆ

**ರಫ್ತು ಹೆಚ್ಚಳ**
**25** ರಾಷ್ಟ್ರಗಳಲ್ಲಿ ಮಾರುಕಟ್ಟೆ, **2026**ರ ವೇಳೆಗೆ **80** ರಾಷ್ಟ್ರಗಳಿಗೆ ವ್ಯಾಪಿಸುವ ಗುರಿ

ಕಳೆದ 5 ವರ್ಷಗಳಲ್ಲಿ **29% ಸಿಎಜಿಆರ್** ಸಾಧಿಸಿದೆ ಹಾಗೂ ಸಂಸ್ಥೆಯ ಇತಿಹಾಸದಲ್ಲಿಯೇ **ಅತೀ ಹೆಚ್ಚಿನ ಲಾಭ**ಗಳಿಸಿದೆ

**ಮೈಸೂರು ಸ್ಯಾಂಡಲ್ ವೇವ್ ಸರಣಿ ಬಿಡುಗಡೆ:**
ಪ್ರೀಮಿಯಂ ಸಾಬೂನುಗಳು, ಪೂಜಾ ಸಾಮಗ್ರಿ, ಅಗರಬತ್ತಿ, ಸಾಂಬ್ರಾಣಿ, ದೀಪದ ಎಣ್ಣೆ, ಪ್ಯಾಕೇಜ್ಡ್ ನೀರು

### ಪ್ರಮುಖ ಅಂಶಗಳು

- **2 ವರ್ಷಗಳಲ್ಲಿ ₹412 ಕೋಟಿ ವಹಿವಾಟು ಹೆಚ್ಚಳ**
- **ನಿವ್ವಳ ಲಾಭ ದ್ವಿಗುಣ**
- **ಡಿವಿಡೆಂಡ್ ದ್ವಿಗುಣ**
- **ದೈನಂದಿನ ಉತ್ಪಾದನೆ: 1.8 ದಶಲಕ್ಷ ಸಾಬೂನು**
- ಒಟ್ಟು ಉತ್ಪಾದನೆಯಲ್ಲಿ **ಸೋಪುಗಳ ಪಾಲು 70%**
- **ಹೆಚ್ಚು ಶ್ರೀಗಂಧವನ್ನು ಬೆಳೆಸಿ:** 713+ ರೈತರೊಂದಿಗೆ 3,813 ಎಕರೆಗಳಲ್ಲಿ ಶ್ರೀಗಂಧ ಬೆಳೆಸಲು ಪಾಲುದಾರಿಕೆ
- ವಾರ್ಷಿಕ ಆನ್‌ಲೈನ್ ಮಾರಾಟವನ್ನು **₹100 ಕೋಟಿ**ಗೆ ಹೆಚ್ಚಿಸಲು **ಇ-ಕಾಮರ್ಸ್** ವೇದಿಕೆಗಳೊಂದಿಗೆ ಪಾಲುದಾರಿಕೆ
- ಪ್ರಚಾರ ಮತ್ತು ಮಾರಾಟ ಹೆಚ್ಚಿಸಲು ರಾಜ್ಯಾದ್ಯಂತ **'ಮೈಸೂರ್ ಸ್ಯಾಂಡಲ್ ಸೋಪ್ ಮೇಳ'** ಆಯೋಜನೆ

### ಹೊಸ ಉತ್ಪನ್ನಗಳು

- 7 ಹ್ಯಾಂಡ್ ಸ್ಯಾನಿಟೈಜರ್‌ಗಳು
- 5 ಹ್ಯಾಂಡ್‌ವಾಶ್ ಉತ್ಪನ್ನಗಳು
- 3 ಶವರ್ ಜೆಲ್‌ಗಳು
- 10 ಹೊಸ ಸಾಬೂನು ಮಾದರಿಗಳು
- ಆಕ್ವಾ ಮಿನರಲ್ ವಾಟರ್

### ವಿಷನ್ 2030

- **2030ರ** ವೇಳೆಗೆ **ರೂ.5,000 ಕೋಟಿ** ವಹಿವಾಟು ಗುರಿ
- **ವಿಜಯಪುರದಲ್ಲಿ** ಹೊಸ ಉತ್ಪಾದನಾ ಘಟಕ
- **ರಫ್ತು ಹೆಚ್ಚಿಸುವುದು. ಈಶಾನ್ಯ ಭಾರತ, ಪಂಜಾಬ್, ರಾಜಸ್ತಾನ, ಜಮ್ಮು-ಕಾಶ್ಮೀರ** ರಾಜ್ಯಗಳಿಗೆ ಮಾರುಕಟ್ಟೆ ವಿಸ್ತರಣೆ




ಎಲ್ಲಾ ವೈಯಕ್ತಿಕ ಮತ್ತು ಸಾಮೂಹಿಕ ಚಟುವಟಿಕೆಗಳಲ್ಲಿ ಉನ್ನತಿ ಸಾಧಿಸಲು ಪ್ರಯತ್ನಿಸಿ ದೇಶದ ಪ್ರಗತಿಗಾಗಿ ಶ್ರಮಿಸುವುದು. -ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

ಸಂಸ್ಥೆಯ ಈ ಅದ್ಭುತ ಸಾಧನೆಗೆ ಕಾರಣರಾದ ಕಾರ್ಮಿಕರು, ಸಿಬ್ಬಂದಿ ವರ್ಗ, ನೌಕರರ ಸಂಘ, ಅಧಿಕಾರಿ ವೃಂದ, ಪ್ರಧಾನ ವ್ಯವಸ್ಥಾಪಕರು-ಆಡಳಿತ, ಪ್ರಧಾನ ವ್ಯವಸ್ಥಾಪಕರು-ಹಣಕಾಸು, ಎಲ್ಲರಿಗೂ ಅವರ ಅಮೂಲ್ಯ ಕೊಡುಗೆಗಳಿಗೆ ಧನ್ಯವಾದಗಳು.

ಗಾಂಧಿ ಭಾರತ

**ಡಾ. ಎಸ್. ಸೆಲ್ವಕುಮಾರ್**, ಭಾ.ಆ.ಸೇ.
**ಪ್ರಧಾನ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ**

**ಡಾ. ಪ್ರಶಾಂತ್ ಪಿಕೆಎಂ**, ಐಎಫ್‌ಎಸ್, ವ್ಯವಸ್ಥಾಪಕ ನಿರ್ದೇಶಕರು
**ಕರ್ನಾಟಕ ಸೋಪ್ಸ್ & ಡಿಟರ್ಜೆಂಟ್ಸ್ ಲಿಮಿಟೆಡ್**

## ನಿತ್ಯ ಪಂಚಾಂಗ 8.04.2025 ಮಂಗಳವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ ವಸಂತ ಋತು ಚಾಂದ್ರಮಾನ, ಚೈತ್ರ ಶುದ್ಧ

ಏಕಾದಶಿ, ಆಶ್ಲೇಷ ನಕ್ಷತ್ರ, ಸರ್ವತ್ರ/ ಕಾಮದಾ ಏಕಾದಶಿ, ಮಂಡ್ಯ ರಥ, ಅರಸೀಕೆರೆ ತಾ., ಹೊಳಲ್ಕೆರೆ ಪ್ರಸನ್ನ ರಾಮೇಶ್ವರ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

## ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ ನೀತಿ ವಿರೋಧಿಸಿ ಬಿಜೆಪಿ ರಣಕಹಳೆ

# 16 ದಿನಗಳ ಜನಾಕ್ರೋಶ ಯಾತ್ರೆಗೆ ಮೈಸೂರಿನಲ್ಲಿ ಚಾಲನೆ

**ಬೆಂಗಳೂರು, ಏ.7–** ಹಾಲು, ವಿದ್ಯುತ್, ಬಸ್ ಪ್ರಯಾಣ, ವಿದ್ಯುತ್ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆ ಜೊತೆಗೆ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಆರೋಪಿಸಿ ಪ್ರತಿಪಕ್ಷ ಬಿಜೆಪಿ ಆಯೋಜಿಸಿರುವ 16 ದಿನಗಳ ಜನಾಕ್ರೋಶ ಯಾತ್ರೆಗೆ ಇಂದಿನಿಂದ ಮೈಸೂರಿನಲ್ಲಿ ಚಾಲನೆ ನೀಡಿಲಾಗಿದ್ದು, ಸರ್ಕಾರದ ವಿರುದ್ಧ ರಣಕಹಳೆ ಮೊಳಗಿಸಿದೆ.ಸಿಎಂ ಸಿದ್ದರಾಮಯ್ಯ ಅವರ ತವರುಜಿಲ್ಲೆ ಮೈಸೂರಿನಿಂದಲೇ ಚಾಲನೆ ನೀಡಿರುವುದು ವಿಶೇಷವಾಗಿದೆ. ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ನಾಡಿನ ಅಧಿದೇವತೆ ಚಾಮುಂಡೇಶ್ವರಿಗೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ಜನಾಕ್ರೋಶ ಯಾತ್ರೆಗೆ ಚಾಲನೆ ನೀಡಿದರು. ಪಕ್ಷದ ಅಧ್ಯಕ್ಷ ವಿಜಯೇಂದ್ರ, ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದ ಗೌಡ, ವಿಪಕ್ಷ ನಾಯಕರಾದ ಆರ್. ಅಶೋಕ್, ಛಲವಾದಿ ನಾರಾಯಣಸ್ವಾಮಿ, ಮಾಜಿ ಉಪಮುಖ್ಯಮಂತ್ರಿಗಳಾದ ಗೋವಿಂದ ಕಾರಜೋಳ, ಡಾ.ಸಿ.ಎನ್. ಅಶ್ವತ್ಥನಾರಾಯಣ, ಮಾಜಿ ಸಚಿವರಾದ ಮುರುಗೇಶ ನಿರಾಣಿ, ಬಿ. ಶ್ರೀರಾಮುಲು, ಬೈರತಿ ಬಸವರಾಜು, ಸಿ.ಟಿ. ರವಿ, ಮಾಜಿ ಸಂಸದ ನಳಿನ್ ಕುಮಾರ್ ಕಟೀಲು, ಹಾಲಿ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮೊದಲಾದವರು ಪಾಲ್ಗೊಂಡಿದ್ದರು.

ಕೇಂದ್ರೀಯ ಅಂಚೆಕಚೇರಿ ವೃತ್ತದಿಂದ ಅಶೋಕ ಮಾರ್ಗವಾಗಿ ಗಾಂಧಿ ಚೌಕದವರೆಗೆ ಪಾದಯಾತ್ರೆ ನಡೆಸಲಾಯಿತು. ಗಾಂಧಿ ಚೌಕದ ಬಳಿ ತೆರೆದ ವಾಹನದಲ್ಲಿ ನಾಯಕರು ಜನರನ್ನು ಉದ್ದೇಶಿಸಿ ಮಾತನಾಡಿದರು. ಬೆಲೆ ಏರಿಕೆ ಮಾತ್ರವಲ್ಲದೆ, ಮುಸ್ಲಿಂ ಓಲೈಕೆ, ದಲಿತರ ಹಣ ಲೂಟಿ, ರೈತರನ್ನು ಅವಗಣಿಸಿದ ಭ್ರಷ್ಟ ಕಾಂಗ್ರೆಸ್ ಸರಕಾರ ಎಂದು ಆರೋಪಿಸಿರುವ ಬಿಜೆಪಿ ಏ. 7ರಿಂದ ಮೇ 3ರ ವರೆಗೆ ಅಂದರೆ 16 ದಿನಗಳ ಕಾಲ ಒಟ್ಟು 4 ಹಂತಗಳ ಹೋರಾಟವನ್ನು ರೂಪಿಸಿದೆ.ರಾಜ್ಯದಲ್ಲಿ ಕಳೆದ ಇಪ್ಪತ್ತು ತಿಂಗಳಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದ ಬೆಲೆ ಏರಿಕೆ ನಿರಂತರವಾಗಿದೆ. ಸಾಮಾನ್ಯ ಜನರಿಗೆ ಬರೆ ಎಳೆಯುವ ಕೆಲಸವಾಗುತ್ತಿದೆ. ದುಬಾರಿ ಜೀವನವನ್ನು ನಾಡಿನ ಜನ ನಡೆಸುವ ದುಸ್ಥಿತಿ ಕಾಂಗ್ರೆಸ್ ಸರ್ಕಾರ ನಿರ್ಮಾಣ ಮಾಡಿದೆ. ಉಸಿರಾಡುವ ಗಾಳಿ ಬಿಟ್ಟರೆ ಉಳಿದ ಎಲ್ಲವೂ ಬೆಲೆ ಏರಿಕೆ ನಿರಂತರವಾಗಿದೆ. ಮತದಾರರಿಗೆ ವರದಾನ ಆಗುವ ಬದಲು ಸರ್ಕಾರ ಶಾಪಗ್ರಸ್ತವಾಗಿದೆ ಎಂದು ಬಿಜೆಪಿ ಆರೋಪಿಸಿದೆ.ವಿದ್ಯುತ್ ದರ ಏಪ್ರಿಲ್ 1 ರಿಂದ ಪ್ರತಿ ಯೂನಿಟ್‌ಗೆ 36 ಪೈಸೆ ಜಾಸ್ತಿ ಮಾಡಿದ್ದಾರೆ. ಹಾಲಿನ ದರ ನಾಲ್ಕು ರೂಪಾಯಿ ಹೆಚ್ಚಳ ಮಾಡಲಾಗಿದೆ. ಈಗಾಗಲೇ ಮೂರನೇ ಬಾರಿ ಜಾಸ್ತಿ ಮಾಡುತ್ತಿದ್ದಾರೆ. ಆಸ್ಪತ್ರೆಗಳಲ್ಲೂ ಚಿಕಿತ್ಸೆ ದರ ಜಾಸ್ತಿ ಮಾಡಿದ್ದಾರೆ. ಬಡವರು, ಗ್ರಾಮೀಣ ಭಾಗದಲ್ಲಿ ಸರ್ಕಾರಿ ಆಸ್ಪತ್ರೆಗೆ ಹೋಗುವ ಜನರಿಗೂ ಬರೆ ಎಳೆಯುತ್ತಿದೆ. ಅಫಿಡವಿಟ್, ಮುದ್ರಾಂಕ ಶುಲ್ಕ, ವೃತ್ತಿಪರ ತೆರಿಗೆ, ಬಸ್ ದರ ಜಾಸ್ತಿ ಮಾಡಿದ್ದಾರೆ. ರಾಜ್ಯದ ಜನತೆಯ ಮೇಲೆ ಬೆಲೆ ಏರಿಕೆಯ ಹೊರೆ ಹಾಕುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರದ ಜನವಿರೋಧಿ ನಡೆಯನ್ನು ಖಂಡಿಸಿ ಜನಾಕ್ರೋಶ ಯಾತ್ರೆಯನ್ನು ನಡೆಸಲಿದೆ.38,060 ಕೋಟಿ ಎಸ್ಸಿ, ಟಿಪಿಎಸ್ ಹಣ ದುರುಪಯೋಗ ಆಗಿದೆ. ಇದನ್ನು ನಾವು ಖಂಡಿಸುತ್ತಿದ್ದೇವೆ. ಹೀಗಾಗಿ ಕಾಂಗ್ರೆಸ್ ವಿರುದ್ಧ ಎರಡು ಪ್ರಮುಖ ಹೋರಾಟ ಮಾಡುತ್ತೇವೆ. ಇಂದು ಮೈಸೂರು ಭಾಗದಲ್ಲಿ ಹೋರಾಟ ನಡೆಯುತ್ತದೆ. ನಾಳೆ ಮಂಡ್ಯ, ಏ.9 ರಂದು ಕೊಡಗು, ಮಂಗಳೂರು, 10ರಂದು ಉಡುಪಿ, ಚಿಕ್ಕಮಗಳೂರಿನಲ್ಲಿ ಹೋರಾಟ ಮಾಡುತ್ತೇವೆ. 2ನೇ ಹಂತದ ಹೋರಾಟ ಶಿವಮೊಗ್ಗದಿಂದ 13ರಂದು ಆರಂಭವಾಗುತ್ತದೆ.

ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡುತ್ತೇವೆ. ಕಾಂಗ್ರೆಸ್‌ನವರು ಮುಸ್ಲಿಂ ಒಲೈಕೆಗಾಗಿ ಹಿಂದೂಗಳಿಗೆ ಅನ್ಯಾಯ ಮಾಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ.





### ಒಟ್ಟು 4 ಹಂತಗಳ ಯಾತ್ರೆ

**ಹಂತ–1:** ಏ. 7 ಮೈಸೂರು, ಏ. 8 ಮಂಡ್ಯ ಹಾಗೂ ಹಾಸನ, ಏ. 9– ಕೊಡಗು ಮತ್ತು ಮಂಗಳೂರು, ಏ. 10– ಉಡುಪಿ ಹಾಗೂ ಚಿಕ್ಕಮಗಳೂರು, ಏ.11–ಉತ್ತರ ಕನ್ನಡ ಮತ್ತು ಏ. 12 ಶಿವಮೊಗ್ಗ.

**ಹಂತ–2:** ಏ. 15– ನಿಪ್ಪಾಣಿ, ಏ. 16– ಬೆಳಗಾವಿ, ಹುಬ್ಬಳ್ಳಿ. ಏ. 17– ಬಾಗಲಕೋಟೆ, ವಿಜಯಪುರ. ಏ. 18– ಕಲಬುರಗಿ, ಬೀದರ್, ಚಡಚಣ.

**ಹಂತ–3:** ಏ. 21– ದಾವಣಗೆರೆ, ಹಾವೇರಿ. ಏ. 22–ಗದಗ, ಕೊಪ್ಪಳ. ಏ. 23– ಯಾದಗಿರಿ, ರಾಯಚೂರು. ಏ. 24– ಬಳ್ಳಾರಿ, ವಿಜಯನಗರ. ಏ. 25– ಚಿತ್ರದುರ್ಗ, ತುಮಕೂರು.


**ಹಂತ–4:** ಏ. 27– ಕೋಲಾರ, ಚಿಕ್ಕಬಳ್ಳಾಪುರ. ಮೇ 3– ಬೆಂಗಳೂರು ಮಹಾನಗರ, ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ.

### ತುಷ್ಟೀಕರಣ: ಕೇಂದ್ರ ಸಚಿವ ಜೋಶಿ ಆರೋಪ

ಸೋಮವಾರ ಸುದ್ದಿಗಾರರ ಜೊತೆ ಮಾತನಾಡಿದ ಪ್ರಹ್ಲಾದ್ ಜೋಶಿ ಅವರು, ಬೆಲೆ ಏರಿಕೆ ಗರಿಷ್ಠ ಮಟ್ಟಕ್ಕೆ ತಲುಪಿದೆ. ಇನ್ನೊಂದೆಡೆ ಸರಕಾರವು ಧರ್ಮಾಧಾರಿತ ಮೀಸಲಾತಿಗೆ ಅವಕಾಶ ಇಲ್ಲದೆ ಇದ್ದರೂ ಮುಸ್ಲಿಮರಿಗೆ ಸರಕಾರಿ ಕಾಮಗಾರಿಗಳಲ್ಲಿ ಶೇ.4ರಷ್ಟು ಮೀಸಲಾತಿ ನೀಡಿರುವುದು ತುಷ್ಟೀಕರಣದ ಪರಾಕಾಷ್ಠೆ ಎಂದು ಟೀಕಿಸಿದರು. ಸರಕಾರವು ಸಂವಿಧಾನ ಮತ್ತು ಸುಪ್ರೀಂ ಕೋರ್ಟಿನ ತೀರ್ಪಿನ ವಿರುದ್ಧ ನಡೆದುಕೊಂಡಂತಾಗಿದೆ ಎಂದು ಅವರು ಆಕ್ಷೇಪಿಸಿದರು. ದಲಿತರಿಗೆ ಮೀಸಲಿಟ್ಟ ಎಸ್‌ಇಪಿ, ಟಿಎಸ್ಪಿ ಹಣವನ್ನು ಗ್ಯಾರಂಟಿಗಳಿಗೆ ಬಳಸಿಕೊಳ್ಳುತ್ತಿದ್ದಾರೆ. ಸರಕಾರವು ಹಾಗಿದ್ದರೆ ಕೇವಲ ದಲಿತರಿಗೆ ಮಾತ್ರ ಗ್ಯಾರಂಟಿಗಳನ್ನು ನೀಡುತ್ತಿದೆಯೇ ಎಂದು ಅವರು ಪ್ರಶ್ನಿಸಿದರು. ತಾಯಿ ಚಾಮುಂಡೇಶ್ವರಿಯ ಆಶೀರ್ವಾದ ಪಡೆದು ಯಾತ್ರೆ ನಡೆಸಲಾಗುತ್ತಿದೆ ಎಂದು ವಿವರಿಸಿದರು. ಧರ್ಮಾಧಾರಿತ ಮೀಸಲಾತಿ ಕುರಿತು ಕಾನೂನು ತಜ್ಞರ ಜೊತೆಗೂ ಚರ್ಚಿಸಿದ್ದೇವೆ. ಅದನ್ನು ಕೋರ್ಟಿನಲ್ಲಿ ಪ್ರಶ್ನಿಸುತ್ತೇವೆ ಎಂದು ಹೇಳಿದರು.ಕೇಂದ್ರ ಸರಕಾರವು ಪೆಟ್ರೋಲ್, ಡೀಸೆಲ್ ಮೇಲೆ ಸುಂಕ ಏರಿಸಿದ್ದಕ್ಕೆ ರಾಜ್ಯ ಸರಕಾರ ಕೂಡಲೇ ತರಾತುರಿಯ ಪ್ರತಿಕ್ರಿಯೆ ನೀಡಿದೆ. ಈ 2 ರೂಪಾಯಿಯನ್ನು ಸರಕಾರಿ ಕಂಪೆನಿಗಳು ಅರ್ಥಾತ್ ಭಾರತ ಸರಕಾರವು ಅದನ್ನು ಭರಿಸಲಿದೆ. ಆ 2 ರೂ. ಗಳನ್ನು ನಾವು ಗ್ರಾಹಕರಿಗೆ ವರ್ಗಾವಣೆ ಮಾಡುತ್ತಿಲ್ಲ ಎಂದು ತಿಳಿಸಿದರು. ಹೆಚ್ಚಿಸಿದ ತೆರಿಗೆಯಿಂದ ರಾಜ್ಯ ಸರಕಾರಕ್ಕೂ ಪಾಲು ಸಿಗಲಿದೆ. ಇವರಿಗೂ ಒಂದು ರೂ. ಬರಲಿದೆ ಎಂದರು.

## ಬಿಜೆಪಿ ಜನಾಕ್ರೋಶ ಯಾತ್ರೆ

# ಸಿಎಂ ಸಿದ್ದರಾಮಯ್ಯ ಟೀಕೆ



**ಬೆಂಗಳೂರು, ಏ.7:** ರಾಜ್ಯ ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ ನೀತಿ ವಿರುದ್ಧ ಬಿಜೆಪಿ ಕೈಗೊಂಡಿರುವ ಜನಾಕ್ರೋಶ ಯಾತ್ರೆ ಕುರಿತು ಸಿಎಂ ಸಿದ್ದರಾಮಯ್ಯ ಟೀಕಿಸಿದ್ದಾರೆ.ಈ ಬಗ್ಗೆ ತಮ್ಮ ಎಕ್ಸ್‌ನಲ್ಲಿ ಬರೆದುಕೊಂಡಿರುವ ಅವರು, ಇಷ್ಟೊಂದು ಅಸಮರ್ಥ, ನಿರ್ಲಜ್ಜ ಮತ್ತು ಜನವಿರೋಧಿ ವಿರೋಧ ಪಕ್ಷವನ್ನು ರಾಜ್ಯ ಎಂದೂ ಕಂಡಿಲ್ಲ. ಸ್ವಪಕ್ಷೀಯರೇ ಆರೋಪಿಸುವಂತೆ ಪೇಮೆಂಟ್ ಸೀಟ್‌ನಲ್ಲಿ ಕೂತಿರುವ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರಿಗೆ ರಾಜ್ಯ ಸರ್ಕಾರವನ್ನು ಪ್ರಶ್ನಿಸುವ ಯಾವ ನೈತಿಕತೆ ಇದೆ? ನಮ್ಮನ್ನು ಪ್ರಶ್ನಿಸುವ ಮೊದಲು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮತ್ತು ಅವರ ಶಾಸಕ ಮಿತ್ರರು ಕಳೆದ ಎರಡು ವರ್ಷಗಳಿಂದ ಮಾಡುತ್ತಿರುವ ಗಂಭೀರ ಸ್ವರೂಪದ ಆರೋಪಗಳಿಗೆ ಉತ್ತರಿಸುವ ದಮ್ಮು ತಾಕತ್ ತೋರಿಸಲಿ ಎಂದು ಸಿಎಂ ಕುಟುಕಿದ್ದಾರೆ.ವಿಜಯೇಂದ್ರ ವಿರುದ್ಧ ಸ್ವಪಕ್ಷೀಯರು ಮಾಡುತ್ತಿರುವ ಭ್ರಷ್ಟಾಚಾರದ ಆರೋಪಗಳು ಅವರ ಪಕ್ಷದ ಹೈಕಮಾಂಡಿಗೂ ಮನವರಿಕೆ ಉಂಟಾದಂತಿದೆ. ಪಕ್ಷದೊಳಗಿದ್ದು ಮಾಡುವ ಆರೋಪಗಳಿಂದ ಆಗುವ ಮುಜುಗರದಿಂದ ತಪ್ಪಿಸಿಕೊಳ್ಳಲು ಬಿಜೆಪಿ ಹೈಕಮಾಂಡ್ ಯತ್ನಾಳ್ ಅವರನ್ನು ಪಕ್ಷದಿಂದ ಹೊರಗೆ ಹಾಕಿ, ಅವರಿಂದ ಈಗ ಇನ್ನಷ್ಟು ಆರೋಪಗಳನ್ನು ಮಾಡಿಸುತ್ತಿದೆ. ಅಂತಿಮವಾಗಿ ವಿಜಯೇಂದ್ರ ಅವರನ್ನು ಅಧ್ಯಕ್ಷ ಸ್ಥಾನದಿಂದ ಕೆಳಗೆ ಇಳಿಸುವುದೇ ಬಿಜೆಪಿ ಹೈಕಮಾಂಡ್ ಉದ್ದೇಶವಾಗಿದೆ. ಇದಕ್ಕಾಗಿ ವಿಜಯೇಂದ್ರ ತಮ್ಮ ಕುರ್ಚಿ ಉಳಿಸಿಕೊಳ್ಳಲು ಈ ಜನಾಕ್ರೋಶ ಯಾತ್ರೆಯನ್ನು ಹಮ್ಮಿಕೊಂಡಿದ್ದಾರೆಯೇ ಹೊರತು ಬೇರೆ ಯಾವ ಸಾರ್ವಜನಿಕ ಹಿತಾಸಕ್ತಿಯ ಸದುದ್ದೇಶ ಖಂಡಿತ ಈ ಯಾತ್ರೆಗೆ ಇಲ್ಲ ಎಂದು ಸಿಎಂ ಅಭಿಪ್ರಾಯಪಟ್ಟಿದ್ದಾರೆ.

# ಅಹಮದಾಬಾದ್‌ನಲ್ಲಿ ಇಂದು ನಾಳೆ ಎಐಸಿಸಿ ಅಧಿವೇಶನ

**ಬೆಂಗಳೂರು, ಏ.7:** ಎಐಸಿಸಿ ಅಧಿವೇಶನಕ್ಕೆ ದಿನಗಣನೆ ಅರಂಭವಾಗಿದ್ದು, ಈ ಬಾರಿ ಗುಜರಾತ್‌ನ ಅಹಮದಾಬಾದ್ ನಲ್ಲಿ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮ ದಲ್ಲಿ ಭಾಗಿಯಾಗಲು ಸಿಎಂ ಸಿದ್ದರಾಮಯ್ಯ ಪ್ರಯಾಣಿಸಲಿದ್ದಾರೆ. ನಾಳೆ ಮಂಗಳವಾರ ಮತ್ತು ನಾಡಿದ್ದು ಬುಧವಾರ ಎಐಸಿಸಿ ಅಧಿವೇಶನ ನಡೆಯಲಿದೆ.ಎರಡು ದಿನಗಳ ಕಾಲ ಗುಜರಾತ್ ನಲ್ಲಿ ನಡೆಯಲಿರುವ ಎಐಸಿಸಿ ಅಧಿವೇಶನದಲ್ಲಿ ರಾಜ್ಯದ ಇತರ ನಾಯಕರು ಭಾಗಿಯಾಗಲಿದ್ದಾರೆ. ಇದೇ ಸಂದರ್ಭದಲ್ಲಿ ಎಐಸಿಸಿ ನಾಯಕರ ಜೊತೆಗೆ ಸಂಪುಟ ಪುನಾರಚನೆ, ಕೆಪಿಸಿಸಿ ಅಧ್ಯಕ್ಷ ಸ್ಥಾನದ ಬದಲಾವಣೆ, ವಿಧಾನಪರಿಷತ್ ಗೆ ನಾಮನಿರ್ದೇಶನ ಮಾಡುವ ವಿಚಾರವಾಗಿಯೂ ಚರ್ಚೆ ನಡೆಸುವ ಸಾಧ್ಯತೆ ಇದೆ.ಬಹುತೇಕ ಮುಂದಿನ ವಾರದೊಳಗೆ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ, ಸಂಪುಟ ಪುನಾರಚನೆ, ಎಂಎಲ್‌ಸಿ ನಾಮನಿರ್ದೇಶನ ಎಲ್ಲದಕ್ಕೂ ಸ್ಪಷ್ಟ ಉತ್ತರ ಸಿಗಲಿದೆ.

## ಅಧಿವೇಶನದ ಬಳಿಕ ಹನಿಟ್ರ್ಯಾಪ್ ಹಗರಣದ ವಿರುದ್ಧ ದೂರು: ಸಚಿವ ರಾಜಣ್ಣ ಸ್ಪಷ್ಟನೆ

**ಬೆಂಗಳೂರು, ಏ.7:** ರಾಜ್ಯದಲ್ಲಿ ಸದ್ಯ ಹನಿಟ್ರ್ಯಾಪ್ ಪ್ರಕರಣದ್ದೇ ಗದ್ದಲ. ಈ ನಡುವೆ ಇದೀಗ ಸಹಕಾರಿ ಸಚಿವ ಕೆ.ಎನ್.ರಾಜಣ್ಣ ಅವರು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಲಿಖಿತ ದೂರು ನೀಡಲು ಮುಂದಾಗಿದ್ದಾರೆ. ಗುಜರಾತ್‌ನಲ್ಲಿ ನಡೆರಲಿರುವ ಎಐಸಿಸಿ ಅಧಿವೇಶನದ ಬಳಿಕ ದೆಹಲಿಗೆ ತೆರಳಿ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ಹನಿಟ್ರ್ಯಾಪ್ ನಡೆಸಲು ಯತ್ನಿಸಿದ ಪ್ರಯತ್ನದ ಬಗ್ಗೆ ವಿಸ್ತೃತ ಮಾಹಿತಿಯನ್ನು ನೀಡಲಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಈ ಸಂಬಂಧ ಈಗಾಗಲೇ ರಾಜಣ್ಣ ಅವರು ಎಲ್ಲಾ ದಾಖಲೆಗಳನ್ನು ರೆಡಿ ಮಾಡಿಕೊಂಡಿದ್ದಾರೆ. ಪ್ರಕರಣದಲ್ಲಿ ಯಾರು ಇದ್ದಾರೆ? ಯಾರ ನಿರ್ದೇಶನದಂತೆ ಇದೆಲ್ಲವೂ ನಡೆದಿದೆ? ಎಂಬ ಬಗ್ಗೆ ರಾಹುಲ್ ಗಾಂಧಿಗೆ ಲಿಖಿತವಾಗಿ ದೂರನ್ನು ನೀಡಲಿದ್ದಾರೆ ಎಂದು ರಾಜಣ್ಣ ಆಪ್ತ ಮೂಲಗಳಿಂದ ತಿಳಿದುಬಂದಿದೆ.ಹನಿಟ್ರ್ಯಾಪ್ ಪ್ರಕರಣದ ಬಗ್ಗೆ 'ಕೈ' ಹೈಕಮಾಂಡ್ ತನ್ನದೇ ಆದ ಮೂಲಗಳಿಂದ ಮಾಹಿತಿ ಪಡೆದುಕೊಂಡಿದೆ. ಇದೀಗ ಹೈಕಮಾಂಡ್ಗೆ ಲಿಖಿತವಾಗಿ ಕೆ ಎನ್ ರಾಜಣ್ಣ ಅವರು ಕೂಡ ವಿವರವಾದ ಮಾಹಿತಿಯನ್ನು ನೀಡಲಿದ್ದಾರೆ. ಈ ಮೂಲಕ ಹೈಕಮಾಂಡ್ ಎಂಟ್ರಿ ಆಗುವಂತೆ ಅವರು ಮನವಿ ಮಾಡಲಿದ್ದಾರೆ ಎನ್ನಲಾಗಿದೆ.

# ಬೆಂಗಳೂರಿನಲ್ಲಿ ಪೌರಕಾರ್ಮಿಕರ ಸಮಾವೇಶ




**ಬೆಂಗಳೂರು, ಏ.7:** ಈ ಬಾರಿಯ ಬಿಬಿಎಂಪಿ ಬಜೆಟ್‌ನಲ್ಲಿ ಪೌರಕಾರ್ಮಿಕರ ವೇತನ ಪಾವತಿಗೆ ರೂ.500 ಕೋಟಿ ಹಣ ಘೋಷಣೆ ಮಾಡಲಾಗಿದೆ. ರೂ. 107 ಕೋಟಿ ಹಣವನ್ನು ಪಿಂಚಣಿಗೆ ಮೀಸಲಿಡಲಾಗಿದೆ. ಮೃತಪಟ್ಟವರ ಹೆಸರಿನಲ್ಲಿ ರೂ.10 ಲಕ್ಷ ಹಣ ಮೀಸಲಿಟ್ಟು ರೂ. 6 ಸಾವಿರ ಪಿಂಚಣಿ ನೀಡುವ ಯೋಜನೆ ತರಲಾಗಿದೆ. ಪೌರಕಾರ್ಮಿಕರಿಗಾಗಿ ಬಿಬಿಎಂಪಿಯಿಂದ ಒಟ್ಟು ರೂ.730 ಕೋಟಿ ಹಣ ನಾವು ಮೀಸಲಿಟ್ಟಿದ್ದೇವೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು. ಬೆಂಗಳೂರಿನ ಅರಮನೆ ಮೈದಾನದಲ್ಲಿ ಸೋಮವಾರ ನಡೆದ ಕರ್ನಾಟಕ ರಾಜ್ಯ ನಗರಪಾಲಿಕೆ, ನಗರಸಭೆ, ಪುರಸಭೆಗಳ ಪೌರ ಕಾರ್ಮಿಕರ ಸಮಾವೇಶದಲ್ಲಿ ಮಾತನಾಡಿದರು. "ಶೂ, ಕೈಗವಸು ಸೇರಿದಂತೆ ಇತರೇ ಸಲಕರಣೆಗಳ ವಿತರಣೆಗೆ ರೂ.5 ಕೋಟಿ, ಸಮವಸ್ತ್ರಕ್ಕೆ ರೂ. 6 ಕೋಟಿ, ಮಕ್ಕಳ ವಿದ್ಯಾಭ್ಯಾಸದ ಶುಲ್ಕ ಮರುಪಾವತಿಗೆ ರೂ. 6 ಕೋಟಿ, ಆರೋಗ್ಯಕ್ಕೆ ರೂ.4 ಕೋಟಿ, ಒಂಟಿ ಮನೆಗೆ ಪ್ರತ್ಯೇಕವಾಗಿ ರೂ.30 ಕೋಟಿ, ಕೌಶಲ್ಯ ಅಭಿವೃದ್ಧಿಗೆ ರೂ.5 ಕೋಟಿ, ಟ್ಯಾಕ್ಸಿ, ಆಟೋ ಚಾಲಕರಿಗೆ ರೂ. 10 ಕೋಟಿ ಒಟ್ಟು ನಿಮ್ಮ ಕಲ್ಯಾಣಕ್ಕೆ ರೂ. 64 ಕೋಟಿ ಮೀಸಲಿಡಲಾಗಿದೆ" ಎಂದು ಹೇಳಿದರು. "ಪೌರಕಾರ್ಮಿಕರ ಬದುಕಿನಲ್ಲಿ ಬದಲಾವಣೆ ತರುವುದೇ ಕಾಂಗ್ರೆಸ್ ಸರ್ಕಾರದ ಸಂಕಲ್ಪ. ಪೌರಕಾರ್ಮಿಕರು ನಮ್ಮ ಹಾಗೂ ದೇಶದ ಶಕ್ತಿ, ಕಾಂಗ್ರೆಸ್ ಸರ್ಕಾರ ನಿಮ್ಮ ಶಕ್ತಿ ಎಂಬುದನ್ನು ಮರೆಯಬಾರದು. ನಿಮ್ಮ ಕೆಲಸ ಖಾಯಂ ಆದ ತಕ್ಷಣ ನಿಮಗೆ ಬರುವ ಸಂಬಳ 50 ಸಾವಿರ ಮುಟ್ಟುತ್ತದೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

### ನಮ್ಮ ಮನೆಯನ್ನು ಸ್ವಚ್ಛಗೊಳಿಸಿಕೊಳ್ಳುವ ನಾವುಗಳು ಪೌರ ಕಾರ್ಮಿಕರೇ:

"ಮನೆಯಲ್ಲಿ ನಾವು ವೈಯಕ್ತಿಕವಾಗಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳುತ್ತೇವೆ. ಮನೆಯನ್ನು ಸ್ವಚ್ಛಗೊಳಿಸುತ್ತೇವೆ, ಹಾಗಾದರೆ ನಾವೂ ಸಹ ಪೌರ ಕಾರ್ಮಿಕರಲ್ಲವೇ. ನಾವು ಮನೆಯನ್ನು ಸ್ವಚ್ಛಗೊಳಿಸುತ್ತೇವೆ. ನೀವು ಪುರವನ್ನು ಸುಂದರಗೊಳಿಸುತ್ತೀರಿ. ನಾವು ಒಳಗಡೆ, ನೀವು ಹೊರಗಡೆ. ಆದ ಕಾರಣ ನಮ್ಮ ನಿಮ್ಮ ನಡುವೆ ಯಾವುದೇ ಬೇಧ ಭಾವವಿಲ್ಲ" ಎಂದರು."ನನಗೆ ಇಂದೇ ನಿಮಗೆ ನೇಮಕಾತಿ ಪತ್ರ ನೀಡಬೇಕು ಎನ್ನುವ ಆಲೋಚನೆ ಇತ್ತು. ಒಂದಷ್ಟು ಸಿಂದುತ್ವ ಬಾಕಿ ಇರುವ ಕಾರಣ ಮೇ 1 ರಂದು ನೇಮಕಾತಿ ಪತ್ರ ನಿಮ್ಮ ಕೈ ಸೇರುವುದು. ಈ ಬಗ್ಗೆ ಮುಖ್ಯಮಂತ್ರಿಗಳಿಗೂ ನಾನು ಸಲಹೆ ನೀಡಿದೆ. ವಾಹನ ಚಾಲಕರು, ಲೋಡರ್ಸ್ ವಿಚಾರವಾಗಿ ನಾರಾಯಣ ಅವರು ಗಮನ ಸೆಳೆದಿದ್ದಾರೆ. ಅವರ ಮನವಿಯನ್ನು ಕಾರ್ಯಗತಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದು" ಎಂದರು."ಪೌರ ಕಾರ್ಮಿಕರ ಖಾಯಂ ವಿಚಾರದಲ್ಲಿ ಒಂದಷ್ಟು ಅಧಿಕಾರಿಗಳು ಸಿಂಧುತ್ವ ನೀಡುವುದಕ್ಕೆ ಕಿರುಕುಳ ನೀಡುತ್ತಿದ್ದಾರೆ ಎನ್ನುವ ದೂರುಗಳು ಬರುತ್ತಿವೆ. ಯಾರೂ ಸಹ ಒಂದೇ ಒಂದು ರೂಪಾಯಿ ಹಣ ನೀಡಬಾರದು. ಹಣ ಕೇಳಿದರೆ ನನಗೆ ಲಿಖಿತವಾಗಿ ದೂರು ನೀಡಬೇಕು.

## ಭಾರತದ ಭೂಮಿ ಚೀನಾದಿಂದ ಅತಿಕ್ರಮಣ ಮುಚ್ಚಿಹಾಕಲು ಬಿಜೆಪಿ ತಂತ್ರ: ಲಾಡ್ ಆರೋಪ



**ಧಾರವಾಡ, ಏ.7:** ಚೀನಾ ನಮ್ಮ ದೇಶದೊಳಗೆ 1756 ಕಿ.ಮೀ. ಪ್ರದೇಶವನ್ನು ಅತಿಕ್ರಮಣ ಮಾಡಿದೆ. ಇದನ್ನು ಮುಚ್ಚಿ ಹಾಕುವ ಸಲುವಾಗಿ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ವಕ್ಫ್ ಬಿಲ್ ಮಂಡನೆ ಮಾಡಿ ನಾಟಕವಾಡಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ವಾಗ್ದಾಳಿ ನಡೆಸಿದ್ದಾರೆ. ಧಾರವಾಡದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಚೀನಾ ಭಾರತದ 600ಕ್ಕೂ ಹೆಚ್ಚು ಹಳ್ಳಿಗಳನ್ನು ಆಕ್ರಮಿಸಿದೆ. ಚೀನಾದವರು ಎರಡು ಸೇನಾಠಾಣ್ಯ ಸ್ಥಾಪಿಸಿದ್ದಾರೆ. ಇದು ಎಲ್ಲೂ ಹೊರಗೆ ಬರಬಾರದು ಎಂಬ ಕಾರಣಕ್ಕೆ ವಕ್ಫ್ ಬಿಲ್ ತಂದು ಗದ್ದಲ ಎಬ್ಬಿಸಿದ್ದಾರೆ ಎಂದರು. ಬಡತನ, ನಿರುದ್ಯೋಗದ ಬಗ್ಗೆ ಚರ್ಚೆ ಆಗಬಾರದೆಂಬ ಉದ್ದೇಶದಿಂದ ಬಿಜೆಪಿಯವರು ಇಂತಹ ನಾಟಕ ಮಾಡುತ್ತಿದ್ದಾರೆ. ಅಲ್ಪಸಂಖ್ಯಾತರಿಗೆ ಅವರದ್ದೇ ಆದ ಒಂದು ವ್ಯವಸ್ಥೆ ಇದೆ. ಅವರಿಗೆ ಆದ ಕಾಯ್ದೆ ಕಾನೂನು ಇವೆ. ಇದು ಆರ್ಟಿಕಲ್ 26 ರಲ್ಲಿ ಇದೆ ಆದರೂ ಅದನ್ನು ಉಲ್ಲಂಘನೆ ಮಾಡಲಾಗಿದೆ. ನಾಳೆ ಇದು ಕೋರ್ಟ್‌ನಲ್ಲಿ ಬೀಳುತ್ತೆ ಎಂದು ಗೊತ್ತಿದ್ದರೂ ಮಾಡಿದ್ದಾರೆ ಎಂದು ಕಿಡಿಕಾರಿದರು.

## ಜಕ್ಕಪ್ಪ ಯಡವೆ ಅವರನ್ನು ವಿಧಾನ ಪರಿಷತ್ ಸದಸ್ಯರಾಗಿ ನಾಮ ನಿರ್ದೇಶನಕ್ಕೆ ಉಪ್ಪಾರ ಸಮಾಜ ಆಗ್ರಹ



**ವಿಜಯಪುರ, ಏ.7:** ಜಕ್ಕಪ್ಪ ಸು. ಯಡವೆ ಸಾ.ರತ್ನಾಪೂರ ಇವರು ಜಿಲ್ಲಾ ಉಪ್ಪಾರ ಸೇವಾ ಸಂಘದ ಅಧ್ಯಕ್ಷರಾಗಿ ಸುಮಾರು 40 ವರ್ಷಗಳಿಂದ ಸಮಾಜ ಒಳಿತಾಗಿ ತಮ್ಮನ್ನು ತಾವು ತೊಡಗಿಸಿಕೊಂಡು ಸಮಾಜಕ್ಕೆ ತಮ್ಮದೇ ಆದ ಗುರುತರ ಕೊಡುಗೆಯನ್ನು ನೀಡಿದ್ದಾರೆ. ಇಂತಹ ಒಳ್ಳೆಯ ವ್ಯಕ್ತಿತ್ವವುಳ್ಳ ಹಾಗೂ ಸಮಾಜಸೇವಕರಾಗಿದ್ದಾರೆ.

ಇವರು 2 ಬಾರಿ ಜಿಲ್ಲಾ ಪರಿಷತ್ ಸದಸ್ಯರಾಗಿ ಹಾಗೂ ಜಿಲ್ಲಾ ಪಂಚಾಯತ ಸದಸ್ಯರಾಗಿ ಆಯ್ಕೆಯಾಗಿರುವ ಇವರು ಅಹಿಂದ ಜಿಲ್ಲಾ ಸಂಘಟನೆ ಅಧ್ಯಕ್ಷರಾಗಿ ತಮ್ಮದೇ ಆದ ಕೊಡುಗೆಯನ್ನು ನೀಡಿದ ಕೀರ್ತಿ ಇವರಿಗೆ ಸಲ್ಲುತ್ತದೆ. ಇವರು ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಅಭಿವೃದ್ಧಿ ಸಂಘದ ಸಲಹಾ ಸಮಿತಿ ಸದಸ್ಯರಾಗಿ ಸೇವೆ ಅದೇ ರೀತಿ 1977 ರಿಂದ ವಿಜಯಪುರ ಜಿಲ್ಲೆಯಲ್ಲಿ ರಾಜಕೀಯ ಪ್ರವೇಶ ಮಾಡಿ ಇಂದಿನವರೆಗೂ ಕ್ರಿಯಾಶೀಲ ರಾಜಕೀಯ ವ್ಯಕ್ತಿಯಾಗಿ ಕಾರ್ಯನಿರ್ವಹಿಸಿದ್ದಾರೆ. ಸನ್ 1986 ರಿಂದ 1991 ರ ವರೆದ ವಿಜಯಪುರ ಜಿಲ್ಲಾ ಪರಿಷತ್ ಸದಸ್ಯನಾಗಿ ಹಾಗೂ ಸನ್ 1994 ರಿಂದ 1999ರ ವರೆಗೆ ಜಿಲ್ಲಾ ಪಂಚಾಯ ಸದಸ್ಯನಾಗಿ ಆಯ್ಕೆಯಾಗಿ ಜನಪರ ಕಾರ್ಯಗಳನ್ನು ಮಾಡಿದ್ದಾರೆ.

ಸಿದ್ರಾಮಯ್ಯನವರ ಸರ್ಕಾರದ ಕರ್ನಾಟಕ ಸರ್ಕಾರದ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ಕೃಷ್ಣಾ ಮೇಲ್ದಂಡೆ ಯೋಜನೆ ಯೋಜನೆ (ಕಾಡಾ), ಭೀಮರಾಯನ ಗುಡಿ ಇದರ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದಾರೆ. ಅಲ್ಲದೇ ವಿಜಯಪುರ ಜಿಲ್ಲಾ ಪರಿಷತ್ ಸಾರ್ವಜನಿಕ ಸೇವೆಗಳ ಸಲಹಾ ಸಮಿತಿಯ ಸದಸ್ಯರಾಗಿ ಮತ್ತು ವಿಜಯಪುರ ಜಿಲ್ಲಾ ಪಂಚಾಯತ ಆರೋಗ್ಯ ಮತ್ತು ಶಿಕ್ಷಣ ಸ್ಥಾಯಿ ಸಮಿತಿ ಅಧ್ಯಕ್ಷನಾಗಿ ಕೂಡಾ ಕಾರ್ಯ ನಿರ್ವಹಿಸಿದ್ದು, ಇವೆಲ್ಲವುಗಳು ಇವರ ರಾಜಕೀಯ ಜೀವನದ ಕಾರ್ಯ ಗಳಾಗಿವೆ. ಇನ್ನು ಸಾಮಾಜಿಕವಾಗಿ ಜಿಲ್ಲಾ ಅಹಿಂದ ಸಂಘಟನೆಯ ಅಧ್ಯಕ್ಷನಾಗಿ ಡಾ। ಬಿ. ಆರ್. ಅಂಬೇಡ್ಕರ ಸಲಹಾ ಸಮಿತಿ ಸದಸ್ಯನಾಗಿ, ಮತ್ತು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ ಕಾರ್ಯನಿರ್ವ ಚುನಾವಣೆಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಿದ್ದಾರೆ.

ರಾಜ್ಯದಲ್ಲಿ ಸುಮಾರು 50 ಲಕ್ಷದಷ್ಟು ಜನಸಂಖ್ಯೆಯನ್ನು ಹೊಂದಿರುವ ಉಪ್ಪಾರ ಸಮಾಜವು, ಉತ್ತರ ಕರ್ನಾಟಕದಲ್ಲಿ ಪ್ರಾತಿನಿಧ್ಯ ಸಿಕ್ಕಿರುವದಿಲ್ಲ. ಇವರ ರಾಜಕೀಯ ಮತ್ತು ಸಾಮಾಜಿಕ ಅನುಭವವನ್ನು ಗುರ್ತಿಸಿ ಇವರನ್ನು ವಿಧಾನ ಪರಿಷತ್ ಸದಸ್ಯ ಸ್ಥಾನಕ್ಕೆ ನಾಮನಿರ್ದೇಶನ ಮಾಡಬೇಕೆಂದು ಶ್ರೀನಿವಾಸ ಅಂಬಲಿ, ಸಿದ್ದು ಗೇರಡೆ, ರಾವತಪ್ಪ ಹಾದಿಮನಿ, ಜೆ.ಎಲ್. ಕಸ್ತೂರಿ, ಪರಶುರಾಮ ಉಪ್ಪಾರ, ಸುರೇಶ ಕರಂಡೆ, ಮುದಕಪ್ಪ ರಾನಗಟ್ಟಿ, ಮಹಾನಿಂಗಪ್ಪ ಉಪ್ಪಾರ, ಪ್ರಕಾಶ ಕಿಲ್ಲಾರಿ, ಮಂಜುನಾಥ ನರಳೆ, ಗಣಪತಿ ಯಡವೆ, ರಾಮಜಿ ಮಿಸಾಳ, ಸಾಬು ಖಂಡೇಕಾರ (ಹೊನವಾಡ) ಹಾಗೂ ಸಮಸ್ತ ಉಪ್ಪಾರ ಸಮಾಜವು ಪ್ರಕಟಣೆಯಲ್ಲಿ ತಿಳಿಸಿದೆ.

# ಹಾಸನ: ಏ.12, 13ಕ್ಕೆ ಪತ್ರಕರ್ತರ ರಾಜ್ಯಮಟ್ಟದ ಕ್ರಿಕೆಟ್ ಟೂರ್ನಿ

### ಕ್ರೀಡಾಕೂಟ ಲಾಂಛನ ಬಿಡುಗಡೆ ಮಾಡಿದ ಮುಖ್ಯಮಂತ್ರಿ



**ಬೆಂಗಳೂರು, ಏ.7:** ಹಾಸನದಲ್ಲಿ ಆಯೋಜಿಸಲಾಗಿರುವ ರಾಜ್ಯ ಮಟ್ಟದ ಕ್ರಿಕೆಟ್ ಕ್ರೀಡಾಕೂಟದ ಲಾಂಛನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗೃಹ ಕಚೇರಿ ಕಾವೇರಿಯಲ್ಲಿ ಸೋಮವಾರ ಅನಾವರಣ ಮಾಡಿದರು. ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ)ವು ಈ ಬಾರಿ ಹಾಸನ ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘದ ಸಹಕಾರದಿಂದ ಇದೇ ಏ.12 ಮತ್ತು 13ರಂದು ಕ್ರೀಡಾಕೂಟವನ್ನು ಸಂಘಟಿಸಿದೆ. ಪ್ರತಿ ಜಿಲ್ಲೆಯ ತಂಡಗಳು ಕ್ರೀಡಾಕೂಟದಲ್ಲಿ ಭಾಗವಹಿಸಲಿದ್ದು, ಎರಡು ದಿನ ಪತ್ರಕರ್ತರ ಕ್ರಿಕೆಟ್ ಕ್ರೀಡಾ ಹಬ್ಬನಡೆಯಲಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಮುಖ್ಯಮಂತ್ರಿಗಳಿಗೆ ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಿಎಂ ಸಿದ್ದರಾಮಯ್ಯ ಅವರು, ಕ್ರೀಡಾಕೂಟ ಯಶಸ್ವಿಯಾಗಲಿ. ಎಲ್ಲರಿಗೂ ಶುಭವಾಗಲಿ ಎಂದು ಶುಭ ಹಾರೈಸಿದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ವಾರ್ತಾ ಇಲಾಖೆ ಆಯುಕ್ತರಾದ ಹೇಮಂತ ನಿಂಬಾಳ್ಕರ್, ಭಾರತೀಯ ಕಾರ್ಯ ನಿರತ ಪತ್ರಕರ್ತರ ಒಕ್ಕೂಟದ ಅಧ್ಯಕ್ಷ ಬಿ.ವಿ.ಮಲ್ಲಿಕಾರ್ಜುನಯ್ಯ, ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಖಜಾಂಚಿ ವಾಸುದೇವ ಹೊಳ್ಳ, ರಾಜ್ಯ ಸಮಿತಿ ಸದಸ್ಯ ಸೋಮಶೇಖರಗಾಂಧಿ ಮತ್ತಿತರರು ಹಾಜರಿದ್ದರು.

### ಲಾಂಛನ ವಿಶೇಷ:

ಕ್ರಿಕೆಟ್ ಕ್ರೀಡಾಕೂಟ ಲಾಂಛನವು, ಹಾಸನ ಜಿಲ್ಲೆಯ ಜೀವನದಿ ಹೇಮಾವತಿ, ಹೊಯ್ಸಳ ಶಿಲ್ಪಕಲೆಯ ತವರೂರು, ಗೊಮ್ಮಟನ ನೆಲೆಬೀಡು ಎನ್ನುವುದನ್ನು ಪ್ರತಿನಿಧಿಸುತ್ತದಲ್ಲದೆ, ಮಲೆನಾಡು, ಅರೆ ಮಲೆನಾಡು, ಬಯಲುಸೀಮೆಯ ಸೊಗಡನ್ನು ಹೊಂದಿದೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಏಪ್ರಿಲ್ 8 2025, ಮಂಗಳವಾರ

## ಒಳಪುಟಗಳಲ್ಲಿ

ಪ್ರಯಾಣಿಕರ ಸಂಚಾರ: ಹೊಸ ದಾಖಲೆ ಬರೆದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ - ಪು.5

ಚಿಲ್ಲರೆ ಮದ್ಯ ಮಾರಾಟ: ಶೇ.20 ಲಾಭಾಂಶಕ್ಕೆ ಆಗ್ರಹಿಸಿ ಹೋರಾಟ- ಪು.6

# ಪೆಟ್ರೋಲ್, ಡೀಸೆಲ್ ಮೇಲಿನ ಅಬಕಾರಿ ಸುಂಕ 2 ರೂ. ಏರಿಕೆ: ಗ್ರಾಹಕರಿಗೆ ಯಾವುದೇ ಹೊರೆ ಇಲ್ಲ

ನವದೆಹಲಿ, ಏ.7: ಕೇಂದ್ರ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ಏರಿಕೆ ಮಾಡಿದೆ. ಅಬಕಾರಿ ಸುಂಕ ಏರಿಕೆ ಮಾಡಿದರೂ ಗ್ರಾಹಕರ ಮೇಲೆ ಯಾವುದೇ ಹೊರೆ ಇಲ್ಲ. ತೈಲ ಕಂಪನಿಗಳ ಮೇಲೆ ಪ್ರತಿ ಲೀಟರ್ ಪೆಟ್ರೋಲ್ ಮತ್ತು ಡೀಸೆಲ್ ಮೇಲೆ 2 ರೂ. ಅಬಕಾರಿ ಸುಂಕವನ್ನು ಏರಿಕೆ ಮಾಡಿದೆ. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ದರ ಇಳಿಕೆಯಾದ ಬೆನ್ನಲ್ಲೇ ಕೇಂದ್ರ ಸರ್ಕಾರ ಅಬಕಾರಿ ಸುಂಕವನ್ನು ಏರಿಕೆ ಮಾಡುವ ನಿರ್ಧಾರ ಕೈಗೊಂಡಿದೆ. ಡೊನಾಲ್ಡ್ ಟ್ರಂಪ್ ಆರಂಭಿಸಿದ ತೆರಿಗೆ ಸಮರದಿಂದ ಷೇರು ಮಾರುಕಟ್ಟೆಯಲ್ಲಿ ರಕ್ತಪಾತವಾಗುತ್ತಿದ್ದಂತೆ ಇನ್ನೊಂದು ಕಡೆ ಕಚ್ಚಾತೈಲ ದರ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಭಾರೀ ಇಳಿಕೆ ಕಂಡಿದೆ. ಟ್ರಂಪ್ ಸರ್ಕಾರ ತೆರಿಗೆ ಸಮರ ಘೋಷಿಸಿದ ಒಂದು ವಾರದಲ್ಲಿ ಕಚ್ಚಾತೈಲ ದರ ಒಂದು ಬ್ಯಾರಲ್ (159 ಲೀಟರ್) ಬೆಲೆ ಸುಮಾರು 10 ಡಾಲರ್(ಅಂದಾಜು 850 ರೂ.) ಇಳಿಕೆಯಾಗಿದೆ. ತೈಲ ಮತ್ತು ಅನಿಲ ವಲಯವನ್ನು ಈ ಸುಂಕಗಳಿಂದ ವಿನಾಯಿತಿ ನೀಡಲಾಗಿದ್ದರೂ, ಹಣದುಬ್ಬರದ ಕಳವಳ, ಆರ್ಥಿಕ ಹಿಂಜರಿತ ಭೀತಿ, ನಿಧಾನ ಆರ್ಥಿಕ ಬೆಳವಣಿಗೆ ಮತ್ತು ವ್ಯಾಪಾರ ವಿವಾದಗಳು ತೀವ್ರಗೊಂಡಿರುವುದರಿಂದ ಬೆಲೆ ಇಳಿಕೆಯಾಗಿದೆ. ಈ ಮೂಲಕ ಮೂರು ವರ್ಷಗಳಲ್ಲಿ ಅತ್ಯಂತ ಕಡಿಮೆ ಮಟ್ಟವನ್ನು ತಲುಪಿವೆ. ಬ್ಯಾರೆಲ್‌ಗೆ 72.94 ಡಾಲರ್‌ನಲ್ಲಿ (ಅಂದಾಜು 6,250 ರೂ.) ವಹಿವಾಟು ನಡೆಸುತ್ತಿದ್ದ ಬ್ರೆಂಟ್ ಕಚ್ಚಾ ತೈಲವು ದರ ಈಗ 62.91 ಡಾಲರ್‌ಗೆ (ಅಂದಾಜು 5,390 ರೂ.) ವೆಸ್ಟ್ ಟೆಕ್ಸಾಸ್ ಇಂಟರ್‌ಮೀಡಿಯೇಟ್ (WTI) ಕಚ್ಚಾ ತೈಲವು ಬ್ಯಾರೆಲ್ ದರ 7% ಇಳಿಕೆಯಾಗಿ 59.34 ಡಾಲರ್ (ಅಂದಾಜು 5,090 ರೂ.)ತಲುಪಿದೆ. ಪೆಟ್ರೋಲಿಯಂ ರಫ್ತು ಮಾಡುವ ದೇಶಗಳ ಸಂಘಟನೆ (OPEC+) ಉತ್ಪಾದನೆಯನ್ನು ಹೆಚ್ಚಿಸುವ ಯೋಜನೆಗಳನ್ನು ಘೋಷಿಸಿದೆ. ಮೇ ತಿಂಗಳಲ್ಲಿ ದಿನಕ್ಕೆ 4,11,000 ಬ್ಯಾರಲ್‌ಗಳನ್ನು (bpd) ತೈಲ ಉತ್ಪಾದನೆ ಮಾಡಲು ಮುಂದಾಗಿದೆ. ಈ ಹಿಂದೆ ನಿರ್ಧರಿಸಲಾಗಿದ್ದ 1,35,000 ಬಿಪಿಡಿಯಿಂದ ಹೆಚ್ಚು ಉತ್ಪಾದನೆ ಮಾಡುವ ನಿರ್ಧಾರ ಕೈಗೊಂಡಿದ್ದು ಇದು ತೈಲಬೆಲೆ ಕುಸಿಯಲು ಕಾರಣವಾಗಿದೆ.

# ಎಲ್‌ಪಿಜಿ ಸಿಲಿಂಡರ್ ಬೆಲೆ 50 ರೂ. ಹೆಚ್ಚಳ




ನವದೆಹಲಿ, ಏ.7: ಪೆಟ್ರೋಲ್, ಡೀಸೆಲ್ ಮೇಲಿನ ಅಬಕಾರಿ ಸುಂಕ 2 ರೂ. ಏರಿಕೆ ಬಳಿಕ ಎಲ್ಪಿಜಿ ಸಿಲಿಂಡರ್ ಬೆಲೆ 50 ರೂ. ಹೆಚ್ಚಿಸುವುದಾಗಿ ಕೇಂದ್ರ ಸರ್ಕಾರ ಘೋಷಣೆ ಮಾಡಿದೆ. ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರದೀಪ್ ಸಿಂಗ್ ಪುರಿ ಈ ಕುರಿತು ಹೇಳಿಕೆ ನೀಡಿದ್ದಾರೆ. ಅನಿಲ ಕಂಪನಿಗಳು ಸಿಲಿಂಡರ್ ಬೆಲೆ ಹೆಚ್ಚಿಸುವುದಾಗಿ ತಿಳಿಸಿವೆ, ಹೀಗಾಗಿ ಪ್ರತಿ ಎಲ್ಪಿಜಿ ಸಿಲಿಂಡರ್ ಬೆಲೆ 50 ರೂ. ಹೆಚ್ಚಳವಾಗಲಿದೆ. ಉಜ್ವಲ (ಪಿಎಂಯುವೈ) ಮತ್ತು ಉಜ್ವಲೇತರ ಗ್ರಾಹಕರಿಗೂ ಬೆಲೆ ಏರಿಕೆ ಅನ್ವಯವಾಗಲಿದೆ. ಆದ್ದರಿಂದ ಇನ್ಮುಂದೆ ಉಜ್ವಲ ಯೋಜನೆಯ 503 ರೂ. ಪಾವತಿಸುತ್ತಿದ್ದ 14.2 ಕೆಜಿ ಸಿಲಿಂಡರ್‌ಗೆ 553 ರೂ. ಹಾಗೂ ಇತರೇ ಗ್ರಾಹಕರು 803 ರೂ. ಪಾವತಿಸುತ್ತಿದ್ದ 14.2 ಕೆಜಿ ಸಿಲಿಂಡರ್‌ಗೆ 853 ರೂ. ಪಾವತಿಸಬೇಕಾಗುತ್ತದೆ ಎಂದು ಕೇಂದ್ರ ಸಚಿವರು ವಿವರಿಸಿದ್ದಾರೆ.

# ವಕ್ಫ್ ಕಾಯ್ದೆ ವಿರುದ್ಧ ಸುಪ್ರೀಂ ಕೋರ್ಟ್ ಅರ್ಜಿ ವಿಚಾರಣೆ

ನವದೆಹಲಿ, ಏ.7: ಇತ್ತೀಚೆಗೆ ರಾಷ್ಟ್ರಪತಿಗಳ ಅನುಮೋದನೆ ಪಡೆದ ವಿವಾದಾತ್ಮಕ ವಕ್ಫ್ (ತಿದ್ದುಪಡಿ) ಕಾಯ್ದೆ 2025 ರ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸುವ ಹಲವಾರು ಅರ್ಜಿಗಳನ್ನು ವಿಚಾರಣೆ ಮಾಡಲು ಸುಪ್ರೀಂ ಕೋರ್ಟ್ ಒಪ್ಪಿಕೊಂಡಿದೆ. ಕಳೆದ ವಾರ ಸಂಸತ್ತು ಅಂಗೀಕರಿಸಿದ ಈ ಕಾಯ್ದೆಯು ಕೆಲವು ರಾಜಕೀಯ ವಲಯಗಳು, ಕೆಲವು ಧಾರ್ಮಿಕ ಸಂಸ್ಥೆಗಳು ಮತ್ತು ಕೆಲವು ನಾಗರಿಕ ಹಕ್ಕುಗಳ ಗುಂಪುಗಳಿಂದ ಭಾರಿ ಟೀಕೆಗೆ ಗುರಿಯಾಗಿದೆ. ಆರ್ಟಿಕಲ್ 32 ರ ಅಡಿಯಲ್ಲಿ ಹಲವಾರು ರಿಟ್ ಅರ್ಜಿಗಳನ್ನು ಸಲ್ಲಿಸಲಾಗಿದೆ, ಅರ್ಜಿದಾರರು ಹೊಸ ಕಾನೂನಿನಲ್ಲಿರುವ ನಿಬಂಧನೆಗಳು ಸಾಂವಿಧಾನಿಕ ಖಾತರಿಗಳಿಗೆ ವಿರುದ್ಧವಾಗಿವೆ ಮತ್ತು ಅಲ್ಪಸಂಖ್ಯಾತ ಸ್ವಾಯತ್ತತೆಯನ್ನು ಉಲ್ಲಂಘಿಸುತ್ತವೆ ಎಂದು ವಾದಿಸಿದ್ದಾರೆ.

ಮುಸ್ಲಿಮರಲ್ಲಿ ಒಂದು ದೊಡ್ಡ ಭಾಗವು ಹೊಸ ಕಾನೂನು 25, 26 ಮತ್ತು 29 ನೇ ವಿಧಿಗಳ ಅಡಿಯಲ್ಲಿ ರಕ್ಷಿಸಲ್ಪಟ್ಟ ತಮ್ಮ ಧಾರ್ಮಿಕ ಮತ್ತು ದತ್ತಿ ಸಂಸ್ಥೆಗಳನ್ನು ಸ್ವತಂತ್ರವಾಗಿ ನಿರ್ವಹಿಸುವ ಸಮುದಾಯದ ಹಕ್ಕುಗಳನ್ನು ಉಲ್ಲಂಘಿಸುತ್ತದೆ ಎಂದು ಭಾವಿಸುತ್ತಾರೆ. ಜಿಲ್ಲಾಧಿಕಾರಿಗೆ ನೀಡಲಾದ ಪಾತ್ರವು ಧಾರ್ಮಿಕ ದತ್ತಿಗಳ ಮೇಲೆ ಅನಿಯಂತ್ರಿತ ಕಾರ್ಯನಿರ್ವಾಹಕ ನಿಯಂತ್ರಣವನ್ನು ಅನುಮತಿಸುತ್ತದೆ ಮತ್ತು ಕಾರ್ಯನಿರ್ವಾಹಕ ಅತಿಕ್ರಮಣವಾಗಿದೆ ಎಂದು ಅರ್ಜಿದಾರರು ವಾದಿಸುತ್ತಾರೆ. ಈ ಅರ್ಜಿಗಳು 14ನೇ ವಿಧಿ (ಕಾನೂನಿನ ಮುಂದೆ ಸಮಾನತೆ) ಮತ್ತು 300A (ಆಸ್ತಿಯ ಹಕ್ಕು) ಉಲ್ಲಂಘನೆಯನ್ನು ಸಹ ಉಲ್ಲೇಖಿಸುತ್ತವೆ, ಕಾನೂನು ಕಾನೂನು ರಕ್ಷಣೆಗಳನ್ನು ದುರ್ಬಲಗೊಳಿಸುತ್ತದೆ ಮತ್ತು ಮೂಲಭೂತ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ಹೇಳುತ್ತದೆ.

ರಾಜಕೀಯ ವ್ಯಕ್ತಿಗಳು, ಸಂಘಟನೆಗಳು ಮತ್ತು ಧಾರ್ಮಿಕ ನಾಯಕರ ವೈವಿಧ್ಯಮಯ ಗುಂಪು ಈ ಸವಾಲನ್ನು ಎತ್ತಿದೆ: ಸಂಸತ್ ಸದಸ್ಯ (ಕಾಂಗ್ರೆಸ್), AIMIM ಅಧ್ಯಕ್ಷ ಅಸಾದುದ್ದೀನ್ ಓವೈಸಿ, ಶಾಸಕ (AAP), ನಾಗರಿಕ ಹಕ್ಕುಗಳ ರಕ್ಷಣಾ ಸಂಘ (APCR), NGO, ಜಮಿಯತ್ ಉಲೇಮಾ–ಇ–ಹಿಂದ್ ಮತ್ತು ಕೇರಳದ ಪ್ರಮುಖ ಮುಸ್ಲಿಂ ಧಾರ್ಮಿಕ ಸಂಸ್ಥೆಯಾದ ಸಮಸ್ತ ಕೇರಳ ಜಮಿಯತ್ ಉಲೇಮಾ ಮತ್ತು ಸಮಸ್ತ ಕೇರಳ ಜಮಿಯತ್ ಉಲೇಮಾದ ಅಧ್ಯಕ್ಷ ಮೌಲಾನಾ ಅರ್ಷದ್ ಮದನಿ.

ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ನೇತೃತ್ವದ ಪೀಠದ ಮುಂದೆ ಅರ್ಜಿಗಳನ್ನು ಉಲ್ಲೇಖಿಸಲಾಯಿತು ಮತ್ತು ಹಿರಿಯ ವಕೀಲ ಕಪಿಲ್ ಸಿಬಲ್ ಅವರ ಉಲ್ಲೇಖದ ನಂತರ ನ್ಯಾಯಾಲಯವು ಅವುಗಳನ್ನು ವಿಚಾರಣೆಗೆ ಪಟ್ಟಿ ಮಾಡಲು ಒಪ್ಪಿಕೊಂಡಿತು.

# ಬೆಲೆ ಹೆಚ್ಚಳ: ಕೇಂದ್ರದ ನಿರ್ಧಾರ, ಬಿಜೆಪಿ ಜನಾಕ್ರೋಶ ವಿರುದ್ಧ ಸಿಎಂ ವಾಗ್ದಾಳಿ

ಬೆಂಗಳೂರು, ಏ.7: ಪ್ರಧಾನಿ ನರೇಂದ್ರ ಮೋದಿಯವರು ಪೆಟ್ರೋಲ್, ಡೀಸೆಲ್ ಮತ್ತು ಅಡುಗೆ ಅನಿಲದ ಬೆಲೆಯನ್ನು ಹೆಚ್ಚಿಸುವ ಮೂಲಕ ಜನಾಕ್ರೋಶ ಯಾತ್ರೆ ಎಂಬ ಪ್ರಹಸನವನ್ನು ಶುರುಮಾಡಿರುವ ರಾಜ್ಯದ ಬಿಜೆಪಿ ನಾಯಕರಿಗೆ ಮುಟ್ಟಿ ನೋಡಿಕೊಳ್ಳುವಂತೆ ಸಿಎಂ ಸಿದ್ದರಾಮಯ್ಯ ಕಪಾಳಮೋಕ್ಷ ಮಾಡಿದ್ದಾರೆ. ಬೆಲೆ ಏರಿಕೆಗೆ ಕೇಂದ್ರ ಸರ್ಕಾರದ ಜನವಿರೋಧಿ ಆರ್ಥಿಕ ನೀತಿಯೇ ಕಾರಣ ಎಂದು ನಾವು ಹೇಳುತ್ತಲೇ ಬಂದಿರುವ ಸತ್ಯವನ್ನು ಪ್ರಧಾನಿ ನರೇಂದ್ರ ಮೋದಿಯವರೇ ದೇಶದ ಜನರ ಮುಂದೆ ಬಿಚ್ಚಿಟ್ಟು ಒಪ್ಪಿಕೊಂಡಿದ್ದಾರೆ.

ಈಗ ಕೇಂದ್ರ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ತೆರಿಗೆಯನ್ನು ಎರಡು ರೂಪಾಯಿಗಳಷ್ಟು ಮತ್ತು ಅಡುಗೆ ಅನಿಲ ಸಿಲಿಂಡರ್ ಬೆಲೆಯನ್ನು 50 ರೂಪಾಯಿಯಷ್ಟು ಏರಿಕೆ ಮಾಡಿರುವ ಬಗ್ಗೆ ರಾಜ್ಯದ ಬಿಜೆಪಿ ನಾಯಕರ ಪ್ರತಿಕ್ರಿಯೆ ಏನು ಎಂಬುದನ್ನು ನಾನು ತಿಳಿದುಕೊಳ್ಳಬಯಸುತ್ತೇನೆ.

ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಇಳಿಯುತ್ತಿದ್ದರೂ ಕೇಂದ್ರ ಸರ್ಕಾರ ಪೆಟ್ರೋಲಿಯಂ ಉತ್ಪನ್ನಗಳ ಬೆಲೆಯನ್ನು ಒಂದೇ ಸಮನೆ ಏರಿಸುತ್ತಾ ಹೋಗಲು ಕಾರಣ ಏನು ಎಂಬುದನ್ನು ಬಿಜೆಪಿ ನಾಯಕರು ರಾಜ್ಯದ ಜನರಿಗೆ ತಿಳಿಸಬೇಕು.

ಅಕ್ಕಿ, ಬೇಳೆ, ಮೀನು, ಮಾಂಸ, ತರಕಾರಿಯಿಂದ ಹಿಡಿದು ಹೋಟೆಲ್ ತಿಂಡಿ ವರೆಗೆ ಎಲ್ಲದರ ಬೆಲೆ ಏರಿಕೆಗೆ ಮೂಲ ಕಾರಣ ಪೆಟ್ರೋಲ್, ಡೀಸೆಲ್ ಮತ್ತು ಅಡುಗೆ ಅನಿಲದ ಬೆಲೆಯನ್ನು ಹೆಚ್ಚಿಸುತ್ತಲೇ ಇರುವ ಕೇಂದ್ರ ಸರ್ಕಾರದ ಜನವಿರೋಧೀ ನೀತಿ ಎನ್ನುವುದು ಆರ್ಥಿಕ ವ್ಯವಹಾರದ ಸಾಮಾನ್ಯ ಜ್ಞಾನ ಇದ್ದವರಿಗೆಲ್ಲ ಗೊತ್ತು. ಹೀಗಿದ್ದರೂ ಬೆಲೆ ಏರಿಕೆಯ ಪಾಪದ ಹೊರೆಯನ್ನು ನಮ್ಮ ತಲೆ ಮೇಲೆ ಕಟ್ಟಲು ಹೊರಟಿರುವ ಬಿಜೆಪಿ ನಾಯಕರ ಮುಖಕ್ಕೆ ಪ್ರಧಾನಿ ಮೋದಿಯವರೇ ಮಸಿ ಬಳಿದಿದ್ದಾರೆ. ಜನಾಕ್ರೋಶ ಯಾತ್ರೆ ಹೊರಟವರ ಮುಂದೆ ಈಗ ಇರುವುದು ಎರಡೇ ಎರಡು ಆಯ್ಕೆ: ಒಂದೋ ಅವರು ಪ್ರಧಾನ ಮಂತ್ರಿಯವರ ಮೇಲೆ ಒತ್ತಡ ಹೇರಿ ಕೇಂದ್ರ ಹೆಚ್ಚಿಸಿರುವ ಬೆಲೆಯನ್ನು ಇಳಿಸುವಂತೆ ಮಾಡಬೇಕು, ಇಲ್ಲವೇ ಯಾತ್ರೆಯನ್ನು ಕೊನೆಗೊಳಿಸಿ ಗಂಟುಮೂಟೆ ಕಟ್ಟಿಕೊಂಡು ಮನೆಗೆ ಮರಳಬೇಕು. ಇದರ ಹೊರತಾಗಿ ಈ ಯಾತ್ರೆಯ ಪ್ರಹಸನವನ್ನು ಮುಂದುವರಿಸಿದರೆ ಜನರ ಆಕ್ರೋಶಕ್ಕೆ ತುತ್ತಾಗುವುದು ಖಂಡಿತ ಎಂದು ಎಚ್ಚರಿಕೆ ಕೊಟ್ಟಿದ್ದಾರೆ.

### ತರಾತುರಿಯ ಪ್ರತಿಕ್ರಿಯೆ:

ಕೇಂದ್ರ ಸರಕಾರವು ಪೆಟ್ರೋಲ್, ಡೀಸೆಲ್ ಮೇಲೆ ಸುಂಕ ಏರಿಸಿದ್ದಕ್ಕೆ ರಾಜ್ಯ ಸರಕಾರ ಕೂಡಲೇ ತರಾತುರಿಯ ಪ್ರತಿಕ್ರಿಯೆ ನೀಡಿದೆ. ಈ 2 ರೂಪಾಯಿಯನ್ನು ಸರಕಾರಿ ಕಂಪೆನಿಗಳು ಅರ್ಥಾತ್ ಭಾರತ ಸರಕಾರವು ಅದನ್ನು ಭರಿಸಲಿದೆ. ಆ 2 ರೂ.ಗಳನ್ನು ನಾವು ಗ್ರಾಹಕರಿಗೆ ವರ್ಗಾವಣೆ ಮಾಡುತ್ತಿಲ್ಲ ಎಂದು ತಿಳಿಸಿದರು. ಹೆಚ್ಚಿಸಿದ ತೆರಿಗೆಯಿಂದ ರಾಜ್ಯ ಸರಕಾರಕ್ಕೂ ಪಾಲು ಸಿಗಲಿದೆ. ಇವರಿಗೂ ಒಂದು ರೂ. ಬರಲಿದೆ ಎಂದರು.

# ಮೇ 1 ರಂದು ಪೌರ ಕಾರ್ಮಿಕರ ಸೇವೆ ಕಾಯಂ: ಮುಖ್ಯಮಂತ್ರಿ ಮಹತ್ವದ ಘೋಷಣೆ

- ಸರ್ಕಾರದ ಮುಖ್ಯ ಕಾರ್ಯದರ್ಶಿ ಆಗಲಿ, ಪೌರ ಕಾರ್ಮಿಕರಾಗಲಿ ಯಾವುದೇ ವ್ಯತ್ಯಾಸವಿಲ್ಲ. ಎಲ್ಲ ಸೇವೆಗಳೂ ಪವಿತ್ರವೇ: ಸಿಎಂ
- ಪೌರ ಕಾರ್ಮಿಕ ಸಮುದಾಯವೂ ವಿಶ್ವಪ್ರಜ್ಞೆ ಬೆಳೆಸಿಕೊಳ್ಳಬೇಕು: ಸಿಎಂ ಕರೆ




ಬೆಂಗಳೂರು ಏ 7: ಮೇ 1 ರ ಕಾರ್ಮಿಕ ದಿನಾಚರಣೆಯಂದು ಪೌರ ಕಾರ್ಮಿಕರ ಸೇವೆ ಕಾಯಂ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಹತ್ವದ ಘೋಷಣೆ ಮಾಡಿದರು. ಅರಮನೆ ಮೈದಾನದಲ್ಲಿ ನಡೆದ ಪೌರಕಾರ್ಮಿಕರ ಮಹಾಸಂಘದ 25 ನೇ ವಾರ್ಷಿಕೋತ್ಸವ ಮತ್ತು ಪೌರ ಕಾರ್ಮಿಕ ಸಮುದಾಯದ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಬಸವಣ್ಣನವರ ವಚನದಂತೆ ಕಾಯಕವೇ ಕೈಲಾಸ ಎಂದು ಶ್ರಮಿಸುತ್ತಿದ್ದೀರಿ. ಪೌರಕಾರ್ಮಿಕರು ಮಾಡುವ ಕೆಲಸಕ್ಕೆ ಇತರರು ಬರುವುದು ಕಡಿಮೆ. ಹೀಗಾಗಿ ನಿಮ್ಮ ಸಮಸ್ಯೆಗಳನ್ನು ಬಗೆಹರಿಸಿ, ಬೇಡಿಕೆಗಳನ್ನು ಈಡೇರಿಸುವುದು ಸರ್ಕಾರದ ಜವಾಬ್ದಾರಿ ಮತ್ತು ಕರ್ತವ್ಯ ಎಂದರು. ಸರ್ಕಾರದ ಮುಖ್ಯ ಕಾರ್ಯದರ್ಶಿ ಆಗಲಿ, ಪೌರಕಾರ್ಮಿಕರಾಗಲಿ ಯಾವುದೇ ವ್ಯತ್ಯಾಸವಿಲ್ಲ. ಎಲ್ಲ ಸೇವಗಳೂ ಪವಿತ್ರವೇ. ನಿಮ್ಮನ್ನು ಅವಮಾನಕಾರಿಯಾಗಿ ನಡೆಸಿಕೊಳ್ಳುವುದು ಸರಿಯಲ್ಲ. ನಿಮಗೂ ವೃತ್ತಿಗೌರವ, ಘನತೆ ಸಿಗಬೇಕು. ಇದಕ್ಕಾಗಿ ಸೇವೆ ಕಾಯಂ ಮಾಡಲಾಗುವುದು ಎಂದರು.

**ವಾಹನ ಚಾಲಕರಿಗೂ ಕಾಯಂ:**

ಪೌರ ಕಾರ್ಮಿಕರ ಜೊತೆಗೆ ವಾಹನ ಚಾಲಕರ ಸೇವೆಯನ್ನೂ ಗುತ್ತಿಗೆಯಿಂದ ತೆಗೆದು ಕಾಯಂಮಾಡಲಾಗುವುದು ಎಂದು ಮುಖ್ಯಮಂತ್ರಿ ಘೋಷಿಸಿದರು. ಪೌರಕಾರ್ಮಿಕರ ಮಕ್ಕಳು ವಿದ್ಯಾವಂತರಾಗಬೇಕು. ವಿದ್ಯಾವಂತರಾದರೆ ಮಾತ್ರ ಸ್ವಾಭಿಮಾನಿಗಳಾಗಲು ಸಾಧ್ಯ. ಮಕ್ಕಳಿಗೆಲ್ಲಾ ಶಿಕ್ಷಣ ಕೊಡಿಸಿ. ಪ್ರತಿಯೊಬ್ಬರೂ ಪ್ರತಿಭಾವಂತರೇ. ಅವಕಾಶ ಸಿಗುವುದಷ್ಟೆ ಮುಖ್ಯ. ಅವಕಾಶ ಸಿಕ್ಕರೆ ಎಲ್ಲರೊಳಗಿನ ಪ್ರತಿಭೆ ಹೊರಗೆ ಬರುತ್ತದೆ ಎಂದರು.

**ನಗದುರಹಿತ ಆರೋಗ್ಯ ಕಾರ್ಡ್:**

ಪೌರ ಕಾರ್ಮಿಕ ಸಮುದಾಯಕ್ಕೆ ನಗದು ರಹಿತ ಆರೋಗ್ಯ ಕಾರ್ಡ್ ನೀಡಲಾಗುವುದು. ಕಾರ್ಮಿಕರ ಸಿಂಧುತ್ವದ ಸಮಸ್ಯೆ ಬಗೆಹರಿಸಲಾಗುವುದು ಎಂದು ಇದೇ ಸಂದರ್ಭದಲ್ಲಿ ಸಿಎಂ ಭರವಸೆ ನೀಡಿದರು.

**ನಾರಾಯಣ್ ಕೊಡುಗೆ ದೊಡ್ಡದು: ಸಿಎಂ**

ಪೌರ ಕಾರ್ಮಿಕರ ಸಂಘಟನೆ ಮತ್ತು ಹೋರಾಟದಲ್ಲಿ ನಾರಾಯಣ್ ಅವರ ಪಾತ್ರ ದೊಡ್ಡದಿದೆ. ಪೌರಕಾರ್ಮಿಕ ಸಮುದಾಯದಿಂದ ಒಂದು ಮೇಯರ್ ಆದವರಲ್ಲಿ ನಾರಾಯಣ್ ಅವರು ಮೊದಲಿಗರು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ನಾರಾಯಣ್ ಅವರು ಸರ್ಕಾರದ ಮುಂದೆ ಇಟ್ಟ ಪೌರಕಾರ್ಮಿಕರ ಸಮಸ್ಯೆಗಳಲ್ಲಿ ಹಲವನ್ನು ನಮ್ಮ ಸರ್ಕಾರ ಬಗೆಹರಿಸಿದೆ. ಪೌರ ಕಾರ್ಮಿಕರ ಗುತ್ತಿಗೆ ಪದ್ಧತಿಯನ್ನು ರದ್ದುಪಡಿಸಿ ಪಾಲಿಕೆಗಳಿಂದಲೇ ಸಂಬಳ ಪಾವತಿಸುವ ವ್ಯವಸ್ಥೆ ಜಾರಿಗೆ ಮಾಡಿದ್ದು ನಮ್ಮ ಸರ್ಕಾರ. ಮೈಸೂರಿನಲ್ಲಿ 524 ಮನೆಗಳನ್ನು ಕೊಡಿಸುವಲ್ಲಿ, ಪೌರಕಾರ್ಮಿಕರಿಗೆ ಗೃಹ ಭಾಗ್ಯ ಕಲ್ಪಿಸಿ ಒಂದು ಮನೆಗೆ 6.5 ಲಕ್ಷ ರೂಪಾಯಿ ಕೊಡ್ತಾ ಇರುವುದು ನಮ್ಮ ಸರ್ಕಾರ ಮಾತ್ರ ಎಂದರು. ಪೌರಕಾರ್ಮಿಕರ ಸಂಬಳವನ್ನು 7 ಸಾವಿರದಿಂದ 17 ಸಾವಿರಕ್ಕೆ ಏರಿಸಿದ್ದು ಇದೇ ಸಿದ್ದರಾಮಯ್ಯ ಎಂದರು. ನೀವೆಲ್ಲಾ ಈಗ ಕಷ್ಟಪಟ್ಟು ಶುಚಿತ್ವದ ಕೆಲಸ ಮಾಡುತ್ತಿದ್ದೀರಿ. ನಿಮ್ಮ ಮಕ್ಕಳೂ ಇದೇ ಕೆಲಸ ಮಾಡಬಾರದು.

ನಿಮ್ಮ ಮಕ್ಕಳು ಇತರೆ ಕೆಲಸಗಳಿಗೆ ಹೋಗಬೇಕು. ಆ ರೀತಿ ನೀವು ಬೆಳೆಯಬೇಕು. ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದರು. ಪ್ರತಿವರ್ಷ ಒಂದು ಸಾವಿರ ಪೌರಕಾರ್ಮಿಕರನ್ನು ವಿದೇಶ ಪ್ರವಾಸಕ್ಕೆ ಕಳುಹಿಸಲಾಗುತ್ತಿದೆ. ಪೌರಕಾರ್ಮಿಕ ಸಮುದಾಯವೂ ವಿಶ್ವಪ್ರಜ್ಞೆ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

# ಷೇರು ಮಾರುಕಟ್ಟೆಯಲ್ಲಿ ಅಲ್ಲೋಲ ಕಲ್ಲೋಲ ಕರಗಿತು ಹೂಡಿಕೆದಾರರ 19 ಲಕ್ಷ ಕೋಟಿ



ಮುಂಬೈ/ ವಾಷಿಂಗ್ಟನ್, ಏ.7: ಅಮೆ ರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆರಂಭಿಸಿದ ತೆರಿಗೆ ಸಮರದಿಂದ ಷೇರು ಮಾರುಕಟ್ಟೆಯಲ್ಲಿ ರಕ್ತಪಾತವಾಗಿದ್ದು, ಇಂದು ಒಂದೇ ದಿನ ಹೂಡಿಕೆದಾರರಿಗೆ 19 ಲಕ್ಷ ಕೋಟಿ ರೂ. ನಷ್ಟವಾಗಿದೆ.

ವಿದೇಶಿ ಸಾಂಸ್ಥಿಕ ಹೂಡಿಕೆದಾರರು ಭಾರೀ ಪ್ರಮಾಣದಲ್ಲಿ ಹೂಡಿಕೆಯನ್ನು ಹಿಂದಕ್ಕೆ ಪಡೆದ ಕಾರಣ ಬಾಂಬೆ ಷೇರು ಮಾರುಕಟ್ಟೆ ಸಂವೇದಿ ಸೂಚಂಕ್ಯ ಸೆನ್ಸೆಕ್ಸ್ ಮತ್ತು ರಾಷ್ಟ್ರೀಯ ಷೇರು ಮಾರುಕಟ್ಟೆ ಸೂಚಂಕ್ಯ ನಿಫ್ಟಿ ಭಾರೀ ಇಳಿಕೆ ಕಂಡಿದೆ. ಸೆನ್ಸೆಕ್ಸ್ ಆರಂಭದಲ್ಲಿ 4 ಸಾವಿರ ಅಂಕ ಪತನಗೊಂಡು ನಂತರ ಚೇತರಿಕೆ ಕಂಡಿತ್ತು. ಬೆಳಗ್ಗೆ 11 ಗಂಟೆಯ ವೇಳೆಗೆ 2,900 ಅಂಕ ಚೇತರಿಕೆಯಾಗಿ 72,423.48 ರಲ್ಲಿ ವ್ಯವಹಾರ ನಡೆಸುತ್ತಿತ್ತು. ನಿಫ್ಟಿ 900 ಅಂಕ ಇಳಿಕೆಯಾಗಿ 21,960.80 ರಲ್ಲಿ ವ್ಯವಹಾರ ನಡೆಸುತ್ತಿದೆ. ರಿಯಾಲ್ಟಿ, ಐಟಿ, ಆಟೋ ಮತ್ತು ಲೋಹ ಮುಂತಾದ ಕ್ಷೇತ್ರಗಳ ಷೇರುಗಳು ಮೌಲ್ಯ ಇಳಿಕೆಯಾಗಿದೆ. ಸೋಮವಾರ ಬೆಳಿಗ್ಗೆ ವಹಿವಾಟು ಆರಂಭವಾಗುತ್ತಿದ್ದಂತೆಯೇ ಏಷ್ಯಾದ ಎಲ್ಲ ಮಾರುಕಟ್ಟೆಗಳಲ್ಲಿ ಭಾರೀ ಇಳಿಕೆಯಾಗಿತ್ತು. ಗಿಫ್ಟ್ ನಿಫ್ಟಿಯೂ ಅಂಕ ಇಳಿಕೆಯಾಗುತ್ತಿದ್ದಂತೆ ಭಾರತದಲ್ಲೂ ಪರಿಣಾಮ ಬೀಳುವುದು ಖಚಿತವಾಗಿತ್ತು. ಬೆಳಗ್ಗೆಯವರೆಗೆ 19 ಲಕ್ಷ ಕೋಟಿ ನಷ್ಟ ಸಂಭವಿಸಿದ್ದು ನಿಫ್ಟಿ ಮತ್ತು ಸೆನ್ಸೆಕ್ಸ್ ಮತ್ತಷ್ಟು ಕುಸಿದರೆ ನಷ್ಟದ ಪ್ರಮಾಣ ಮತ್ತಷ್ಟು ಏರಿಕೆಯಾಗಲಿದೆ. ಗಿಫ್ಟಿ ನಿಫ್ಟಿ 888, ಜಪಾನ್‌ನ ನಿಕ್ಕಿ 225 2,302 ಅಂಕ, ತೈವಾನ್‌ನ ವೈಯ್ಟೆಡ್ ಸೂಚ್ಯಂಕವೂ 2063 ಅಂಶ ಕುಸಿಯಿತು. ಹಾಂಕಾಂಗ್‌ನ ಹ್ಯಾಂಗ್ಸೆನ್ 2,677 ಅಂಕ ಕುಸಿದಿದೆ. ಶುಕ್ರವಾರದಿಂದಲೇ ಅಮೆರಿಕ ಮಾಧ್ಯಮಗಳು Black Monday ಹೆಸರಿನಲ್ಲಿ ಸೋಮವಾರ ಷೇರು ಮಾರುಕಟ್ಟೆಯಲ್ಲಿ ದೊಡ್ಡ ಮಟ್ಟದಲ್ಲಿ ಇಳಿಕೆಯಾಗಲಿದೆ ಎಂದು ವರದಿಗಳು ಬಿತ್ತರಿಸುತ್ತಿದ್ದವು.

ನಿರೀಕ್ಷೆಯಂತೆ ಸೋಮವಾರ ವಿಶ್ವದ ಮಾರುಕಟ್ಟೆಯಲ್ಲಿ ರಕ್ತಪಾತವಾಗಿದ್ದು ಹೂಡಿಕೆದಾರರಿಗೆ ಭಾರಿ ನಷ್ಟವಾಗಿದೆ.

### ಭಾರತದ ಷೇರು ಮಾರುಕಟ್ಟೆಯ ಇತಿಹಾಸದ ಕೆಲವು ಪ್ರಮುಖ ಕುಸಿತಗಳು:

* ಹರ್ಷದ್ ಮೆಹತಾ ಹಗರಣ (1992): ಏಪ್ರಿಲ್ 28, 1992ರಂದು ಸೆನ್ಸೆಕ್ಸ್ 570 ಅಂಶಗಳು ಅಥವಾ ಶೇ.12.77ರಷ್ಟು ಕುಸಿತ ಕಂಡಿತು.
* ಚುನಾವಣಾ ಆಘಾತ (2004): ಮೇ 17, 2004ರಂದು ಯುಪಿಎ ಅನಿರೀಕ್ಷಿತ ಗೆಲುವಿನ ನಂತರ ಸೆನ್ಸೆಕ್ಸ್ ಶೇ.11.1ರಷ್ಟು ಇಳಿಕೆ ಕಂಡಿತು.
* ಜಾಗತಿಕ ಹಣಕಾಸು ಬಿಕ್ಕಟ್ಟು (2008): ಜನವರಿ 21, 2008ರಂದು ಸೆನ್ಸೆಕ್ಸ್ 1,408 ಅಂಶಗಳು ಅಥವಾ ಶೇ.7.4ರಷ್ಟು ಕುಸಿತಗೊಂಡಿತು.
* ಕೋವಿಡ್–19 ಸಾಂಕ್ರಾಮಿಕ (2020): ಮಾರ್ಚ್ 23, 2020ರಂದು ಸೆನ್ಸೆಕ್ಸ್ 3,935 ಅಂಶಗಳು ಅಥವಾ ಶೇಕಡಾ 13.2ರಷ್ಟು ಕುಸಿತ ಕಂಡಿತು.
* 2025ರ ಷೇರು ಮಾರುಕಟ್ಟೆ ಕುಸಿತ: ಇಂದು, ಏ. 7, 2025ರಂದು, ಸೆನ್ಸೆಕ್ಸ್ 3,939.68 ಅಂಶಗಳಷ್ಟು ಕುಸಿದಿದೆ, ಇದು ಇತ್ತೀಚಿನ ದೊಡ್ಡ ಕುಸಿತಗಳಲ್ಲಿ ಒಂದಾಗಿದೆ.



- ಕಾಂಗ್ರೆಸ್ ನಾಯಕ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸೋಮವಾರ ಬೇಗುಸರಾಯ್‌ನಲ್ಲಿ ತಮ್ಮ ಪಲಾಯನ್ ರೋಕೋ, ನೌಕ್ರಿ ದೋ ಯಾತ್ರೆ ಸಂದರ್ಭದಲ್ಲಿ ಬೆಂಬಲಿಗರೊಂದಿಗೆ

# 2000 ಹೊಸ ಬಸ್ ಖರೀದಿ: ಸಚಿವ ರಾಮಲಿಂಗಾರೆಡ್ಡಿ



ಯಲಬುರ್ಗಾ (ಕೊಪ್ಪಳ ಜಿಲ್ಲೆ), ಏ.7: 'ಜನರ ಅನುಕೂಲಕ್ಕಾಗಿ ರಾಜ್ಯದಲ್ಲಿ ಎರಡು ಸಾವಿರ ಬಸ್‌ಗಳನ್ನು ಖರೀದಿಸಲಾಗುತ್ತಿದ್ದು ಅದರಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಿಗೆ 600ರಿಂದ 700 ಬಸ್‌ಗಳನ್ನು ನೀಡಲಾಗುವುದು' ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದರು. ಸೋಮವಾರ ತಾಲ್ಲೂಕಿನ ಬೇವೂರು ಗ್ರಾಮದಲ್ಲಿ ನೂತನ ಬಸ್ ನಿಲ್ದಾಣದ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿ 'ಕೊಪ್ಪಳ–ಬೆಂಗಳೂರು ಹಾಗೂ ಕೊಪ್ಪಳ–ಬೀದರ ನಡುವೆ ಹವಾ ನಿಯಂತ್ರಿತ ಸ್ಲೀಪರ್ ಬಸ್ ಸೇವೆ ಆರಂಭಿಸಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ' ಎಂದರು.

ಕೊಪ್ಪಳ ತಾಲ್ಲೂಕಿನ ಹುಲಿಗಿಯಲ್ಲಿನ ಅವ್ಯವಸ್ಥೆ ಬಗ್ಗೆ 'ಪ್ರಜಾವಾಣಿ'ಯಲ್ಲಿ ಪ್ರಕಟವಾಗಿದ್ದ ವರದಿ ಗಮನಿಸಿದ ಬಳಿಕ ಹುಲಿಗೆಮ್ಮ ದೇವಸ್ಥಾನಕ್ಕೆ ಒಂದು ವರ್ಷದ ಹಿಂದೆ ಭೇಟಿ ನೀಡಿ ಪ್ರಾಧಿಕಾರ ಮಾಡಲು ತೀರ್ಮಾನಿಸಿದ್ದೇವೆ. ಪ್ರಾಧಿಕಾರ ಮಾಡಲು ಸಂಪುಟ ಸಭೆಯಲ್ಲಿ ಅನುಮೋದನೆಯನ್ನೂ ಪಡೆಯಲಾಗಿದೆ. ಅಲ್ಲಿಗೆ ಪ್ರತಿ ಹುಣ್ಣಿಮೆ ದಿನ ಲಕ್ಷಾಂತರ ಭಕ್ತರು ಭೇಟಿ ನೀಡುತ್ತಾರೆ. ಭಕ್ತರಿಗೆ ಉಳಿದುಕೊಳ್ಳಲು ಅಗತ್ಯ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು.

'ಅಂಜನಾದ್ರಿ ಅಭಿವೃದ್ಧಿಗೆ ಹಿಂದಿನ ಸರ್ಕಾರ 19 ಕೋಟಿ ಅನುದಾನ ನೀಡಿತ್ತು. ನಮ್ಮ ಸರ್ಕಾರ ?100 ಕೋಟಿ ನೀಡಿದ್ದು ಪ್ರವಾಸಿ ಮಂದಿರ, ಶಾಪಿಂಗ್ ಕಾಂಪ್ಲೆಕ್ಸ್, ಪ್ರದಕ್ಷಣಾ ಪಥ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗುತ್ತಿದೆ' ಎಂದು ತಿಳಿಸಿದರು.

# ವಕ್ಫ್ ಕುರಿತು ಚರ್ಚೆಗೆ ಅವಕಾಶ ನಿರಾಕರಣೆ ಜಮ್ಮು–ಕಾಶ್ಮೀರ ವಿಧಾನಸಭೆಯಲ್ಲಿ ಗದ್ದಲ



**ನವದೆಹಲಿ, ಏ.7:** ಸಂಸತ್ತು ಅಂಗೀಕರಿಸಿದ ವಕ್ಫ್ ತಿದ್ದುಪಡಿ ಮಸೂದೆ –2025ರ ಕುರಿತ ಚರ್ಚೆಗೆ ಜಮ್ಮು–ಕಾಶ್ಮೀರ ಸ್ಪೀಕರ್ ಅಬ್ದುಲ್ ರಹೀಮ್ ರಾಥರ್ ಅವರು ಅವಕಾಶ ನಿರಾಕರಿಸಿದ್ದು, ಈ ವಿಷಯವು ಪ್ರಸ್ತುತ ನ್ಯಾಯಾಲಯದಲ್ಲಿದೆ ಎಂದು ಹೇಳಿದ್ದಾರೆ. ಇದರಿಂದ ವಿಧಾನಸಭೆಯಲ್ಲಿ ಭಾರೀ ಗದ್ದಲ ಉಂಟಾಗಿದೆ.

12 ದಿನಗಳ ವಿರಾಮದ ನಂತರ ಸೋಮವಾರ ವಿಧಾನಸಭೆಯಲ್ಲಿ ಕಲಾಪಗಳು ಪುನರಾರಂಭವಾದಾಗ, ನ್ಯಾಷನಲ್ ಕಾನ್ಫರೆನ್ಸ್, ಕಾಂಗ್ರೆಸ್, ಎಐಪಿ ಮತ್ತು ಸ್ವತಂತ್ರರು ಸೇರಿದಂತೆ ಎಲ್ಲಾ ಶಾಸಕರು ವಕ್ಫ್ ತಿದ್ದುಪಡಿ ಮಸೂದೆಯ ಕುರಿತು ಚರ್ಚಿಸಲು 10 ಶಾಸಕರು ಮಂಡಿಸಿರುವ ನಿಲುವಳಿ ಸೂಚನೆಯನ್ನು ಅಂಗೀಕರಿಸಬೇಕೆಂದು ಒತ್ತಾಯಿಸಿದರು.

ಸಂಸತ್ತು ಅಂಗೀಕರಿಸಿದ ವಕ್ಫ್ ತಿದ್ದುಪಡಿ ಮಸೂದೆಯ ಕುರಿತು ಚರ್ಚೆ ನಡೆಸಲು ನಾವು (ಕನಿಷ್ಠ 10–12 ಸದಸ್ಯರು) ನಿಲುವಳಿ ಸೂಚನೆಯನ್ನು ಮಂಡಿಸಿದ್ದೇವೆ. ನಾವು ಸಂಸತ್ತಿನ ಅಧಿಕಾರವನ್ನು ಪ್ರಶ್ನಿಸುತ್ತಿಲ್ಲ. ಆದರೆ, 56ನೇ ವಿಧಿಯ ಅಡಿಯಲ್ಲಿ, ಸಂಸತ್ತು ಅಂಗೀಕರಿಸಲ್ಪಟ್ಟ ವಿಷಯದ ಬಗ್ಗೆ ಮಾತನಾಡಲು ನಮಗೆ ಹಕ್ಕಿದೆ ಎಂದು ನ್ಯಾಷನಲ್ ಕಾನ್ಫರೆನ್ಸ್ ಹಿರಿಯ ನಾಯಕ ಮತ್ತು ಶಾಸಕ ತನ್ವೀರ್ ಸಾದಿಕ್ ಹೇಳಿದರು. ಇದಕ್ಕೆ ಬಿಜೆಪಿ ಸದಸ್ಯರು ವಿರೋಧ ವ್ಯಕ್ತಪಡಿಸಿದರು. ಸಂಸತ್ತು ಅಂಗೀಕರಿಸಿದ ಕಾನೂನುಗಳ ಬಗ್ಗೆ ವಿಧಾನಸಭೆ ಚರ್ಚಿಸಲು ಸಾಧ್ಯವಿಲ್ಲ ಎಂದು ವಾದಿಸಿದರು.

ಬಿಜೆಪಿ ಸದಸ್ಯರ ತೀವ್ರ ವಿರೋಧದ ನಡುವೆಯೂ, ರಾಜಸ್ಥಾನ, ಪಂಜಾಬ್, ಹರಿಯಾಣ ಮತ್ತು ಪಶ್ಚಿಮ ಬಂಗಾಳದ ವಿಧಾನಸಭೆಗಳು ಜಿಎಸ್ಟಿ ಮತ್ತು ಕೃಷಿ ಕಾನೂನುಗಳಂತಹ ಕೇಂದ್ರ ಕಾನೂನುಗಳ ಬಗ್ಗೆ ಈ ಹಿಂದೆ ಚರ್ಚಿಸಿದ್ದವು ಎಂದು ಸಾದಿಕ್ ಹಿಂದಿನ ಉದಾಹರಣೆಗಳನ್ನು ಉಲ್ಲೇಖಿಸಿದರು. ಜಮ್ಮು–ಕಾಶ್ಮೀರ ವಿಧಾನಸಭೆಯಲ್ಲಿ ಕೇಂದ್ರದ ಕಾನೂನುಗಳನ್ನು ಈ ಹಿಂದೆ ಚರ್ಚಿಸಲಾಗಿದೆ ಎಂದು ಸಾದಿಕ್ ಒತ್ತಿ ಹೇಳಿದರು. ಜಮ್ಮು ಕಾಶ್ಮೀರ ಮುಸ್ಲಿಂ ಬಹುಸಂಖ್ಯಾತ ರಾಜ್ಯವಾಗಿರುವುದರಿಂದ, ಸಂಸತ್ತು ಅಂಗೀಕರಿಸಿದ ವಕ್ಫ್ ಮಸೂದೆಯ ಚರ್ಚೆ ಇಲ್ಲಿ ಬಹಳ ಮುಖ್ಯ. ಅದು ಜಮ್ಮು ಕಾಶ್ಮೀರದ ಜನರ ಮೇಲೆ ನೇರವಾಗಿ ಪರಿಣಾಮ ಬೀರುತ್ತದೆ. ಹಾಗಾಗಿ, ನಾವು ಅದರ ಬಗ್ಗೆ ಚರ್ಚೆ ನಡೆಸಲು ಸಾಧ್ಯವಾಗುವಂತೆ ನಿಲುವಳಿ ಸೂಚನೆ ಅಂಗೀಕರಿಸಬೇಕೆಂದು ನಾನು ವಿನಂತಿಸುತ್ತೇನೆ ಎಂದು ಸಾದಿಕ್ ಹೇಳಿದರು.

ಈ ನಡುವೆ, ಬಿಜೆಪಿ ಸದಸ್ಯರು ತಮ್ಮ ಆಸನಗಳಿಂದ ಎದ್ದು ನಿಂತು ವಕ್ಫ್ ಮಸೂದೆ ಕುರಿತ ಚರ್ಚೆಗೆ ವಿರೋಧ ವ್ಯಕ್ತಪಡಿಸಿದರು. ಸಂಸತ್ತು ಅಂಗೀಕರಿಸಿದ ಕಾನೂನುಗಳನ್ನು ವಿಧಾನಸಭೆಯಲ್ಲಿ ಚರ್ಚಿಸಲು ಸಾಧ್ಯವಿಲ್ಲ ಎಂದರು. ಆಡಳಿತ ಮೈತ್ರಿಕೂಟ ಮತ್ತು ಬಿಜೆಪಿ ಸದಸ್ಯರು ಇಬ್ಬರೂ ತಮ್ಮ ನಿಲುವುಗಳಿಗೆ ಅಂಟಿಕೊಂಡಿದ್ದರಿಂದ ಸದನದಲ್ಲಿ ಭಾರೀ ಗದ್ದಲ ಉಂಟಾಯಿತು. ಗದ್ದಲದ ನಡುವೆಯೇ, ರಾಷ್ಟ್ರಪತಿಗಳ ಸಹಿ ಬಿದ್ದು ಕಾನೂನಾಗಿ ಮಾರ್ಪಟ್ಟಿರುವ ಮಸೂದೆಯ ಕುರಿತು ಚರ್ಚೆ ಕೋರಿ ಒಂಬತ್ತು ಶಾಸಕರು ಮಂಡಿಸಿರುವ ನಿಲುವಳಿ ಸೂಚನೆಗಳನ್ನು ತಾನು ಸ್ವೀಕರಿಸಿರುವುದಾಗಿ ಸ್ಪೀಕರ್ ರಾಥರ್ ಸ್ಪಷ್ಟಪಡಿಸಿದರು.

ಆದರೆ, ಚರ್ಚೆಗೆ ಅವಕಾಶ ನೀಡ ಸ್ಪೀಕರ್, ನಿಯಮ 58 ಉಪ–ನಿಯಮ 7ರ ಪ್ರಕಾರ, ನ್ಯಾಯಾಲಯದಲ್ಲಿರುವ ವಿಷಯದ ಕುರಿತ ಚರ್ಚೆಯನ್ನು ನಿಲುವಳಿ ಸೂಚನೆ ಮೂಲಕ ಕೈಗೆತ್ತಿಕೊಳ್ಳಲು ಸಾಧ್ಯವಿಲ್ಲ ಎಂದರು.

ಸುಪ್ರೀಂ ಕೋರ್ಟ್‌ನಲ್ಲಿ ಸಲ್ಲಿಸಲಾದ ರಿಟ್ ಅರ್ಜಿಗಳ ಪ್ರತಿಗಳು ನನ್ನ ಬಳಿ ಇವೆ ಎಂದು ತಿಳಿಸಿದರು. ಕಾನೂನು ಆಗಿರುವ ವಕ್ಫ್ ತಿದ್ದುಪಡಿ ಮಸೂದೆ ಸಾಂವಿಧಾನಿಕವಾಗಿದೆಯೇ ಎಂಬುದನ್ನು ನಿರ್ಧರಿಸುವುದು ಸುಪ್ರೀಂ ಕೋರ್ಟ್‌ಗೆ ಬಿಟ್ಟದ್ದು ಎಂದು ಅವರು ಹೇಳಿದರು.



ಪಶ್ಚಿಮ ಬಂಗಾಳ ಸರ್ಕಾರದ ವಿರುದ್ಧ ಸೋಮವಾರ ಕೋಲ್ಕತ್ತಾದಲ್ಲಿ ನಡೆದ ಕಾಳಿಘಾಟ್ ಮೆರವಣಿಗೆಯಲ್ಲಿ ಬಿಜೆಪಿಯ ಮಾಜಿ ಸಂಸದೆ ಲಾಕೆಟ್ ಚಟರ್ಜಿಯನ್ನು ಪೊಲೀಸರು ಬಂಧಿಸಿದರು.

## ವಕ್ಫ್ ತಿದ್ದುಪಡಿ ಕಾಯ್ದೆ ಪ್ರಶ್ನಿಸುವ ಅರ್ಜಿಗಳ ತುರ್ತು ವಿಚಾರಣೆಗೆ ಸುಪ್ರೀಂಕೋರ್ಟ್ ನಕಾರ

**ನವದೆಹಲಿ, ಏ.7:** 2025ರ ವಕ್ಫ್ (ತಿದ್ದುಪಡಿ) ಕಾಯ್ದೆಯನ್ನು ಪ್ರಶ್ನಿಸುವ ಅರ್ಜಿಗಳ ಮೇಲಿನ ತುರ್ತು ವಿಚಾರಣೆಯನ್ನು ಸುಪ್ರೀಂ ಕೋರ್ಟ್ ನಿರಾಕರಿಸಿದ್ದು, ಅಂತಹ ವಿಷಯಗಳ ನಿರ್ವಹಣೆಗೆ ವ್ಯವಸ್ಥೆಯೊಂದು ಜಾರಿಯಲ್ಲಿದೆ ಎಂದು ಹೇಳಿದೆ.

ಹೊಸದಾಗಿ ಜಾರಿ ಮಾಡಲಾದ ವಕ್ಫ್ ಕಾಯ್ದೆ, 2025ರ ಸಾಂವಿಧಾನಿಕ ಸಿಂಧುತ್ವವನ್ನು ಅರ್ಜಿಯು ಪ್ರಶ್ನಿಸುತ್ತದೆ. ಕಾನೂನನ್ನು ಜಾರಿಗೆ ತರುವುದನ್ನು ಮುಂದೂಡಲು ಕೇಂದ್ರಕ್ಕೆ ನಿರ್ದೇಶನಗಳನ್ನು ಕೋರುತ್ತದೆ. ಹಿರಿಯ ವಕೀಲ ಕಪಿಲ್ ಸಿಬಲ್ ಅವರು ಜಮಿಯತ್ ಉಲೇಮಾ–ಇ–ಹಿಂದ್ ಅಧ್ಯಕ್ಷ ಮೌಲಾನಾ ಅರ್ಷದ್ ಮದನಿ ಅವರು ಭಾರತದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ನೇತೃತ್ವದ ಪೀಠದ ಮುಂದೆ ಸಲ್ಲಿಸಿದ ಅರ್ಜಿಯನ್ನು ಉಲ್ಲೇಖಿಸಿದರು. ಈ ವಿಷಯವನ್ನು ತುರ್ತಾಗಿ ಪಟ್ಟಿ ಮಾಡುವುದನ್ನು ಪರಿಗಣಿಸುವಂತೆ ಸಿಬಲ್ ಪೀಠವನ್ನು ಒತ್ತಾಯಿಸಿದರು. ಆದರೂ, ಎಲ್ಲ ತುರ್ತು ವಿಷಯಗಳನ್ನು ಮಧ್ಯಾಹ್ನ ತಮ್ಮ ಮುಂದೆ ಇಡಲಾಗುವುದು ಮತ್ತು ನ್ಯಾಯಾಲಯವು ಅದಕ್ಕೆ ಅನುಗುಣವಾಗಿ ಅವುಗಳನ್ನು ಪಟ್ಟಿ ಮಾಡುವ ಬಗ್ಗೆ ನಿರ್ಧಾರ ತೆಗೆದುಕೊಳ್ಳುತ್ತದೆ ಎಂದು ಸಿಜೆಐ ಪುನರುಚ್ಚರಿಸಿದರು. ಪದೇಪದೆ ಮೌಖಿಕ ಪ್ರಸ್ತಾಪಗಳ ಅಗತ್ಯವನ್ನು ಪ್ರಶ್ನಿಸಿದ ಸಿಜೆಐ, ನಮ್ಮಲ್ಲಿ ಒಂದು ವ್ಯವಸ್ಥೆ ಇದ್ದಾಗ ನೀವು ಏಕೆ ಪ್ರಸ್ತಾಪಿಸುತ್ತಿದ್ದೀರಿ ಎಂದು ಕೇಳಿದರು. ಮಧ್ಯಾಹ್ನದ ವೇಳೆಗೆ ವಿಷಯಗಳನ್ನು ಪರಿಶೀಲಿಸಲಾಗುವುದು ಮತ್ತು ಅಗತ್ಯವಿರುವವುಗಳನ್ನು ಮಾಡಲಾಗುತ್ತದೆ ಎಂದು ಅವರು ಭರವಸೆ ನೀಡಿದರು. ಕೇಂದ್ರವು ಶಾಸನದ ಅಧಿಸೂಚನೆಯನ್ನು ಹೊರಡಿಸಿದಾಗಿನಿಂದ ವಕ್ಫ್ ಕಾಯ್ದೆ ತಿದ್ದುಪಡಿಯಿಂದ ಉದ್ಭವಿಸುವ ಹಲವಾರು ಅರ್ಜಿಗಳನ್ನು ಸುಪ್ರೀಂ ಕೋರ್ಟ್ ಮುಂದೆ ಪ್ರಸ್ತಾಪಿಸಲಾಗಿದೆ.

## ಮಣಿಪುರ: ಪುನರ್ವಸತಿಗೆ 217 ಕೋಟಿ ನೆರವು

**ನವದೆಹಲಿ, ಏ.7:** ಮೇ 3, 2023ರಿಂದ ಮಣಿಪುರದಲ್ಲಿ ನಡೆದ ಜನಾಂಗೀಯ ಹಿಂಸಾಚಾರದಿಂದಾಗಿ ಸ್ಥಳಾಂತರಗೊಂಡ ಜನರಿಗೆ ಪರಿಹಾರ ಮತ್ತು ಪುನರ್ವಸತಿ ಕ್ರಮಗಳಿಗಾಗಿ ಕೇಂದ್ರ ಗೃಹ ಸಚಿವಾಲಯ (ಎಂಎಚ್ಎ) ಕಳೆದ ಹಣಕಾಸು ವರ್ಷದಲ್ಲಿ (2024–25) 217 ಕೋಟಿ ರೂ.ಗಳನ್ನು ಆರ್ಥಿಕ ಸಹಾಯವಾಗಿ ನೀಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. 23 ತಿಂಗಳ ಹಿಂದೆ ಜನಾಂಗೀಯ ಹಿಂಸಾಚಾರ ಭುಗಿಲೆದ್ದ ಕೂಡಲೇ ತಮ್ಮ ಮನೆಗಳು ಮತ್ತು ಹಳ್ಳಿಗಳಿಂದ ಸ್ಥಳಾಂತರಗೊಂಡ 50,000 ಕ್ಕೂ ಹೆಚ್ಚು ಪುರುಷರು, ಮಹಿಳೆಯರು ಮತ್ತು ಮಕ್ಕಳು ಅನೇಕ ಜಿಲ್ಲೆಗಳಲ್ಲಿ ಸುಮಾರು 250 ಪರಿಹಾರ ಶಿಬಿರಗಳಲ್ಲಿ ವಾಸಿಸುತ್ತಿದ್ದಾರೆ. ಪ್ರಸ್ತುತ ಪರಿಹಾರ ಶಿಬಿರಗಳಲ್ಲಿ ವಾಸಿಸುತ್ತಿರುವ ಹಿಂಸಾಚಾರ ಪೀಡಿತ ಕುಟುಂಬಗಳಿಗಾಗಿ ಮಣಿಪುರದ ವಿವಿಧ ಜಿಲ್ಲೆಗಳಲ್ಲಿ ಹಲವಾರು ಸಾವಿರ ಪೂರ್ವನಿರ್ಮಿತ ಮನೆಗಳನ್ನು ನಿರ್ಮಿಸಲಾಗಿದೆ.

ಇತ್ತೀಚೆಗೆ ಕೊನೆಗೊಂಡ ಹಣಕಾಸು ವರ್ಷದಲ್ಲಿ (2024–25) ಕೇಂದ್ರ ಸರ್ಕಾರದಿಂದ ವಿವಿಧ ವಲಯಗಳಲ್ಲಿ ಬೃಹತ್ ಬೆಂಬಲವನ್ನು ಪಡೆಯಲಾಗಿದೆ ಎಂದು ಮಣಿಪುರ ಹಣಕಾಸು ಇಲಾಖೆಯ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮಾರ್ಚ್ (2025) ರಲ್ಲಿ, ಕೇಂದ್ರ ಪ್ರಾಯೋಜಿತ ಯೋಜನೆಗಳು (ಸಿಎಸ್ಎಸ್), ಬಂಡವಾಳ ಹೂಡಿಕೆಗಾಗಿ ರಾಜ್ಯಗಳಿಗೆ ವಿಶೇಷ ಸಹಾಯ ಯೋಜನೆ ಮತ್ತು ಇತರ ಕೇಂದ್ರ ಯೋಜನೆಗಳ ರೂಪದಲ್ಲಿ 1,926 ಕೋಟಿ ರೂ. ಕೇಂದ್ರ ನೆರವು ಪಡೆಯಲಾಗಿದೆ ಎಂದು ಅವರು ಹೇಳಿದರು.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇತ್ತೀಚೆಗೆ ಎಸ್ಎಎಸ್‌ಸಿಐ ಅಡಿಯಲ್ಲಿ ಮಣಿಪುರಕ್ಕೆ ಬೆಂಬಲವನ್ನು ಭರವಸೆ ನೀಡಿದ್ದರು. ಕಳೆದ ಹಣಕಾಸು ವರ್ಷದಲ್ಲಿ ಎಸ್ಎಎಸ್‌ಸಿಐ ಅಡಿಯಲ್ಲಿ ಒಟ್ಟು 1,437 ಕೋಟಿ ರೂ.ಗಳನ್ನು ಸ್ವೀಕರಿಸಲಾಗಿದೆ, ಇದು ಒಂದು ಹಣಕಾಸು ವರ್ಷದಲ್ಲಿ ಇದುವರೆಗಿನ ಅತ್ಯಧಿಕ ನೆರವಾಗಿದೆ. 869 ಕೋಟಿ ರೂ.ಗಳ ಬೆಂಬಲದ ಅರವತ್ತು ಪ್ರತಿಶತವನ್ನು ಮಾರ್ಚ್‌ನಲ್ಲಿ ಮಾತ್ರ ಪಡೆಯಲಾಗಿದೆ. ಎಸ್ಎಎಸ್‌ಸಿಐ ನಿಧಿಯು ಪಿಡಬ್ಲ್ಯೂಡಿಯ ನಡೆಯುತ್ತಿರುವ ಮತ್ತು ಇತ್ತೀಚೆಗೆ ಪೂರ್ಣಗೊಂಡ ಕಾಮಗಾರಿಗಳ ಹೊಣೆಗಾರಿಕೆಗಳನ್ನು ತೆರವುಗೊಳಿಸಲು 320 ಕೋಟಿ ರೂ.ಗಳ ವಿಶೇಷ ನಿಧಿಯನ್ನು ಸಹ ಒಳಗೊಂಡಿದೆ. ಮೊದಲ ಬಾರಿಗೆ, ರಾಷ್ಟ್ರೀಯ ಆರೋಗ್ಯ ಮಿಷನ್ ಅಡಿಯಲ್ಲಿ ಸಾಮಾನ್ಯ ನಾಲ್ಕು ಕಂತುಗಳನ್ನು ಮೀರಿ ಹೆಚ್ಚುವರಿ ಕಂತು ಸ್ವೀಕರಿಸಲಾಗಿದೆ. ಫೆಬ್ರವರಿ 13 ರಿಂದ ಮಣಿಪುರ ರಾಷ್ಟ್ರಪತಿ ಆಳ್ವಿಕೆಯಲ್ಲಿರುವ ಕಾರಣ, ಮಾರ್ಚ್ 10 ರಂದು ಕೇಂದ್ರ ಹಣಕಾಸು ಸಚಿವರು ಲೋಕಸಭೆಯಲ್ಲಿ 2025–26 ರ ರಾಜ್ಯ ಬಜೆಟ್ ಅನ್ನು ಮಂಡಿಸಿದರು, ಇದು ಪ್ರಸ್ತುತ ಹಣಕಾಸು ವರ್ಷದಲ್ಲಿ 32,657 ಕೋಟಿ ರೂ. ಗಳ ಪರಿಷ್ಕೃತ ಅಂದಾಜಿನಿಂದ 35,104 ಕೋಟಿ ರೂ.ಗಳಷ್ಟು ವೆಚ್ಚವನ್ನು ಪ್ರಸ್ತಾಪಿಸಿದೆ.

## ಮಾಲೆಗಾಂವ್ ವಿಚಾರಣೆ ನಡೆಸುತ್ತಿದ್ದ ಜಡ್ಜ್ ವರ್ಗಾವಣೆ

**ನವದೆಹಲಿ, ಏ.7:** ಬಿಜೆಪಿ ಮಾಜಿ ಸಂಸದೆ ಪ್ರಜ್ಞಾ ಸಿಂಗ್ ಠಾಕೂರ್ ಆರೋಪಿಯಾಗಿರುವ ಮಾಲೆಗಾಂವ್ ಸ್ಫೋಟ ಪ್ರಕರಣದ ವಿಚಾರಣೆಯ ನೇತೃತ್ವದ ವಹಿಸಿದ್ದ ಎನ್ಐಎ ನ್ಯಾಯಾಲಯದ ವಿಶೇಷ ನ್ಯಾಯಾಧೀಶರನ್ನು ವಿಚಾರಣೆಯ ಅಂತಿಮ ಹಂತದಲ್ಲಿ ವರ್ಗಾವಣೆ ಮಾಡಲಾಗಿದೆ. ಜಿಲ್ಲಾ ನ್ಯಾಯಾಲಯದ ನ್ಯಾಯಾಧೀಶರ ವಾರ್ಷಿಕ ನಿಯಮಿತ ವರ್ಗಾವಣೆಯ ಭಾಗವಾಗಿ ಈ ವರ್ಗಾವಣೆ ನಡೆದಿದೆ.

ಏಪ್ರಿಲ್ 5ರಂದು ಹೊರಡಿಸಲಾದ ವರ್ಗಾವಣೆ ಆದೇಶದಲ್ಲಿ, ವಿಚಾರಣೆ ಮುಗಿದಿರುವ ಎಲ್ಲಾ ಪ್ರಕರಣಗಳ ತೀರ್ಪುಗಳನ್ನು ಅಧಿಕಾರ ಹಸ್ತಾಂತರಿಸುವ ಮುನ್ನ ಪ್ರಕಟಿಸುವಂತೆ ನಿರ್ದೇಶಿಸಲಾಗಿದೆ. ಮಾಲೆಗಾಂವ್ ಸ್ಫೋಟ ಪ್ರಕರಣದಲ್ಲಿ ಕಳೆದ ಒಂದು ವರ್ಷದಿಂದ ಎರಡೂ ಕಡೆಯ ವಾದ–ಪ್ರತಿವಾದ ಆಲಿಸಿದ ನ್ಯಾಯಾಧೀಶ ಎ.ಕೆ. ಲಹೋಟಿ ಅವರು, ಏ.15 ರೊಳಗೆ ಉಳಿದ ವಾದಗಳನ್ನು ಪೂರ್ಣಗೊಳಿಸುವಂತೆ ಪ್ರಾಸಿಕ್ಯೂಷನ್ ಮತ್ತು ಪ್ರತಿವಾದಿಗಳಿಗೆ ಕಳೆದ ಶನಿವಾರ ನಿರ್ದೇಶನ ನೀಡಿದ್ದರು.

ಲಹೋಟಿ ಅವರು 17 ವರ್ಷಗಳಷ್ಟು ಹಳೆಯದಾದ ಈ ಪ್ರಕರಣದ ವಿಚಾರಣೆ ನೇತೃತ್ವ ವಹಿಸಿರುವ ಐದನೇ ನ್ಯಾಯಾಧೀಶರಾಗಿದ್ದಾರೆ. ನ್ಯಾಯಾಧೀಶರ ವರ್ಗಾವಣೆಯನ್ನು ನಿರೀಕ್ಷಿಸಿದ್ದ ಪ್ರಕರಣದ ಸಂತ್ರಸ್ತರು, ಕಳೆದ ವಾರ ಬಾಂಬೆ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳಿಗೆ ಪತ್ರ ಬರೆದು, ವಿಳಂಬವಿಲ್ಲದೆ ತೀರ್ಪು ಪ್ರಕಟವಾಗುವಂತೆ ನೋಡಿಕೊಳ್ಳಲು ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶರ ಅಧಿಕಾರಾವಧಿಯನ್ನು ವಿಸ್ತರಿಸುವಂತೆ ಕೋರಿದ್ದರು. ಪ್ರಕರಣವು ಸಂಕೀರ್ಣವಾದ ದಾವೆ ಪ್ರಕ್ರಿಯೆಗಳ ಮೂಲಕ ಸಾಗುತ್ತಿದೆ. ನ್ಯಾಯಾಧೀಶ ಎಕೆ ಲಹೋಟಿ ಅವರು ಪ್ರಕರಣದ ಪ್ರತಿಯೊಂದು ಅಂಶಗಳ ಬಗ್ಗೆಯೂ ಸೂಕ್ಷ್ಮವಾಗಿ ತಿಳಿದಿದ್ದಾರೆ. ನ್ಯಾಯದ ಹಿತದೃಷ್ಟಿಯಿಂದ, ವಿಚಾರಣೆ ಪೂರ್ಣಗೊಳ್ಳುವವರೆಗೆ ಅವರ ಅಧಿಕಾರಾವಧಿಯನ್ನು ವಿಸ್ತರಿಸಲು ಶಿಫಾರಸು ಮಾಡುವಂತೆ ನಾವು ನಿಮ್ಮನ್ನು ಕೋರುತ್ತೇವೆ ಎಂದು ಪತ್ರದಲ್ಲಿ ಹೇಳಲಾಗಿತ್ತು. ನ್ಯಾಯಾಧೀಶರ ವರ್ಗಾವಣೆ ತಡೆಯುವಂತೆ ಹೈಕೋರ್ಟ್ ಮೊರೆ ಹೋಗುವ ಬಗ್ಗೆ ಯೋಚಿಸುತ್ತಿದ್ದೇವೆ. ಪ್ರಕರಣದ ವಿಚಾರಣೆ ಈಗಾಗಲೇ ವಿಳಂಬವಾಗಿದೆ. ನ್ಯಾಯಾಧೀಶರನ್ನು ವರ್ಗಾಯಿಸಿದರೆ ಇನ್ನಷ್ಟು ವಿಳಂಬವಾಗಲಿದೆ. ಹಾಗಾಗಿ, ನಾವು ಹಿರಿಯ ವಕೀಲರೊಂದಿಗೆ ಚರ್ಚಿಸಿ ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದು ಸಂತ್ರಸ್ತರ ಪರ ವಕೀಲ ಶಾಹಿದ್ ನದೀಮ್ ಹೇಳಿದ್ದಾರೆ.

## ಬಿಜೆಪಿ ನಾಯಕನ ವಿವಾದಾತ್ಮಕ ಹೇಳಿಕೆ

**ಕೋಲ್ಕತ್ತಾ, ಏ.7:** ರಾಮನವಮಿ ಆಚರಣೆಯ ಸಂದರ್ಭದ ಧಾರ್ಮಿಕ ಮೆರವಣಿಗೆಗಳಲ್ಲಿ ಶಸ್ತ್ರಾಸ್ತ್ರಗಳ ಉಪಸ್ಥಿತಿಯನ್ನು ಸಮರ್ಥಿಸಿಕೊಳ್ಳುವ ಮೂಲಕ ಹಿರಿಯ ಬಿಜೆಪಿ ನಾಯಕ ದಿಲೀಪ್ ಘೋಷ್ ವಿವಾದ ಹುಟ್ಟುಹಾಕಿದ್ದಾರೆ. ಮೆರವಣಿಯಲ್ಲಿ ಯಾರಾದರೂ ಆಯುಧ ಹಿಡಿದರೆ ತಪ್ಪೇನು ಎಂದು ಪ್ರಶ್ನಿಸಿದ್ದಾರೆ. ಖರಗ್ಪುರದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಘೋಷ್, ಪಶ್ಚಿಮ ಬಂಗಾಳದಾದ್ಯಂತ ರಾಮ ನವಮಿಯನ್ನು ಅತ್ಯಂತ ಉತ್ಸಾಹದಿಂದ ಆಚರಿಸಲಾಗುವುದು; ಹಿಂದೂ ಸಮುದಾಯವು ತನ್ನದೇ ಆದ ರೀತಿಯಲ್ಲಿ ಹಬ್ಬಗಳನ್ನು ಆಚರಿಸುವ ಎಲ್ಲ ಹಕ್ಕನ್ನು ಹೊಂದಿದೆ ಎಂದು ಪ್ರತಿಪಾದಿಸಿದರು.

ರಾಮನವಮಿಯನ್ನು ಪಶ್ಚಿಮ ಬಂಗಾಳದಾದ್ಯಂತ ಅದ್ಧೂರಿಯಾಗಿ ಆಚರಿಸಲಾಗುವುದು. ಆಚರಣೆಗಳ ಶಾಂತಿಯುತ ನಡವಳಿಕೆಯನ್ನು ಖಚಿತಪಡಿಸಿಕೊಳ್ಳುವುದು ಪೊಲೀಸರ ಕರ್ತವ್ಯ. ಹಿಂದೂ ಸಮುದಾಯವು ತಮ್ಮ ಸಂಪ್ರದಾಯಗಳ ಪ್ರಕಾರ ಹಬ್ಬವನ್ನು ಆಚರಿಸುತ್ತದೆ, ಇದರಲ್ಲಿ ಯಾವುದೇ ಸಮಸ್ಯೆ ಇರಬಾರದು ಎಂದು ಅವರು ಹೇಳಿದರು. ಕೋಟ್ಯಂತರ ಜನರು ಬೀದಿಗಿಳಿಯುತ್ತಾರೆ. ಯಾರಾದರೂ ತೊಂದರೆ ಸೃಷ್ಟಿಸಲು ಪ್ರಯತ್ನಿಸಿದರೆ, ಅವುಗಳನ್ನು ತಡೆಯುವುದು ಪೊಲೀಸರು ಮತ್ತು ಆಡಳಿತದ ಜವಾಬ್ದಾರಿಯಾಗಿದೆ ಎಂದು ಅವರು ಹೇಳಿದರು.

ಇತ್ತೀಚಿನ ದಿನಗಳಲ್ಲಿ ದೇವಾಲಯಗಳನ್ನು ಧ್ವಂಸಗೊಳಿಸಲಾಗಿದೆ, ವಿಗ್ರಹಗಳನ್ನು ಕದ್ದಿದ್ದಾರೆ ಮತ್ತು ಪೆಂಡಾಲ್‌ಗಳಿಗೆ ಬೆಂಕಿ ಹಚ್ಚಲಾಗಿದೆ ಎಂದು ಘೋಷ್ ಹೇಳಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ, ಹಿಂದೂಗಳು ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಮುಂದಾದರೆ, ಅದು ಹೇಗೆ ಅಪರಾಧ ಎಂದು ಅವರು ರಾಮನವಮಿ ಮೆರವಣಿಯಲ್ಲಿ ಭಾಗವಹಿಸುವವರು ಕತ್ತಿ ಮತ್ತು ಕೋಲುಗಳಂತಹ ಶಸ್ತ್ರಗಳನ್ನು ಹಿಡಿದು ಹೋಗುವುದನ್ನು ಸಮರ್ಥಿಸಿಕೊಂಡಿದ್ದಾರೆ. ಹಿಂದೂಗಳು ತಮ್ಮ ಹಬ್ಬಗಳನ್ನು ಹೇಗೆ ಆಚರಿಸುತ್ತಾರೆ ಎಂಬುದನ್ನು ಯಾರೂ ಆಕ್ಷೇಪಿಸಬಾರದು ಎಂದು ಅವರು ಹೇಳಿದರು.

ರಾಮನವಮಿ ಮೆರವಣಿಗೆಗಳಲ್ಲಿ ಬಹಿರಂಗವಾಗಿ ಶಸ್ತ್ರ ಪ್ರದರ್ಶನ ನಡೆದ ಹಲವಾರು ಜಿಲ್ಲೆಗಳಿಂದ ಬಂದ ವರದಿಗಳ ಮಧ್ಯೆ ಅವರ ಹೇಳಿಕೆಗಳು ಬಂದವು. ಮಾಲ್ಡಾದಲ್ಲಿ, ರಾಮಕೃಷ್ಣ ಪಲ್ಲಿ ಮೈದಾನದಿಂದ ದೊಡ್ಡ ಮೆರವಣಿಗೆ ಪ್ರಾರಂಭವಾಯಿತು, ಭಾಗವಹಿಸಿದ್ದವರು ಕತ್ತಿಗಳು ಮತ್ತು ಇತರ ಶಸ್ತ್ರಾಸ್ತ್ರಗಳನ್ನು ಬಹಿರಂಗವಾಗಿ ಝಳಪಿಸುತ್ತಿದ್ದರು. ಹೌರಾದ ಸಂಕ್ರೈಲ್‌ನಲ್ಲಿ, ಇದೇ ರೀತಿಯ ದೃಶ್ಯಗಳು ವರದಿಯಾಗಿವೆ. ಪೊಲೀಸ್ ಮೂಲಗಳ ಪ್ರಕಾರ, ರ‍್ಯಾಲಿಯ ಸಮಯದಲ್ಲಿ ಆಯೋಜಕರು ಶಸ್ತ್ರಾಸ್ತ್ರಗಳನ್ನು ಸಾಗಿಸಲು ಅಧಿಕೃತ ಅನುಮತಿಯನ್ನು ಹೊಂದಿರಲಿಲ್ಲ. ಕಾರ್ಯಕ್ರಮದ ನಿಯಮಗಳನ್ನು ಉಲ್ಲಂಘಿಸಿದ್ದಕ್ಕಾಗಿ ಅಧಿಕಾರಿಗಳು ಈಗ ಆಯೋಜಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ನಿರೀಕ್ಷೆಯಿದೆ.

ಹೆಚ್ಚುತ್ತಿರುವ ಕಳವಳಗಳ ನಡುವೆ, ತೃಣಮೂಲ ಕಾಂಗ್ರೆಸ್ ಸಂಸದ ಡೋಲಾ ಸೇನ್ ಬೆಳವಣಿಗೆಗಳಿಗೆ ತೀವ್ರವಾಗಿ ಪ್ರತಿಕ್ರಿಯಿಸಿದರು. ರಾಮನವಮಿಗೆ ಇಷ್ಟೊಂದು ಬಿಗಿ ಪೊಲೀಸ್ ಬಂದೋಬಸ್ತ್ ನಾನು ಹಿಂದೆಂದೂ ನೋಡಿಲ್ಲ. ಆದರೆ, ಈಗ ಪೊಲೀಸರು ಜಾಗರೂಕರಾಗಿರಬೇಕು. ರಾಮನವಮಿ ಆಚರಣೆಯ ಸಮಯದಲ್ಲಿ ದಿಲೀಪ್ ಘೋಷ್ ಶಸ್ತ್ರಾಸ್ತ್ರಗಳೊಂದಿಗೆ ಕಾಣಿಸಿಕೊಂಡರು ಎಂದರು.

## ರಕ್ತ ಪರೀಕ್ಷೆಯಿಂದ ಗರ್ಭಕಂಠದ ಕ್ಯಾನ್ಸರ್ ಪತ್ತೆ ಏಮ್ಸ್ ಸಂಶೋಧಕರಿಂದ ಹೊಸ ಪ್ರಯೋಗ

**ನವದೆಹಲಿ,ಏ.7:** ಪ್ರತಿಷ್ಠಿತ ಆರೋಗ್ಯ ಸಂಸ್ಥೆಯಾದ AIIMS ಸರ್ವಿಕಲ್ ಕ್ಯಾನ್ಸರ್ (ಗರ್ಭಕಂಠದ ಕ್ಯಾನ್ಸರ್) ಗುರುತಿಸುವಲ್ಲಿ ಒಂದು ಪ್ರಮುಖ ಸಂಶೋಧನೆಯನ್ನು ನಡೆಸಿದೆ. ಈ ಅಧ್ಯಯನದ ಪ್ರಕಾರ, ರಕ್ತ ಪರೀಕ್ಷೆಯ ಮೂಲಕ ಸರ್ವಿಕಲ್ ಕ್ಯಾನ್ಸರ್ ಅನ್ನು ಆರಂಭಿಕ ಹಂತದಲ್ಲೇ ಪತ್ತೆ ಮಾಡಬಹುದಾಗಿದೆ. ಈ ಆವಿಷ್ಕಾರವು ಮಹಿಳೆಯರ ಆರೋಗ್ಯ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆ ತರಬಹುದು ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಏಮ್ಸ್ ಸಂಶೋಧಕರು ತಿಳಿಸಿರುವಂತೆ, ಈ ರಕ್ತ ಪರೀಕ್ಷೆಯು ಕ್ಯಾನ್ಸರ್ಗೆ ಸಂಬಂಧಿಸಿದ ನಿರ್ದಿಷ್ಟ ಜೈವಿಕ ಗುರುತುಗಳನ್ನು ಪತ್ತೆ ಮಾಡುತ್ತದೆ. ಈ ವಿಧಾನವು ಸರಳ, ವೆಚ್ಚದಲ್ಲಿ ಕಡಿಮೆ ಮತ್ತು ಆಕ್ರಮಣಕಾರಿಯಲ್ಲದ ಪರೀಕ್ಷೆಯಾಗಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಸಹ ಇದನ್ನು ಸುಲಭವಾಗಿ ಬಳಸಬಹುದಾಗಿದೆ. ಸಾಂಪ್ರದಾಯಿಕವಾಗಿ ಸರ್ವಿಕಲ್ ಕ್ಯಾನ್ಸರ್ ಪತ್ತೆಗೆ ಸದ್ಯ ಪ್ಯಾಪ್ ಸ್ಮಿಯರ್ ಮತ್ತು ಎಚ್‌ಪಿವಿ ಪರೀಕ್ಷೆಗಳನ್ನು ಬಳಸಲಾಗುತ್ತಿತ್ತು. ಆದರೆ ಈ ಹೊಸ ರಕ್ತ ಪರೀಕ್ಷೆಯು ಇನ್ನಷ್ಟು ನಿಖರವಾದ ಫಲಿತಾಂಶಗಳನ್ನು ನೀಡುವ ಸಾಧ್ಯತೆಯಿದೆ. ಈ ಸಂಶೋಧನೆಯು ಸರ್ವಿಕಲ್ ಕ್ಯಾನ್ಸರ್ ನ ಆರಂಭಿಕ ರೋಗನಿರ್ಣಯಕ್ಕೆ ದೊಡ್ಡ ಆಶಾಕಿರಣವಾಗಿದೆ. ಇದು ಚಿಕಿತ್ಸೆಯ ಯಶಸ್ಸಿನ ಪ್ರಮಾಣವನ್ನು ಹೆಚ್ಚಿಸಿ ಮರಣ ಪ್ರಮಾಣವನ್ನು ಕಡಿಮೆ ಮಾಡಬಹುದು ಎಂದು ಏಮ್ಸ್ ನ ಹಿರಿಯ ಸಂಶೋಧಕರೊಬ್ಬರು ತಿಳಿಸಿದ್ದಾರೆ. ಭಾರತದಲ್ಲಿ ಪ್ರತಿವರ್ಷ ಸಾವಿರಾರು ಮಹಿಳೆಯರು ಸರ್ವಿಕಲ್ ಕ್ಯಾನ್ಸರ್‌ಗೆ ಬಲಿಯಾಗುತ್ತಿದ್ದು, ಈ ರೋಗವು ಮಹಿಳೆಯರಲ್ಲಿ ಕಂಡುಬರುವ ಪ್ರಮುಖ ಕ್ಯಾನ್ಸರ್‌ಗಳಲ್ಲಿ ಒಂದಾಗಿದೆ. ಪ್ರಸ್ತುತ, ಈ ರಕ್ತ ಪರೀಕ್ಷೆಯು ಪ್ರಾಯೋಗಿಕ ಹಂತದಲ್ಲಿದ್ದು, ಇದನ್ನು ವ್ಯಾಪಕವಾಗಿ ಬಳಕೆಗೆ ತರುವ ಮೊದಲು ಇನ್ನಷ್ಟು ಪರೀಕ್ಷೆಗಳು ಮತ್ತು ಅನುಮೋದನೆಗಳು ಅಗತ್ಯವಿದೆ. ಆದಾಗ್ಯೂ, ಈ ಆವಿಷ್ಕಾರವು ಭವಿಷ್ಯದಲ್ಲಿ ಕ್ಯಾನ್ಸರ್ ರೋಗನಿರ್ಣಯದಲ್ಲಿ ಒಂದು ಅವಕಾಶವನ್ನು ತೆರೆಯಬಹುದು ಎಂದು ವೈದ್ಯಕೀಯ ತಜ್ಞರು ಭಾವಿಸಿದ್ದಾರೆ. ಈ ಸಂಶೋಧನೆಯು ಮಹಿಳೆಯರ ಆರೋಗ್ಯದ ಜಾಗೃತಿಗೆ ಹೆಚ್ಚಿನ ಒತ್ತು ನೀಡುವ ಅಗತ್ಯವನ್ನು ಒತ್ತಿಹೇಳುತ್ತದೆ. ಆರಂಭಿಕ ಪತ್ತೆಯು ಜೀವ ಉಳಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂಬುದು ಈ ಅಧ್ಯಯನದ ಮೂಲ ಸಂದೇಶವಾಗಿದೆ.

## ಎಫ್ಐಆರ್ ರದ್ದು ಕೋರಿ ಬಾಂಬೆ ಹೈಕೋರ್ಟ್‌ಗೆ ಕುನಾಲ್ ಕಾಮ್ರಾ ಅರ್ಜಿ: ಇಂದು ವಿಚಾರಣೆ

**ಮುಂಬೈ,ಏ.7:** ಹಾಸ್ಯ ಕಲಾವಿದ ಕುನಾಲ್ ಕಾಮ್ರಾ ಅವರು ಮಹಾರಾಷ್ಟ್ರ ಉಪಮುಖ್ಯಮಂತ್ರಿ ಏಕನಾಥ್ ಶಿಂದೆ ವಿರುದ್ಧ ಮಾಡಿದ ಟೀಕೆಯಿಂದ ಉಂಟಾದ ವಿವಾದದ ಹಿನ್ನೆಲೆಯಲ್ಲಿ ಮುಂಬೈ ಪೊಲೀಸರು ದಾಖಲಿಸಿದ ಎಫ್ಐಆರ್ ರದ್ದುಗೊಳಿಸುವಂತೆ ಕೋರಿ ಬಾಂಬೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಕುನಾಲ್ ಕಾಮ್ರಾ ತಮ್ಮ ಇತ್ತೀಚಿನ ಸ್ಟ್ಯಾಂಡ್–ಅಪ್ ಕಾಮಿಡಿ ಕಾರ್ಯಕ್ರಮ 'ನಯಾ ಭಾರತ್'ನಲ್ಲಿ ಮಹಾರಾಷ್ಟ್ರ ಉಪಮುಖ್ಯಮಂತ್ರಿ ಏಕನಾಥ್ ಶಿಂದೆ ಅವರನ್ನು ಪರೋಕ್ಷವಾಗಿ 'ಗದ್ದಾರ್' (ದ್ರೋಹಿ) ಎಂದು ಕರೆದಿದ್ದರು. ಈ ಪ್ರದರ್ಶನವು ಮುಂಬೈನ ಖಾರ್ ಪ್ರದೇಶದ ಹ್ಯಾಬಿಟ್ಯಾಟ್ ಸ್ಟುಡಿಯೋದಲ್ಲಿ ನಡೆದಿದ್ದು, ಇದರ ವೀಡಿಯೊ ಯೂಟ್ಯೂಬ್‌ನಲ್ಲಿ ಪ್ರಕಟವಾದ ನಂತರ ವೈರಲ್ ಆಗಿತ್ತು. ಈ ಘಟನೆಯ ಬಳಿಕ, ಶಿವಸೇನೆ ಶಾಸಕ ಮುರ್ಜಿ ಪಟೇಲ್ ಅವರು ಕಾಮ್ರಾ ವಿರುದ್ಧ ದೂರು ದಾಖಲಿಸಿದರು. ಇದರ ಪರಿಣಾಮವಾಗಿ, ಮುಂಬೈನ ಖಾರ್ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 353(1)(ಬಿ) (ಸಾರ್ವಜನಿಕ ಶಾಂತಿಭಂಗಕ್ಕೆ ಕಾರಣವಾಗುವ ಹೇಳಿಕೆ) ಮತ್ತು 356(2) (ಮಾನಹಾನಿ) ಅಡಿಯಲ್ಲಿ ಎಫ್ಐಆರ್ ದಾಖಲಾಗಿತ್ತು.ವಿವಾದ ತಾರಕಕ್ಕೇರಿದ ನಂತರ ಕಾಮ್ರಾ ತಮಿಳುನಾಡಿನಲ್ಲಿ ವಾಸಿಸುತ್ತಿರುವ ಕಾರಣ ಮದ್ರಾಸ್ ಹೈಕೋರ್ಟ್‌ಗೆ ಮೊರೆ ಹೋಗಿದ್ದರು. ಮಾರ್ಚ್ 28ರಂದು ಮದ್ರಾಸ್ ಹೈಕೋರ್ಟ್ ಅವರಿಗೆ ಏಪ್ರಿಲ್ 7 ವರೆಗೆ ಮಧ್ಯಂತರ ಪೂರ್ವಭಾವಿ ಜಾಮೀನು ಮಂಜೂರು ಮಾಡಿತ್ತು. ಆದರೆ, ಈ ಅವಧಿ ಮುಗಿದ ನಂತರ, ಕಾಮ್ರಾ ತಮ್ಮ ವಿರುದ್ಧ ದಾಖಲಾದ ಎಫ್ಐಆರ್ ರದ್ದುಗೊಳಿಸಲು ಬಾಂಬೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಇಂದು ನ್ಯಾ. ಸಾರಂಗ್ ಕೊತ್ವಾಲ್ ಮತ್ತು ಶ್ರೀರಾಮ್ ಎಂ. ಮೊದಕ್ ಅವರ ಪೀಠದ ಮುಂದೆ ವಿಚಾರಣೆಗೆ ಬರಲಿದೆ.

ಎಫ್ಐಆರ್ ತಮ್ಮ ಮೂಲಭೂತ ಹಕ್ಕುಗಳಾದ ಅಭಿವ್ಯಕ್ತಿ ಸ್ವಾತಂತ್ರ್ಯ (ಆರ್ಟಿಕಲ್ 19(1)(ಎ)), ಯಾವುದೇ ವೃತ್ತಿ ಅಥವಾ ವ್ಯಾಪಾರ ನಡೆಸುವ ಹಕ್ಕು (ಆರ್ಟಿಕಲ್ 19(1)(ಜಿ)), ಮತ್ತು ಜೀವನ ಮತ್ತು ಸ್ವಾತಂತ್ರ್ಯದ ಹಕ್ಕು (ಆರ್ಟಿಕಲ್ 21)ಗಳನ್ನು ಉಲ್ಲಂಘಿಸುತ್ತದೆ ಎಂದು ತಮ್ಮ ಅರ್ಜಿಯಲ್ಲಿ ಕುನಾಲ್ ಕಾಮ್ರಾ ಅವರು ವಾದಿಸಿದ್ದಾರೆ.

## ಪುಷ್ಠಿ ಯೋಜನಾ ಅತ್ಯುತ್ತಮ ಶಾಲೆ ಪ್ರಶಸ್ತಿಗೆ ನಂದಿಕೂರು ಶಾಲೆ ಪಾತ್ರ: ಅನಿಲ್ ಶೆಟ್ಟಿ ಏಳಿಂಜೆ

**ಮುಂಬಯಿ,ಏ.7:** ಶತಮಾನೋತ್ಸವ ಕಂಡು ಸರ್ವತೋಮುಖ ಅಭಿವೃದ್ಧಿಯ ಮೂಲಕ ಇಡೀ ರಾಜ್ಯಕ್ಕೆ ಮಾದರಿಯಾಗಿ ಪ್ರಗತಿ ಪಥದತ್ತ ಸಾಗುತ್ತಿರುವ ನಂದಿಕೂರು ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಗೆ ಕರ್ನಾಟಕ ಸರ್ಕಾರದ ಸಮಗ್ರ ಶಿಕ್ಷಣ ಅಡಿಯಲ್ಲಿ ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿ (ಎಸ್‌ಡಿಎಂಸಿ) ಸರಕಾರಿ ಶಾಲೆಗಳ ಪುಷ್ಠಿ ಯೋಜನಾ ಅತ್ಯುತ್ತಮ ಶಾಲೆ (ದಿ ಬೆಸ್ಟ್ ಎಸ್‌ಡಿಎಂಸಿ ಸ್ಕೂಲ್) ರಾಜ್ಯ ಪ್ರಶಸ್ತಿಗೆ ನಮ್ಮ ಶಾಲೆಯು ಭಾಜನವಾಗಿರುವುದು ಶಾಲಾ ಪ್ರತಿಷ್ಠೆ ಮತ್ತು ಅಭಿಮಾನ ಗೌರವದ ಸಂಕೇತವಾಗಿದೆ ಎಂದು ನಂದಿಕೂರು ಎಜ್ಯುಕೇಶನ್ ಟ್ರಸ್ಟ್ (ರಿ.) ಅಧ್ಯಕ್ಷ ಅನಿಲ್ ಶೆಟ್ಟಿ ಏಳಿಂಜೆ ತಿಳಿಸಿದ್ದಾರೆ.

ರಾಜ್ಯದ 204 ಶೈಕ್ಷಣಿಕ ವಿಭಾಗಗಳ 44,762 ಸರಕಾರಿ ಶಾಲೆಗಳ ಸಮೂಹ, ವಿಭಾಗ ಹಾಗೂ ಜಿಲ್ಲಾ ಹಂತಗಳ ವಿಶ್ಲೇಷಣೆಯ ಮೂಲಕ ಆಯ್ಕೆ ಪ್ರಕ್ರಿಯೆ ನಡೆಸಲಾಗಿದ್ದು ಉಡುಪಿ ಜಿಲ್ಲಾ ಶೈಕ್ಷಣಿಕ ವಲಯದ 72 ಸರಕಾರಿ ಶಾಲೆಗಳಲ್ಲಿ ಮೊದಲಿಗೆ 16 ವಿಭಾಗ ಹಂತದ ಶಾಲೆಗಳಲ್ಲಿ ಆಯ್ಕೆಗೊಂಡು, ಬಳಿಕ ಬ್ಲಾಕ್ ಹಂತಕ್ಕೆ ಆಯ್ಕೆಯಾದ 9 ಶಾಲೆಗಳಲ್ಲೂ ಕ್ರಮೇಣ ಜಿಲ್ಲಾ ಹಂತಕ್ಕೆ ಆಯ್ಕೆಯಾದ 3 ಶಾಲೆಗಳಲ್ಲಿನ ಉಡುಪಿ ವಲಯದಿಂದ ರಾಜ್ಯ ಪ್ರಶಸ್ತಿಗೆ ಆಯ್ಕೆಯಾದ "ನಮ್ಮ ಶಾಲೆ ನಮ್ಮ ಹೆಮ್ಮೆ" ಆಗಿದೆ. ಈ ಪ್ರಶಸ್ತಿಯೊಂದಿಗೆ ಒಂದು ಲಕ್ಷ ರೂಪಾಯಿ ಅನುದಾನವನ್ನು ಶಾಲಾ ಅಭಿವೃದ್ಧಿಗೆ ಸರಕಾರವು ನೀಡಿ ಪ್ರೋತ್ಸಾಹಿಸಿದ್ದು ಶಿಕ್ಷಣ ಸಚಿವರು, ರಂಗದ ಎಲ್ಲಾ ಅಧಿಕಾರಿಗಳಿಗೆ ಅಭಿವಂದಿಸುತ್ತೇವೆ ಎಂದೂ ಅಧ್ಯಕ್ಷ ಅನಿಲ್ ಶೆಟ್ಟಿ ಏಳಿಂಜೆ ತಿಳಿಸಿದ್ದಾರೆ.

ಕೇವಲ 30 ವಿದ್ಯಾರ್ಥಿಗಳಿದ್ದು, ಇನ್ನೇನು ಮುಚ್ಚುವ ಹಂತಕ್ಕೆ ತಲುಪಿದ್ದ ನಂದಿಕೂರು ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯನ್ನು ಹಳೆ ವಿದ್ಯಾರ್ಥಿಗಳ ಸಂಘ ದತ್ತು ಪಡೆದುಕೊಂಡು ಮೂಲ ಸೌಕರ್ಯ ಒದಗಿಸಿ 300ಕ್ಕೂ ಅಧಿಕ ವಿದ್ಯಾರ್ಥಿಗಳು ದಾಖಲಾತಿ ಪಡೆಯುವಂತೆ ಮಾಡಿದೆ. ಈಚೆಗೆ ಶತಮಾನೋತ್ಸವ ಆಚರಿಸಿದ ನಂದಿಕೂರು ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಇಂದು ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಇತರ ಶಾಲೆಗಳಿಗೂ ಮಾದರಿಯಾಗಿದೆ. ಅಂದಿನ ದಿನಗಳಲ್ಲಿ ಶಾಲೆಯಲ್ಲಿ 600 ವಿದ್ಯಾರ್ಥಿಗಳು, ಸುಮಾರು 20 ಶಿಕ್ಷಕರಿದ್ದರು. 1954ರಲ್ಲಿ ಚೀಂಕ್ರಗುತ್ತು ರಾಘು ಶೆಟ್ಟಿ ಮತ್ತು ಗ್ರಾಮಸ್ಥರ ನೆರವಿನಿಂದ ಶಾಲೆಗೆ ನೂತನ ಕೊಠಡಿಗಳು ನಿರ್ಮಾಣ ಗೊಂಡವು.

ಶತಮಾನೋತ್ಸವ ಆಚರಿಸುತ್ತಿರುವ ನಮ್ಮ ಶಾಲೆಗೆ ಪ್ರಶಸ್ತಿ ಪ್ರಾಪ್ತಿಸಿದ್ದು ನಮ್ಮ ಜವಾಬ್ದಾರಿ ಮತ್ತು ಕರ್ತವ್ಯವನ್ನು ಹೆಚ್ಚಿಸಿದೆ. ನಮ್ಮ ಪ್ರಮುಖ ದಾನಿಗಳ ಸಹಾಯದಿಂದ ಟ್ರಸ್ಟ್ ಅಭಿವೃದ್ಧಿ ನಿರಂತರ ಸಾಗಲಿದೆ. ಶಾಲಾ ಸಾಧನೆಯ ನಿಜವಾದ ಬೆನ್ನೆಲುಬು ನಮ್ಮ ಶಿಕ್ಷಣ ಸಂಸ್ಥೆಯ ಅಧ್ಯಾಪಕ ವೃಂದ, ಪೋಷಕರಾಗಿದ್ದಾರೆ. ಈ ಹಿಂದೆ ಶ್ರಮಿಸಿದ ಟ್ರಸ್ಟ್‌ನ ಎಲ್ಲಾ ಪದಾಧಿಕಾರಿಗಳು,




ಶಾಲಾ ಶಿಕ್ಷಕ ಮತ್ತು ಶಿಕ್ಷಕೇತರ ಹಾಗೂ ಪೋಷಕ ವೃಂದ, ವಿದ್ಯಾರ್ಥಿ ಬಳಗ, ಶಾಲಾಭಿವೃದ್ಧಿ ಮತ್ತು ಶಾಲಾ ಮೇಲುಸ್ತುವಾರಿ ಸಮಿತಿ, ಸರ್ವ ಸದಸ್ಯರು, ಮಾರ್ಗದರ್ಶನವನ್ನು ನೀಡಿ ಮುನ್ನಡೆಸಿದ ಕೊಡುಗೈ ದಾನಿಗಳು, ಹಳೆವಿದ್ಯಾರ್ಥಿ ವೃಂದ ಹಾಗೂ ಗ್ರಾಮಸ್ಥರೆಲ್ಲರಿಗೂ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇವೆ.

ಹಳೆ ವಿದ್ಯಾರ್ಥಿಗಳೇ ಸೇರಿ ಆರಂಭಿಸಿದ ನಂದಿಕೂರು ಎಜುಕೇಶನ್ ಟ್ರಸ್ಟ್ ಅಡಿ ಆಂಗ್ಲಮಾಧ್ಯಮವನ್ನೂ ಈ ಶಾಲೆಯಲ್ಲಿ ಆರಂಭಿಸಿದ್ದು, ಖಾಸಗಿ ಶಾಲೆಗಳಿಗೆ ಸ್ಪರ್ಧೆ ನೀಡುತ್ತಿದೆ. ಸರ್ಕಾರವು ಪುಷ್ಠಿ ಯೋಜನೆಯಡಿ ನೀಡುವ ಉತ್ತಮ ಎಸ್‌ಡಿಎಂಸಿ ಪ್ರಶಸ್ತಿಗೂ ಈ ಶಾಲೆಯ ಎಸ್‌ಡಿಎಂಸಿ ಪಾತ್ರವಾಗಿದೆ. ಈ ಪ್ರಶಸ್ತಿಯ ಮೊತ್ತ 1 ಲಕ್ಷದೊಂದಿಗೆ ದಾನಿಗಳ ಸಹಕಾರದಿಂದ 1.5 ಲಕ್ಷ ವೆಚ್ಚದಲ್ಲಿ ಸ್ಮಾರ್ಟ್ ಕ್ಲಾಸ್ ಡಿಜಿಟಲ್ ಬೋರ್ಡ್ ಖರೀದಿಸಲಾಗಿದೆ. ದುರ್ಗಾಪರಮೇಶ್ವರಿ ದೇವಸ್ಥಾನದ ಗೋಪುರದಲ್ಲಿ ಬ್ರಿಟೀಷರ ಕಾಲದಿಂದಲೂ ಶಾಲೆ ನಡೆಸಲಾಗುತ್ತಿತ್ತು, ಶತಮಾನದ ಹಿಂದೆ ರಾಮ ರಾವ್ ಪಡುಬಿದ್ರಿ ಎಂಬ ಶಿಕ್ಷಕರು ಕಾಲ್ನಡಿಗೆಯಲ್ಲಿ ಬಂದು ಮುಳಿಹುಲ್ಲಿನ ಚಾವಣಿ ಅಡಿಯಲ್ಲಿ ಅಕ್ಷರಾಭ್ಯಾಸ ನಡೆಸಿದ ಶಾಲೆಯು ಅರಮಂದ ಕಾಡು ಶಾಲೆ ಎಂದು ಪ್ರಚಲಿತಗೊಂಡು ಬೆರಳಣಿಕೆಯ ವಿದ್ಯಾರ್ಥಿಗಳನ್ನು ಹೊಂದಿ, ಮುಂದೆ ಅಭಿವೃದ್ಧಿ ಹೊಂದುತ್ತಾ ಬಂತು. ಅಡ್ವೆ, ಬೆಳ್ಳಿಬಿಟ್ಟು, ನಂದಿಕೂರು, ಸಜೆ, ಕೊಳಚೂರು, ಪಾದೆಬೆಟ್ಟು, ಕಂಚಿನಡ್ಕ, ಪಾಂಡ್ಯಾರು ಪರಿಸರದ ವಿದ್ಯಾರ್ಥಿಗಳಿಗೆ ವಿದ್ಯಾರ್ಜನೆಯ ಕೇಂದ್ರವಾಗಿದೆ ಎಂದೂ ಅಧ್ಯಕ್ಷ ಅನಿಲ್ ಶೆಟ್ಟಿ ಏಳಿಂಜೆ ತಿಳಿಸಿದ್ದಾರೆ.

ಸರ್ಕಾರದಿಂದ 3 ಮಂದಿ. ಹಳೆವಿದ್ಯಾರ್ಥಿ ಟ್ರಸ್ಟ್ ವತಿಯಿಂದ 8 ಶಿಕ್ಷಕರು ಇದ್ದು, 8 ಮಂದಿಯ ಸಂಬಳವನ್ನು ಟ್ರಸ್ಟ್ ಭರಿಸುತ್ತಿದೆ. ಮುಂದಿನ ವರ್ಷದಲ್ಲಿ 8ನೇ ತರಗತಿ ಆರಂಭಿಸುವ ಚಿಂತನೆಯನ್ನು ಸಮಿತಿ ಹೊಂದಿದೆ. ಮುಂದಿನ ಶೈಕ್ಷಣಿಕ ವರ್ಷದಲ್ಲಿ 8ನೇ ತರಗತಿ ಆರಂಭಿಸುವ ಚಿಂತನೆಯನ್ನು ಸರ್ಕಾರಿ ಶಾಲೆಯನ್ನು ಯಾವ ರೀತಿ ಅಭಿವೃದ್ಧಿ ಪಡಿಸಬಹುದು ಎಂಬುದಕ್ಕೆ ಈ ಶಾಲೆ ಉದಾಹರಣೆ. ಶಿಕ್ಷಕರ ತಂಡ ಸಂಸ್ಕಾರಯುತ ಶಿಕ್ಷಣ, ಪಠ್ಯೇತರ ಚಟುವಟಿಕೆಗಳಲ್ಲೂ ಮಕ್ಕಳಿಗೆ ಪ್ರೋತ್ಸಾಹ ನೀಡುತ್ತಿದೆ ಎಂದು ಎಸ್‌ಡಿಎಂಸಿ ಅಧ್ಯಕ್ಷ ಜಗನ್ನಾಥ್ ಶೆಟ್ಟಿ ತಿಳಿಸಿದ್ದಾರೆ.

ಶ್ರೀ ಭಗವಂತನ ಮತ್ತು ಗ್ರಾಮ ದೇವರ ದಯೆ, ಕೃಪೆಯಿಂದ, ಶಾಲೆಯು ಇನ್ನಷ್ಟು ಪ್ರಗತಿ ಪಥದತ್ತ ಸಾಗಲಿ ಹಾಗೂ ಎಲ್ಲರ ನಿಸ್ವಾರ್ಥ ಸೇವಾ ಮನೋಭಾವದಿಂದ ಶಾಲೆಯು ಬೆಳಗುತ್ತಾ ಇಲ್ಲಿ ಸುಶಿಕ್ಷಿತರಾಗುವ ವಿದ್ಯಾರ್ಥಿಗಳೆಲ್ಲರೂ ಭವ್ಯ ರಾಷ್ಟ್ರವನ್ನು ಕಟ್ಟುವ ಸದ್ಪ್ರಜೆಗಳಾಗುತ್ತಾ ವಿಯಾಲಯಕ್ಕೂ ಇನ್ನಷ್ಟು ಗೌರವಗಳು ದೊರೆಯಲಿ ಎಂದು ಹಾರೈಸುವೆ ನವಜ್ಯೋತಿ ಗೆಳೆಯರ ಬಳಗ ನಂದಿಕುರು ಅಧ್ಯಕ್ಷ ನಾಗರಾಜ ರಾವ್ ತಿಳಿಸಿದ್ದಾರೆ. ಶಾಲೆಯಲ್ಲಿ ಸಿಬ್ಬಂದಿ ಕೊರತೆ ಇಲ್ಲ. ವಿದ್ಯಾಭಿಮಾನಿಗಳು, ಮುಖಂಡರು, ಸೇರಿ ಅಭಿವೃದ್ಧಿ ಗೊಳಿಸಿರುವುದ ರಿಂದ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಳವಾಗಿದೆ ಎಂದು ಟ್ರಸ್ಟ್‌ನ ಕಾರ್ಯಧ್ಯಕ್ಷ ಲಕ್ಷ್ಮಣ್ ಶೆಟ್ಟಿಬಾಲ್ ತಿಳಿಸಿದ್ದಾರೆ. ಹಳೆವಿದ್ಯಾರ್ಥಿಗಳು ದತ್ತು ಪಡೆದ ನಂತರ ಶಾಲೆಯು ಈ ಮಟ್ಟಕ್ಕೆ ಬೆಳೆದಿದೆ. 3 ಕೋಟಿ ವೆಚ್ಚದಲ್ಲಿ ಶಾಲೆಯ ಕಟ್ಟಡ, ಮೂಲಸೌಕರ್ಯಗಳ ಅಭಿವೃದ್ಧಿ ಕಾರ್ಯಗಳು ನಡೆದಿವೆ ಎಂದು ಮುಖ್ಯಶಿಕ್ಷಕಿ ರಮಣಿತಿಳಿಸಿದ್ದಾರೆ.

ಶಾಲೆ ಉಳಿಸಲು ಪಣ: ಕೋಂಜಾಲ್‌ಗುತ್ತು ಅನಿಲ್ ಶೆಟ್ಟಿ ಏಳಿಂಜೆ ನೇತೃತ್ವದಲ್ಲಿ ಶಾಲೆಯ ಹಳೆ ವಿದ್ಯಾರ್ಥಿಗಳ ಸಮ್ಮಿಲನ ನಡೆಸಿ ಅಭಿಪ್ರಾಯ ಸಂಗ್ರಹಿಸಿ, ಅಂಗ್ಲಮಾಧ್ಯಮ ತರಗತಿಗಳನ್ನು ಆರಂಭಿಸುವ ಬಗ್ಗೆ ಶತಮಾನೋತ್ಸವದ ಸಮಾರಂಭದಲ್ಲಿ ಮಹತ್ವದ ನಿರ್ಧಾರ ಕೈಗೊಳ್ಳಲಾಯಿತು. ಅದಕ್ಕಾಗಿ ಹಳೆ ವಿದ್ಯಾರ್ಥಿಗಳು, ಊರಿನ ವಿದ್ಯಾಭಿಮಾನಿಗಳು ಸೇರಿ ನಂದಿಕೂರು ಎಜ್ಯುಕೇಶನ್ ಟ್ರಸ್ಟ್ ರಚಿಸಿ ಅನಿಲ್ ಶೆಟ್ಟಿ ಅವರನ್ನು ಅಧ್ಯಕ್ಷರನ್ನಾಗಿ ಮಾಡಲಾಯಿತು. ಟ್ರಸ್ಟ್ ಮೂಲಕ ಎಲ್‌ಕೆಜಿ ಯಿಂದ ಏಳನೇ ತರಗತಿ ವರೆಗೆ ಶಿಕ್ಷಣವನ್ನೂ ನೀಡುವ ಯೋಜನೆ ಕೈಗೆತ್ತಿಕೊಂಡು ಅತ್ಯಾಧುನಿಕ ಸೌಲಭ್ಯಗಳ ಮೂಲಕ ಶಿಕ್ಷಣ ನೀಡುವ ವ್ಯವಸ್ಥೆ ಕಲ್ಪಿಸಲಾಗಿದೆ.

ಶಿಥಿಲಗೊಂಡಿರುವ ಶಾಲಾ ಕೊಠಡಿಗಳನ್ನು ಟ್ರಸ್ಟ್ ವತಿಯಿಂದ ದಾನಿಗಳ ಸಹಕಾರದಿಂದ 13 ಕೋಟಿ ವೆಚ್ಚದಲ್ಲಿ ದುರಸ್ತಿಗೊಳಿಸಿ ಅಗತ್ಯ ಮೂಲ ಸೌಕರ್ಯಗಳನ್ನು ಕಲ್ಪಿಸಲಾಯಿತು. ಹೊಸ ತಂತ್ರಜ್ಞಾನವನ್ನು ಅಳವಡಿಸಿ ನಲಿ–ಕಲಿ ತರಗತಿಗೆ ಸಲಕರಣೆಗಳ ಜೋಡಣೆ, ವಿದ್ಯಾರ್ಥಿಗಳಿಗೆ ಇಂಗ್ಲಿಷ್ ಕಲಿಕೆಗೆ ಇಂಗ್ಲಿಷ್ ಹಬ್, ಗಣಿತ ಮತ್ತು ವಿಜ್ಞಾನ ಶಿಕ್ಷಣದ ಪ್ರಾಯೋಗಿಕ ಕಲಿಕೆಗಾಗಿ ಕೊಠಡಿ ತೆರೆಯಲಾಗಿದೆ.

# ಪ್ರಯಾಣಿಕರ ಸಂಚಾರ: ಹೊಸ ದಾಖಲೆ ಬರೆದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ




**ಬೆಂಗಳೂರು,ಏ.7:** ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಬೆಂಗಳೂರು 2024–25ರ ಹಣಕಾಸು ವರ್ಷದಲ್ಲಿ ಹೊಸ ದಾಖಲೆ ಬರೆದಿದ್ದು, ಪ್ರಯಾಣಿಕರ ಸಂಚಾರ ಮತ್ತು ಸರಕು ಸಾಗಣೆಯಲ್ಲಿ ಮೈಲಿಗಲ್ಲು ಸೃಷ್ಟಿಸಿದೆ. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೂಲಕ, 2024–25ರ ಹಣಕಾಸು ವರ್ಷದಲ್ಲಿ 41 ದಶಲಕ್ಷ ಪ್ರಯಾಣಿಕರು ಪ್ರಯಾಣಿಸಿದ್ದು, 500,000 ಮೆಟ್ರಿಕ್ ಟನ್ (ಎಂಟಿ) ತೂಕದ ಸರಕುಗಳನ್ನು ಸಾಗಿಸಲಾಗಿದೆ. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೂಲಕ ಕಳೆದ ಹಣಕಾಸು ವರ್ಷದಲ್ಲಿ 37.53 ದಶಲಕ್ಷ ಪ್ರಯಾಣಿಕರು ಪ್ರಯಾಣಿಸಿದ್ದರು. 2024–25ರ ಹಣಕಾಸು ವರ್ಷದಲ್ಲಿ ಪ್ರಯಾಣಿಕರ ಸಂಖ್ಯೆಯಲ್ಲಿ ಏರಿಕೆಯಾಗಿ 41.88 ದಶಲಕ್ಷಕ್ಕೆ ತಲುಪಿದ್ದು, ಶೇ.11.6ರಷ್ಟು ಹೆಚ್ಚಳವಾಗಿದೆ. ದೇಶೀಯ ಪ್ರಯಾಣಿಕರ ಸಂಖ್ಯೆಯು ಶೇ.10ರಷ್ಟು ಬೆಳವಣಿಗೆಯಾಗಿ 36.05 ದಶಲಕ್ಷ ತಲುಪಿದ್ದರೆ, ಅಂತಾರಾಷ್ಟ್ರೀಯ ಪ್ರಯಾಣಿಕರ ಸಂಖ್ಯೆಯು ಶೇ.25ರಷ್ಟು ಹೆಚ್ಚಳವಾಗಿ, 5.83 ದಶಲಕ್ಷಕ್ಕೆ ಏರಿಕೆಯಾಗಿದೆ.ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೂಲಕ ಪ್ರಯಾಣಿಸುವ ಅಂತಾರಾಷ್ಟ್ರೀಯ ಪ್ರಯಾಣಿಕರ ಸಂಖ್ಯೆಯಲ್ಲಿ ಗಣನೀಯವಾಗಿ ಹೆಚ್ಚಳವಾಗಲು, ಇಂಡಿಗೋ ವಿಮಾನಯಾನ ಸಂಸ್ಥೆಯು ತನ್ನ ಜಾಗತಿಕ ಜಾಲವನ್ನು ವಿಸ್ತರಿಸಿರುವುದು ಪ್ರಮುಖ ಕಾರಣವಾಗಿದೆ. ಜೊತೆಗೆ, ಬೆಂಗಳೂರಿನಿಂದ ಲಂಡನ್ ಹೀಥ್ರೂಗೆ ದೈನಂದಿನ ಹೆಚ್ಚುವರಿ ವಿಮಾನ ಹಾರಾಟ, ಕ್ಯಾಥೆ ಪೆಸಿಫಿಕ್, ಕೆಎಲ್‌ಎಂ, ಜಪಾನ್ ಏರ್ಲೈನ್ಸ್, ಕ್ವಾಂಟಾಸ್ ಸೇರಿದಂತೆ ಹಲವು ವಿದೇಶಿ ವಿಮಾನಯಾನ ಸಂಸ್ಥೆಗಳು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೂಲಕ ಒದಗಿಸುವ ವಿಮಾನ ಸೇವೆಯನ್ನು ಇನ್ನಷ್ಟು ಹೆಚ್ಚಿಸಿರುವುದು ಸಹ ಅಂತಾರಾಷ್ಟ್ರೀಯ ಪ್ರಯಾಣಿಕರ ಸಂಖ್ಯೆಯ ಹೆಚ್ಚಳಕ್ಕೆ ಕಾರಣವಾಗಿದೆ.ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು, ಕಳೆದ ನಾಲ್ಕು ತಿಂಗಳುಗಳಿಂದ ಅಂತಾರಾಷ್ಟ್ರೀಯ ಪ್ರಯಾಣಿಕರ ಸಂಖ್ಯೆಯಲ್ಲಿ ಭಾರತದ ಮೂರನೇ ಅತ್ಯಂತ ಜನನಿಬಿಡ ವಿಮಾನ ನಿಲ್ದಾಣವಾಗಿ ಸ್ಥಾನ ಪಡೆದುಕೊಂಡಿದೆ. 76 ದೇಶೀಯ ಮತ್ತು 33 ಅಂತಾರಾಷ್ಟ್ರೀಯ ತಾಣಗಳಿಗೆ ಬೆಂಗಳೂರಿನಿಂದ ತಡೆರಹಿತ ವಿಮಾನ ಸೇವೆ ಲಭ್ಯವಿದ್ದು, ಇದೇ ವರ್ಷದ ಮೇ ತಿಂಗಳಿನಿಂದ ವಿಯೆಟ್ನಾಂನ ಹನೋಯಿ ನಗರಕ್ಕೆ ಆರಂಭವಾಗಲಿರುವ ವಿಮಾನ ಸೇವೆಯು 34ನೇ ಅಂತಾರಾಷ್ಟ್ರೀಯ ತಾಣವಾಗಿ ಹೊರಹೊಮ್ಮಲಿದೆ.

ಸರಕು ಸಾಗಣೆಯಲ್ಲಿಯೂ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ದಾಖಲೆ ನಿರ್ಮಿಸಿದೆ. ಇದೇ ಮೊದಲ ಬಾರಿಗೆ, 500,000 ಮೆಟ್ರಿಕ್ ಟನ್ನಿಗಿಂತ ಹೆಚ್ಚು ಸರಕು ಸಾಗಣೆ ಮಾಡುವ ಮೂಲಕ ಮಹತ್ವದ ಮೈಲಿಗಲ್ಲು ಸಾಧಿಸಿದೆ. 2024–25ರ ಆರ್ಥಿಕ ವರ್ಷದಲ್ಲಿ ಒಟ್ಟು 502,480 ಮೆಟ್ರಿಕ್ ಟನ್ ಸರಕನ್ನು ಸಾಗಣೆ ಮಾಡಲಾಗಿದ್ದು, ವರ್ಷದಿಂದ ವರ್ಷಕ್ಕೆ ಗಮನಾರ್ಹವಾದ ಶೇ.14ರಷ್ಟು ಬೆಳವಣಿಗೆ ದಾಖಲಾಗುತ್ತಿದೆ.ಈ ಪೈಕಿ, ಅಂತಾರಾಷ್ಟ್ರೀಯ ಸರಕು ಸಾಗಣೆಯಲ್ಲಿ ಶೇ.21ರಷ್ಟು ಏರಿಕೆಯಾಗಿದ್ದು, ಒಟ್ಟು 321,418 ಮೆಟ್ರಿಕ್ ಟನ್ ಸರಕು ಸಾಗಿಸಲಾಗಿದೆ. ದೇಶೀಯ ಸರಕು ಸಾಗಣೆಯಲ್ಲಿ ಶೇ.4% ರಷ್ಟು ಏರಿಕೆಯಾಗಿದ್ದು, 181,062 ಮೆಟ್ರಿಕ್ ಟನ್ ತಲುಪಿದೆ. ಸತತ ನಾಲ್ಕನೇ ವರ್ಷ, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಕೊಳೆತು ಹೋಗುವ ಪದಾರ್ಥಗಳ ರಫ್ತಿನಲ್ಲಿ ಭಾರತದ ನಂ.1 ವಿಮಾನ ನಿಲ್ದಾಣವಾಗಿ ಹೊರಹೊಮ್ಮುವ ಮೂಲಕ ತನ್ನ ಸ್ಥಾನವನ್ನು ಬಲಪಡಿಸಿಕೊಂಡಿದೆ. ಇದು ದೇಶದ ಕೃಷಿ ಪೂರೈಕೆ ಸರಪಳಿಯನ್ನು ಬಲಪಡಿಸುವಲ್ಲಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಪಾತ್ರವನ್ನುಒತ್ತಿ ಹೇಳುತ್ತದೆ. ಜೊತೆಗೆ, ವಿಮಾನ ನಿಲ್ದಾಣವು ಮಾವು ಮತ್ತು ಕೊತ್ತಂಬರಿ ಸೊಪ್ಪಿನ ರಫ್ತಿನಲ್ಲಿ ಮುನ್ನಡೆ ಸಾಧಿಸಿದ್ದು, ಸಿದ್ಧ ಉಡುಪುಗಳು, ಔಷಧಗಳು ಮತ್ತು ಯಂತ್ರೋಪಕರಣಗಳ ಭಾಗಗಳ ಸಾಗಣೆಯಲ್ಲೂ ಹೆಚ್ಚಳವಾಗಿದೆ. ಸರಕು ಸಾಗಣೆಗೆ ಮೀಸಲಾದ 12 ವಿಮಾನಯಾನ ಸಂಸ್ಥೆಗಳ ಮೂಲಕ, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಬೆಂಗಳೂರಿನಿಂದ ಸಿಂಗಾಪುರ, ಲಂಡನ್, ಫ್ರಾಂಕ್‌ಫರ್ಟ್, ಚಿಕಾಗೊ ಮತ್ತು ಮಸ್ಕತ್ನಂತಹ ಪ್ರಮುಖ ರಫ್ತು ಕೇಂದ್ರಿತ ನಗರಗಳನ್ನು ಸಂಪರ್ಕಿಸುತ್ತದೆ. ಶೆನ್ಜೆನ್, ಸಿಂಗಾಪುರ್, ಶಾಂಘೈ, ಹಾಂಗ್ ಕಾಂಗ್ ಮತ್ತು ಫ್ರಾಂಕ್‌ಫರ್ಟ್ ನಗರಗಳು ಕೆಂಪೇಗೌಡ ಅಂತಾರಾಷ್ಟ್ರೀಯ ನಿಲ್ದಾಣಕ್ಕೆ ಸರಕುಗಳು ಆಮದಾಗುವ ಪ್ರಮುಖ ತಾಣಗಳಾಗಿವೆ.ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿಯಮಿತದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಾತ್ಯಕಿ ರಘುನಾಥ್ ಅವರು ಮಾತನಾಡಿ, "ಬೆಂಗಳೂರು ಮತ್ತು ಭಾರತದಲ್ಲಿ ವಾಯುಯಾನದ ಬೆಳವಣಿಗೆಯ ಬಗ್ಗೆ ನಾವು ಉತ್ಸುಕರಾಗಿದ್ದೇವೆ. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು, ದಕ್ಷಿಣ ಮತ್ತು ಮಧ್ಯ ಭಾರತದ ಹೆಬ್ಬಾಗಿಲಾಗಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ. ಮುಂದಿನ ಕೆಲವು ವರ್ಷಗಳಲ್ಲಿ ವಾಯುಯಾನ ಪ್ರದೇಶ, ಲ್ಯಾಂಡ್ಸೈಡ್ ಮತ್ತು ಟರ್ಮಿನಲ್ ಸಾಮರ್ಥ್ಯಗಳ ವಿಸ್ತರಣೆಗೆ ಇನ್ನಷ್ಟು ಹೂಡಿಕೆ ಹೆಚ್ಚಿಸುವತ್ತ ಗಮನಹರಿಸಲಾಗಿದೆ. ಮುಂದಿನ ಐದು ವರ್ಷಗಳಲ್ಲಿ 17,000 ಕೋಟಿಗಿಂತಲೂ ಹೆಚ್ಚು ಹೂಡಿಕೆಯೊಂದಿಗೆ, ಈ ಪ್ರದೇಶದಲ್ಲಿ ಪ್ರಯಾಣಿಕರು ಮತ್ತು ಸರಕು ಸಾಗಣೆಯ ಹೆಚ್ಚುತ್ತಿರುವ ಬೇಡಿಕೆಗಳನ್ನು ಪೂರೈಸಲು ನಾವು ಸಿದ್ಧರಾಗಿದ್ದೇವೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಬೆಂಗಳೂರು, ಗಮನಾರ್ಹವಾದ ಬೆಳವಣಿಗೆ ಸಾಧಿಸುತ್ತಿದ್ದು, ಸಾಧನೆಗಳತ್ತ ಮುನ್ನುಗ್ಗುತ್ತಿದೆ. ಈ ಮೂಲಕ, ಜಾಗತಿಕವಾಗಿ ಪ್ರಮುಖ ವಿಮಾನಯಾನ ಕೇಂದ್ರಗಳಲ್ಲಿ ಒಂದಾಗಿ ಬದ್ಧತೆಯನ್ನು ಹೆಚ್ಚಿಸಿಕೊಂಡಿದೆ.



ನವದೆಹಲಿಯಲ್ಲಿ ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಅವರ ಸಮ್ಮುಖದಲ್ಲಿ ಸೋಮವಾರ Mi–17 V5 ಹೆಲಿಕಾಪ್ಟರ್‌ಗಳಿಗೆ ಎಲೆಕ್ಟ್ರಾನಿಕ್ ವಾರ್‌ಫೇರ್ ಸೂಟ್‌ಗಳು ಮತ್ತು ವಿಮಾನ ಮಾರ್ಪಾಡು ಕಿಟ್‌ಗಳನ್ನು ಸ್ವಾಧೀನಪಡಿಸಿಕೊಳ್ಳಲು ರಕ್ಷಣಾ ಸಚಿವಾಲಯವು ಬೆಂಗಳೂರಿನ ಭಾರತ್ ಎಲೆಕ್ಟ್ರಾನಿಕ್ಸ್ ಜತೆ ಒಪ್ಪಂದಕ್ಕೆ ಸಹಿ ಹಾಕಿದೆ.

## ಜಾಮೀನು ಷರತ್ತು ಸಡಿಲಿಕೆ ಕೋರಿ ಯಡಿಯೂರಪ್ಪ ಪರ ವಕೀಲರ ಮನವಿ

**ಬೆಂಗಳೂರು,ಏ.7:** ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಅವರ ವಿರುದ್ಧ ಪೋಕ್ಸೋ ಪ್ರಕರಣಕ್ಕೆ ಸಂಬಂಧಪಟ್ಟಂತೆ ಇಂದು ಹೈಕೋರ್ಟ್‌ನಲ್ಲಿ ಪ್ರಕರಣ ಸಂಬಂಧ ಜಾಮೀನು ಷರತ್ತು ಸಡಿಲಿಕೆ ಕೋರಿ ಬಿಎಸ್ ಯಡಿಯೂರಪ್ಪ ಪರ ವಕೀಲರು ಮನವಿ ಮಾಡಿದರು. ಬಳಿಕ ನ್ಯಾ.ಪ್ರದೀಪ್ ಸಿಂಗ್ ಯೆರೂರ್ ಹಿರಿಯ ರಾಜಕಾರಣಿ ಆಗಿ ಖಂಡನೀಯ ಕೃತ್ಯ ನಡೆಸಬಾರದು ಇತರರಿಗೆ ಮಾದರಿಯಾಗಿರಬೇಕು ಎಂದು ಅಭಿಪ್ರಾಯಪಟ್ಟತು.ಬಳಿಕ ವಿಚಾರಣೆಯನ್ನು ಮುಂದೂಡಿದರು. ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ವಿರುದ್ಧ ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆ ಆರಂಭವಾದಾಗ ಜಾಮೀನು ಷರತ್ತು ಸಡಿಲಿಕೆ ಕೋರಿ ಬಿಎಸ್ ಯಡಿಯೂರಪ್ಪ ಪರ ವಕೀಲರು ಮನವಿ ಮಾಡಿದರು. ಕೋರ್ಟ್ ವ್ಯಾಪ್ತಿ ಬಿಟ್ಟು ತೆರಳದಂತೆ ವಿಧಿಸಿದ ಷರತ್ತು ಸಡಿಲಿಕೆಗೆ ಮನವಿ ಮಾಡಿದರು. ಹಿರಿಯ ರಾಜಕಾರಣಿ ಆಗಿರುವುದರಿಂದ ದೆಹಲಿಗೆ ತೆರಳಬೇಕಿದೆ.ಅಲ್ಲದೆ ರಾಜಕೀಯ ಪಕ್ಷದ ಸಂಸದೀಯ ಸಮಿತಿ ಸದಸ್ಯರಾಗಿದ್ದಾರೆ. ಹೀಗಾಗಿ ಷರತ್ತು ಸಡಿಲಿಸಲು ಬಿಎಸ್ ಯಡಿಯೂರಪ್ಪ ಪರ ವಕೀಲರು ಮನವಿ ಮಾಡಿದರು. ಹಿರಿಯ ರಾಜಕಾರಣಿಯಾಗಿ ಖಂಡನೀಯ ಕೃತ್ಯ ನಡೆಸಬಾರದು. ಇತರರಿಗೆ ಮಾದರಿಯಾಗುವಂತಹ ನಡವಳಿಕೆ ಇರಬೇಕು ಎಂದು ನ್ಯಾ. ಪ್ರದೀಪ್ ಸಿಂಗ್ ಯೆರೂರ್ ಅವರಿದ ಹೈಕೋರ್ಟ್ ಪೀಠ ಅಭಿಪ್ರಾಯಪಟ್ಟಿತು. ಈ ಆರೋಪ ಸುಳ್ಳೆಂಬ ಕಾರಣಕ್ಕೆ ವಿಚಾರಣೆಗೆ ತಡೆ ನೀಡಲಾಗಿದೆ ಎಂದು ಹೈಕೋರ್ಟಿಗೆ ಬಿಎಸ್ ಯಡಿಯೂರಪ್ಪ ಪರ ವಕೀಲರು ಪ್ರತಿಕ್ರಿಯೆ ನೀಡಿದರು. ಆಕ್ಷೇಪಣೆ ಸಲ್ಲಿಸಲು ಖಕಕ ಗೆ ಕಾಲಾವಕಾಶ ನೀಡಿ ವಿಚಾರಣೆಯನ್ನು ಹೈಕೋರ್ಟ್ ಪೀಠ ಮುಂದೂಡಿತು.

## ಜನಾಕ್ರೋಶ ರ್‍ಯಾಲಿಗೆ ಕಾಂಗ್ರೆಸ್ ತಿರುಗೇಟು

**ಬೆಂಗಳೂರು,ಏ.7:** ಬಿಜೆಪಿಯ ಜನಾಕ್ರೋಶ ರ್‍ಯಾಲಿಗೆ ಕಾಂಗ್ರೆಸ್ ತಿರುಗೇಟು ನೀಡಿದ್ದು, ಕೇಂದ್ರ ಸರ್ಕಾರದ ನೀತಿಗಳಿಂದ ದೈನಂದಿನ ಬೆಲೆ ಏರಿಕೆ ಗಗನ ಮುಟ್ಟಿದೆ. ಮೊದಲು ಅದರ ವಿರುದ್ಧ ಪ್ರತಿಭಟನೆ ಮಾಡಲಿ ಎಂದು ಆಕ್ರೋಶ ವ್ಯಕ್ತಪಡಿಸಲಾಗಿದೆ.ಸುದ್ದಿಗಾರರೊಂದಿಗೆ ಮಾತನಾಡಿರುವ ಹಲವು ಸಚಿವರು, ಬಿಜೆಪಿಯ ಪ್ರತಿಭಟನೆಗೆ ತಿರುಗೇಟು ನೀಡಿದ್ದಾರೆ.

ಸಚಿವ ಎಂ.ಬಿ.ಪಾಟೀಲ್ ಮಾತನಾಡಿ, ಬಿಜೆಪಿ ಸರ್ಕಾರದ ಅವಧಿಯಲ್ಲಿ ಕರೋನಾದಲ್ಲೂ ಭ್ರಷ್ಟಾಚಾರ ಮಾಡಲಾಯಿತು. ಬಿಜೆಪಿಯವರೇ ಆಗಿದ್ದ ಬಸನಗೌಡ ಪಾಟೀಲ್ ಯತ್ನಾಳ್ ಅವರೇ ಈ ಬಗ್ಗೆ ಹೇಳಿಕೆ ನೀಡಿದ್ದರು. ಕಾಂಗ್ರೆಸ್ ಅನ್ನು ಟೀಕಿಸುವ ಮುನ್ನ ಬಿಜೆಪಿಯವರು ಆತ್ಮಾವಲೋಕನ ಮಾಡಿಕೊಳ್ಳಲಿ ಎಂದು ಲೇವಡಿ ಮಾಡಿದ್ದಾರೆ.

ಬಿಜೆಪಿಯಲ್ಲಿ ಆಂತರಿಕ ಸಮಸ್ಯೆಗಳು ನೂರಾರಿವೆ. ಮನೆಯೊಂದು ನೂರು ಬಾಗಿಲು ಎಂಬಂತಾಗಿದೆ. ಅದನ್ನು ದಿಕ್ಕು ತಪ್ಪಿಸಲು ಪ್ರತಿಭಟನೆ ಎಂಬ ಯಾತ್ರೆ ಆರಂಭಿಸಿದ್ದಾರೆ. ಬಿಜೆಪಿಯವರು ಅಧಿಕಾರದಲ್ಲಿದ್ದಾಗ ಕೋಟ್ಯಂತರ ರೂಪಾಯಿ ಬಾಕಿ ಬಿಲ್ಗಳನ್ನು ಉಳಿಸಿ ಹೋಗಿದ್ದರು. ಅವರು ಮಾಡಿದ ಪಾಪವನ್ನು ನಾವು ತೀರಿಸುತ್ತಿದ್ದೇವೆ ಎಂದು ತಿರುಗೇಟು ನೀಡಿದರು. ಹಿಂದಿನ ಹಣಕಾಸಿನ ತೊಂದರೆಗೆ ಬಿಜೆಪಿಯವರು ಬೇಕಾಬಿಟ್ಟಿ ಕಾಮಗಾರಿಗಳನ್ನು ಗುತ್ತಿಗೆ ನೀಡಿದ್ದೇ ಕಾರಣ ಎಂದು ವಾಗ್ದಾಳಿ ನಡೆಸಿದರು. ಮತ್ತೊಬ್ಬ ಶಾಸಕ ಈಶ್ವರ್ ಖಂಡ್ರೆ ಮಾತನಾಡಿ, ಬಿಜೆಪಿಯವರಿಗೆ ನೈಜ ಕಾಳಜಿಯಿಲ್ಲ. ಅವರು ಹೋರಾಟ ನಡೆಸಬೇಕಾಗಿರುವುದು ಕೇಂದ್ರ ಸರ್ಕಾರದ ವಿರುದ್ಧ. ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆಯಿಂದ ಜೀವನಾವಶ್ಯಕ ವಸ್ತುಗಳ ಬೆಲೆ ಏರಿಕೆಯಾಗಿದೆ. ತೈಲ ಬೆಲೆ ಏರಿಕೆಯಿಂದ ಕೋಟ್ಯಾಧಿಪತಿಗಳಿಗೆ ಅನುಕೂಲವಾಗಿದೆ.

ಬಡವರಿಗೆ ತೊಂದರೆಯಾಗಿದೆ. ಮೊದಲು ಪೆಟ್ರೋಲ್, ಡೀಸೆಲ್ ಮೇಲಿನ ದರ ಕಡಿಮೆ ಮಾಡಲಿ ಎಂದು ಸವಾಲು ಹಾಕಿದರು.ರಾಜ್ಯಸರ್ಕಾರದ ಗ್ಯಾರಂಟಿ ಯೋಜನೆಗಳ ಅಧ್ಯಯನಕ್ಕೆ ಬೇರೆಬೇರೆ ರಾಜ್ಯಗಳಿಂದಲೂ ಜನ ಆಗಮಿಸುತ್ತಿದ್ದಾರೆ. ಇದನ್ನು ನೋಡಿ ಬಿಜೆಪಿಯವರಿಗೆ ಹೊಟ್ಟೆ ಉರಿಯುತ್ತಿದೆ ಎಂದರು. ಕೆಪಿಸಿಸಿ ಅಧ್ಯಕ್ಷ ಸ್ಥಾನ ಸದ್ಯಕ್ಕೆ ಖಾಲಿ ಇಲ್ಲ. ಹಾಗಾಗಿ ಅದರ ಬಗ್ಗೆ ಚರ್ಚೆ ಅನಗತ್ಯ. ಹೈಕಮಾಂಡ್ ಯಾವುದೇ ತೀರ್ಮಾನ ತೆಗೆದುಕೊಂಡರೂ ನಾವು ಅದಕ್ಕೆ ಬದ್ಧರಾಗಿರುತ್ತೇವೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

## ಕೈಗಾರಿಕೆಗಳಿಂದ ಉಂಟಾಗುತ್ತಿರುವ ಮಾಲಿನ್ಯ ವಿರುದ್ಧ ಕ್ರಮ: ಸಚಿವ ಎಂಬಿ ಪಾಟೀಲ್ ಸೂಚನೆ



**ಬೆಂಗಳೂರು:ಏ.7:** ರಾಜ್ಯದ ಎಲ್ಲಾ 215 ಕೈಗಾರಿಕಾ ಪ್ರದೇಶಗಳಲ್ಲಿ ಇರುವ ಕೈಗಾರಿಕೆಗಳಿಂದ ಉಂಟಾಗುತ್ತಿರುವ ವಿವಿಧ ರೀತಿಯ ಮಾಲಿನ್ಯ ಕುರಿತು ಭಾರತೀಯ ವಿಜ್ಞಾನ ಸಂಸ್ಥೆ (ಐಐಎಸ್ಸಿ), ಐಐಟಿ ತರಹದ ಉನ್ನತ ಮಟ್ಟದ ಸಂಸ್ಥೆಗಳಿಂದ ವಿಸ್ತೃತ ಅಧ್ಯಯನ ನಡೆಸಿ ಸೂಕ್ತ ಕ್ರಮ ತೆಗೆದುಕೊಳ್ಳಲು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಅವರು ತಮ್ಮ ಇಲಾಖೆಯ ಹಿರಿಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಸೆಲ್ವಕುಮಾರ್, ಆಯುಕ್ತರಾದ ಗುಂಜನ್ ಕೃಷ್ಣ, ಕೆಐಎಡಿಬಿ ಸಿಇಒ ಡಾ.ಮಹೇಶ ಸೇರಿದಂತೆ ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ಅವರು ಸೋಮವಾರ ಸಭೆ ನಡೆಸಿದರು. ಕೈಗಾರಿಕಾ ಪ್ರದೇಶಗಳಲ್ಲಿ ಉದ್ಯಮ ನಡೆಸಲು ಅನುಮತಿ ನಡೆಸುವಾಗ ಸರಕಾರವು ಹಲವು ಮಾನದಂಡಗಳನ್ನು ನೀಡಿರುತ್ತದೆ. ಆದರೆ ನಂತರದ ದಿನಗಳಲ್ಲಿ ಏನಾಗುತ್ತದೆ ಎನ್ನುವುದರ ಪರಿಶೀಲನೆ ಕೂಡ ಅಗತ್ಯ. ಉದ್ಯಮಗಳನ್ನು ಬೆಳೆಸುವ ಜೊತೆಯಲ್ಲೇ ನಾವು ನೆಲ, ಜಲ, ವಾಯು, ಕೃಷಿ ಮತ್ತು ಮನುಷ್ಯರ ಮೇಲಾಗುತ್ತಿರುವ ಪರಿಣಾಮಗಳನ್ನೂ ಅಧ್ಯಯನ ಮಾಡಿ, ಅವುಗಳನ್ನು ಸುರಕ್ಷಿತವಾಗಿ ಇಟ್ಟುಕೊಳ್ಳಬೇಕಾದ ಅನಿವಾರ್ಯ ಪರಿಸ್ಥಿತಿ ಇದೆ ಎಂದು ಅವರು ತಿಳಿಸಿದ್ದಾರೆ.

ಈ ನಿಟ್ಟಿನಲ್ಲಿ ಕೈಗಾರಿಕಾ ಮಾಲಿನ್ಯ ಕುರಿತು ಉನ್ನತ ಮಟ್ಟದ ತಂಡಗಳಿಂದ ಅಧ್ಯಯನ ನಡೆಸಲಾಗುವುದು. ಈ ತಂಡಗಳು ಎಲ್ಲಾ ಕೈಗಾರಿಕಾ ಪ್ರದೇಶಗಳಿಗೂ ಖುದ್ದು ಭೇಟಿ ನೀಡಲಿವೆ. ಜತೆಗೆ ಮಾಲಿನ್ಯದ ತೀವ್ರತೆ ಆಧರಿಸಿ, ಆಯಾ ಉದ್ಯಮಗಳು ಯಾವ ಬಗೆಯ ಪರಿಹಾರ ಕ್ರಮಗಳನ್ನು ಅಳವಡಿಸಿಕೊಳ್ಳಬೇಕು ಎನ್ನುವುದನ್ನೂ ಈ ಸಮಿತಿಯೇ ತಿಳಿಸಲಿದೆ ಎಂದು ಅವರು ವಿವರಿಸಿದ್ದಾರೆ. ಈ ಉದ್ದೇಶಕ್ಕಾಗಿ ಸೂಕ್ತ ಸಂಸ್ಥೆಯನ್ನು ಗುರುತಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಈ ತಂಡಗಳು ನಿರ್ದಿಷ್ಟ ಕಾಲಮಿತಿಯಲ್ಲಿ ತಮ್ಮ ವರದಿ ಸಲ್ಲಿಸುವಂತೆ ಸೂಚಿಸಬೇಕು ಅವರು ಸಲಹೆ ನೀಡಿದ್ದಾರೆ. ಸಭೆಯಲ್ಲಿ ಸಚಿವರ ತಾಂತ್ರಿಕ ಸಲಹೆಗಾರ ಡಾ.ಅರವಿಂದ ಗಲಗಲಿ ಸೇರಿದಂತೆ ಇತರ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

## ಲಾರಿ ಮುಷ್ಕರಕ್ಕೆ ಚಾಲಕರ ಬೆಂಬಲ

**ಬೆಂಗಳೂರು,ಏ,7;** ಡೀಸೆಲ್ , ಟೋಲ್ ದರ ಏರಿಕೆ ಖಂಡಿಸಿ ಏಪ್ರಿಲ್ 15 ರಿಂದ ಲಾರಿ ಔಟ್ ಸಂಘ ಕರೆ ನೀಡಿರುವ ಅನಿರ್ದಿಷ್ಟಾವಧಿ ಲಾರಿ ಮುಷ್ಕರಕ್ಕೆ ನಮ್ಮ ಬೆಂಬಲವಿದೆ ಎಂದು ಇಂಡಿಯನ್ ವೆಹಿಕಲ್ ಡ್ರೈವರ್ಸ್ ಟ್ರೇಡ್ ಯೂನಿಯನ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ ಹೇಳಿದ್ದಾರೆ.

ಮುಷ್ಕರವನ್ನು ಬೆಂಬಲಿಸಿ ರಾಜ್ಯದಲ್ಲಿ ಚಾಲಕರು ವಾಹನಗಳ ಸಂಚಾರವನ್ನು ಬಂದ್ ಮಾಡಲಿದ್ದಾರೆ. ಡೀಸೆಲ್ ಬೆಲೆ 7 ತಿಂಗಳಿನಲ್ಲಿ 5 ರೂ ಏರಿಕೆಯಾಗಿದೆ. ಟೋಲ್ ದರ ದುಬಾರಿ, ಹೆದ್ದಾರಿಗಳಲ್ಲಿ ಸಂಚರಿಸಲು ಸಾಧ್ಯವಾಗದ ಪರಿಸ್ಥಿತಿ ಇದೆ. ಟೋಲ್ ದರ ಏರಿಕೆಯಿಂದ ಇನ್ನಷ್ಟು ಸಮಸ್ಯೆಗಳು ತಲೆ ದೋರಲಿದೆ. ಡೀಸೆಲ್ ದರ ಏರಿಕೆಯನ್ನು ಕೈಬಿಡಬೇಕು ಎಂದು ಒತ್ತಾಯಿಸಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಫಿಟ್ನೆಸ್ ಫೀಸ್ , ಬಾರ್ಡರ್ ಚೆಕ್ ಪೋಸ್ಟ್ , ಡಿಸೇಲ್ ದರ ಇಳಿಕೆ ಸೇರಿದಂತೆ ಪ್ರಮುಖ ಬೇಡಿಕೆಗಳನ್ನು ಕೋರುವಂತೆ ಒತ್ತಾಯಿಸಿ ಲಾರಿ ಸಂಘ ಮುಷ್ಕರಕ್ಕೆ ಕರೆ ನೀಡಿದೆ. ಬೇಡಿಕೆಯ ತನಕ ಹೋರಾಟಕ್ಕೆ ನಮ್ಮ ಬೆಂಬಲ ಇರಲಿದೆ ಎಂದು ಹೇಳಿದರು. ಮುಷ್ಕರ ಬೆಂಬಲಿಸಿ ಏರ್‌ಪೋಟ್ ಟ್ಯಾಕ್ಸಿ , ಜಲ್ಲಿ ಮರಳು , ಸೇರಿದಂತೆ ಗೂಡ್ಸ್ ವಾಹನಗಳು ಸಹ ಬಂದ್ ಆಗಲಿವೆ. ಕೇಂದ್ರ ಮತ್ತು ರಾಜ್ಯ ಸರ್ಕಾರ ಡೀಸೆಲ್ ಮೇಲೆ ಅನಗತ್ಯವಾಗಿ ತೆರಿಗೆ ಹೊರೆ ಹಾಕಿದರೆ, ಇದರ ಬೆಲೆ ಏರಿಕೆಯಾಗಲಿದೆ. ಹೆಚ್ಚಾಗುತ್ತಿರುವ ಬೆಲೆ ಮತ್ತು ಹಣದುಬ್ಬರದ ನಡುವೆ ಚಾಲಕರು ಜೀವನ ನಿರ್ವಹಣೆ ಮಾಡಲು ಸಾಧ್ಯವಾಗುತ್ತಿಲ್ಲ. ಸರ್ಕಾರದ ಬೊಕ್ಕಸ ತುಂಬಿಸಲು ತೆರಿಗೆ ಹೆಚ್ಚಳ, ಚಾಲಕ ಸಮುದಾಯಕ್ಕೆ ಮಾತ್ರ ವೇತನ ಹೆಚ್ಚಾಗುತ್ತಿಲ್ಲ. ಹೀಗಾಗಿ ಹೋರಾಟಕ್ಕೆ ನಮ್ಮ ಬೆಂಬಲವಿದೆ ಎಂದು ಇಂಡಿಯನ್ ವೆಹಿಕಲ್ ಡ್ರೈವರ್ಸ್ ಟ್ರೇಡ್ ಯೂನಿಯನ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ ಸ್ಪಷ್ಟಪಡಿಸಿದರು.

## ಭೋವಿ ಅಭಿವೃದ್ಧಿ ನಿಗಮದ ಅವ್ಯವಹಾರ ಹಣ ದುರುಪಯೋಗ ಸಾಬೀತು: ಇ.ಡಿ

**ಬೆಂಗಳೂರು,ಏ.7:**ರಾಜ್ಯ ಭೋವಿ ಅಭಿವೃದ್ಧಿ ನಿಗಮದ ಅವ್ಯವಹಾರ ಸಂಬಂಧ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಇತ್ತೀಚೆಗೆ ನಡೆಸಿದ ದಾಳಿಯಲ್ಲಿ 97 ಕೋಟಿ ರೂಗಳು ದುರುಪಯೋಗ ಮಾಡಿರುವುದು ಪತ್ತೆಯಾಗಿದೆ. ಭೋವಿ ಸಮುದಾಯದ ಏಜೆಂಟರ ಮೂಲಕ ನಕಲಿ ಫಲಾನುಭವಿಗಳ ಬ್ಯಾಂಕ್ ಖಾತೆ ಬಳಸಿಕೊಂಡು ಹಣ ವರ್ಗಾವಣೆ ಮಾಡಿಸಿಕೊಂಡು ಕೆಬಿಡಿಸಿಯಿಂದ ಹಣವನ್ನು ಬೇರೆಡೆಗೆ ವರ್ಗಾವಣೆ ಮಾಡಿರುವುದನ್ನು ಬಂಧಿತ ನಿಗಮದ ಮಾಜಿ ವ್ಯವಸ್ಥಾಪಕ ನಿರ್ದೇಶಕ ಬಿ.ಕೆ.ನಾಗರಾಜಪ್ಪ ಬಾಯ್ಬಿಟ್ಟಿದ್ದಾರೆ. ದಾಳಿ ವೇಳೆ ಸಂಗ್ರಹಿಸಿದ ಪುರಾವೆಗಳ ಆಧಾರದ ಮೇಲೆ ಬಂಧಿಸಿದ್ದ ನಾಗರಾಜಪ್ಪ. ನಕಲಿ ಖಾತೆಗಳನ್ನು ಬಳಸಿಕೊಂಡು ತಮ್ಮ ಸ್ನೇಹಿತರು ಮತ್ತು ಕುಟುಂಬ ಸದಸ್ಯರ ಬ್ಯಾಂಕ್ ಖಾತೆಗಳಲ್ಲಿ ಹಣ ವರ್ಗಾವಣೆ ಮಾಡಿರುವುದು ಪತ್ತೆಯಾಗಿದೆ. ಹಗರಣದ ಸಂಬಂಧ ಬಂಧಿತ ನಾಗರಾಜಪ್ಪರನ್ನು ನಿನ್ನೆ ನ್ಯಾಯಾಲಯಕ್ಕೆ ಹಾಜರುಪಡಿಸಿ 14 ದಿನಗಳ ಕಾಲ ಕಸ್ಟಡಿಗೆ ಪಡೆದುಕೊಂಡು ಇಡಿ ಅಧಿಕಾರಿಗಳು ವಿಚಾರಣೆ ನಡೆಸಿದ್ದಾರೆ. ಅಂಬೇಡ್ಕರ್ ರಸ್ತೆಯಲ್ಲಿನ ವಿವಿ ಟವರ್ನಲ್ಲಿರುವ ನಿಗಮದ ಕಚೇರಿ ಸೇರಿದಂತೆ ಹಗರಣದ ಆರೋಪಿಗಳು, ಅನುಮಾನಿತರಿಗೆ ಸಂಬಂಧಿಸಿದ ಸ್ಥಳಗಳಲ್ಲಿ ಏ.4ರಂದು ಇಡಿ ಅಧಿಕಾರಿಗಳು ಶೋಧಕಾರ್ಯ ನಡೆಸಿದ್ದರು. ಪರಿಶೀಲನೆ ವೇಳೆ ಹಗರಣಕ್ಕೆ ಸಂಬಂಧಿಸಿದ ಪ್ರಮುಖ ದಾಖಲೆಗಳು, ಡಿಜಿಟಲ್ ದಾಖಲೆಗಳು, ಆಸ್ತಿ ವಿವರಗಳನ್ನು ವಶಪಡಿಸಿಕೊಳ್ಳಲಾಗಿದೆ ಹಾಗೂ ನಿಗಮದ ಮಾಜಿ ವ್ಯವಸ್ಥಾಪಕ ನಿರ್ದೇಶಕ ನಾಗರಾಜಪ್ಪ ಅವರನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

### ಏನಿದು ಆರೋಪ

**ಭೋವಿ ಅಭಿವೃದ್ಧಿ ನಿಗಮದ ಉದ್ಯಮಶೀಲತಾ ಯೋಜನೆ ಮತ್ತು ನೇರ ಸಾಲ ಯೋಜನೆಗಳಡಿ ಲಕ್ಷಾಂತರ ರೂ. ಸಾಲ ಕೊಡಿಸುವುದಾಗಿ ಮಧ್ಯವರ್ತಿಗಳ ಮೂಲಕ ಆಮಿಷವೊಡ್ಡಿ ಸಾರ್ವಜನಿಕರ ಗುರುತಿನ ದಾಖಲೆಗಳು, ಬ್ಯಾಂಕ್ ಚೆಕ್ ಪಡೆದು ದುರ್ಬಳಕೆ ಮಾಡಿಕೊಂಡಿರುವುದು ತನಿಖೆಯಲ್ಲಿ ಪತ್ತೆಯಾಗಿತ್ತು. ಈ ಹಿನ್ನೆಲೆ ಇಡಿ ಅಧಿಕಾರಿಗಳು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದರು. ಈ ವೇಳೆ ವಿಚಾರಣೆ ನಡೆಸಿದ ವೇಳೆ ಸರಿಯಾದ ಮಾಹಿತಿ ನೀಡದಿದ್ದರಿಂದ ಬಂಧಿಸಿ ವಿಚಾರಣೆಗೊಳಪಡಿಸಿದ್ದಾರೆ ಎಂದು ವರದಿಯಾಗಿದೆ.**

## ಪ್ರಜ್ವಲ್ ಅತ್ಯಾಚಾರ ಪ್ರಕರಣ ಏ.17ಕ್ಕೆ ವಿಚಾರಣೆ ಮುಂದೂಡಿಕೆ

**ಬೆಂಗಳೂರು,ಏ.7:** ಹಾಸನ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಪಟ್ಟಂತೆ ಹೈಕೋರ್ಟ್‌ಗೆ ಸಲ್ಲಿಸಿದ್ದ ಜಾಮೀನು ಅರ್ಜಿ ವಿಚಾರಣೆಯನ್ನು ಏ.15ಕ್ಕೆ ಮುಂದೂಡಲಾಗಿದೆ. ಅತ್ಯಾಚಾರ ಪ್ರಕರಣಕ್ಕೆ ಸಂಬಂಧಪಟ್ಟಂತೆ ಜೈಲುವಾಸ ಅನುಭವಿಸುತ್ತಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರು ಜಾಮೀನು ಅರ್ಜಿ ಕೋರಿ ಹೈಕೋರ್ಟ್ ಮೆಟ್ಟಿಲೇರಿದ್ದರು.ಇದೀಗ ಈ ಬಗ್ಗೆ ವಿಚಾರಣೆ ನಡೆಸಿದ ಪೀಠವು ವಿಚಾರಣೆಯನ್ನು ಏಪ್ರಿಲ್ 15 ಕ್ಕೆ ಮುಂದೂಡಿ ಆದೇಶಿಸಿದರು. ವಿಚಾರಣೆ ಆರಂಭವಾದಾಗ ಹೈಕೋರ್ಟ್ ನ್ಯಾಯಾಧೀಶರು ಎಸ್‌ಪಿಪಿ ಅವರಿಗೆ ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ನೀಡಿದರು.

ಬಳಿಕ ಜಾಮೀನು ಅರ್ಜಿಯ ವಿಚಾರಣೆಯನ್ನು ಏಪ್ರಿಲ್ 15ಕ್ಕೆ ಮುಂದೂಡಿ ಆದೇಶಿಸಿದರು.ಈ ಹಿಂದೆ ಕೆ.ಆರ್ ನಗರ ಸಂತ್ರಸ್ತ ಮಹಿಳೆ ಅತ್ಯಾಚಾರ ಪ್ರಕರಣದಲ್ಲಿ ತನ್ನ ಪಾತ್ರ ಇಲ್ಲ, ಆದ್ದರಿಂದ ಪ್ರಕರಣದಿಂದ ತನ್ನನ್ನು ಕೈಬಿಡುವಂತೆ ಪ್ರಜ್ವಲ್ ರೇವಣ್ಣ ಪರ ವಕೀಲರು ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ವಜಾಗೊಳಿಸಿತು.

## ಬಿಜೆಪಿಯವರು ಕಳೆದು ಹೋಗುವ ಭಯದಿಂದ ಜನಾಕ್ರೋಶ ಯಾತ್ರೆ: ಸಚಿವ ಪರಮೇಶ್ವರ್ ವ್ಯಂಗ್ಯ




**ಬೆಂಗಳೂರು, ಏ.7:** ಬಿಜೆಪಿಯವರು ಕಳೆದು ಹೋಗುವ ಭಯದಿಂದ ಜನಾಕ್ರೋಶ ಯಾತ್ರೆ ನಡೆಸಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ವ್ಯಂಗ್ಯವಾಡಿದರು. ರಾಜ್ಯದ ಕಾಂಗ್ರೆಸ್ ಸರ್ಕಾರ ಕಳೆದ ಎರಡು ವರ್ಷಗಳಲ್ಲಿ ಉತ್ತಮ ಆಡಳಿತ ನೀಡಿದೆ. ಗ್ಯಾರಂಟಿಗಳನ್ನು ಜಾರಿ ಮಾಡಲ್ಲ ಎಂದು ಬಿಜೆಪಿಯವರು ಅಂದುಕೊಂಡಿದ್ದರು.

ಅದನ್ನು ಯಶಸ್ವಿಯಾಗಿ ಜಾರಿ ಮಾಡಿದ್ದೇವೆ. ಜತೆಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಸಮತೋಲಿತ ಬಜೆಟ್ ನೀಡಿದ್ದಾರೆ. ಈ ಬಗ್ಗೆ ಜನ ಒಳ್ಳೆಯ ಮಾತುಗಳನ್ನಾಡುತ್ತಿರುವುದರಿಂದ ಭಯಭೀತರಾಗಿರುವ ಬಿಜೆಪಿ ತಾನು ಕಳೆದು ಹೋಗುವ ಭಯದಿಂದ ಜನಾಕ್ರೋಶ ಯಾತ್ರೆ ನಡೆಸಿದೆ ಎಂದು ಲೇವಡಿ ಮಾಡಿದರು ಜನ ಎಲ್ಲಿ ಆಕ್ರೋಶ ವ್ಯಕ್ತಪಡಿಸಿದ್ದಾರೆ, ಯಾವ ಜನ ಸರ್ಕಾರದ ವಿರುದ್ಧ ಆಕ್ರೋಶ ತೋರಿದ್ದಾರೆ. ಸುಮ್ಮನೆ ಬಿಜೆಪಿ ಪಕ್ಷದವರೇ ಸೇರಿಕೊಂಡು ಆಕ್ರೋಶ ಮಾಡುವುದು ಸರಿಯಲ್ಲ. ಜನಾಕ್ರೋಶ ಎಂದರೆ ಹಾದಿಬೀದಿಯಲ್ಲಿ ಜನ ಸರ್ಕಾರವನ್ನು ನಿಂದಿಸಬೇಕು. ಆ ರೀತಿ ಆಗಿಲ್ಲ. ಜನಾಕ್ರೋಶ ಎಂಬುದು ಬಿಜೆಪಿಯ ಸೃಷ್ಟಿ ಎಂದರು. ರಾಜ್ಯದ ಕಾಂಗ್ರೆಸ್ ಸರ್ಕಾರ ಮುಖ್ಯವಾಹನಿಯಿಂದ ಹಿಂದುಳಿದವರನ್ನು ಮೇಲೆತ್ತುವ ಕೆಲಸ ಮಾಡುತ್ತಿದೆ. ಹಲವು ಯೋಜನೆಗಳನ್ನೂ ಜಾರಿ ಮಾಡಿದೆ. ಒಳ ಮೀಸಲಾತಿಗೂ ನಾವು ಮುಂದಾಗಿದ್ದೇವೆ. ಅವಕಾಶ ವಂಚಿತ ಮುಖ್ಯವಾಹಿನಿಯಿಂದ ದೂರ ಉಳಿದಿರುವವರ ಅಭಿವೃದ್ಧಿಗೆ ನಮ್ಮ ಆದ್ಯತೆ ಅದೇ ರೀತಿ ಮುಸ್ಲಿಂ ಸಮುದಾಯವನ್ನು ಮೇಲೆತ್ತುವ ನಿಟ್ಟಿನಲ್ಲಿ ಆ ಸಮುದಾಯದವರಿಗೆ ಗುತ್ತಿಗೆಯಲ್ಲಿ ಮೀಸಲಾತಿ ಕಲ್ಪಿಸಲಾಗಿದೆ ಎಂದು ಗೃಹ ಸಚಿವರು ಸರ್ಕಾರದ ಅಲ್ಪಸಂಖ್ಯಾತರ ಮೀಸಲಾತಿ ನೀತಿಯನ್ನು ಸಮರ್ಥಿಸಿಕೊಂಡರು.

ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿವೆ. ಹಾಗಾಗಿಯೇ ಬಿಜೆಪಿ ಅಧಿಕಾರದಲ್ಲಿರುವ ರಾಜ್ಯಗಳು ಇಲ್ಲಿಗೆ ಬಂದು ಗ್ಯಾರಂಟಿಗಳ ಅನುಷ್ಠಾನ ಅಭಿಯಾನ ಮಾಡುತ್ತಿವೆ. ಇವೆಲ್ಲಾ ಗ್ಯಾರಂಟಿ ಯಶಸ್ವಿಯಾಗಿರುವುದನ್ನು ತೋರಿಸುತ್ತದೆ ಎಂದರು. ತೆಲಂಗಾಣದಲ್ಲಿ ಗ್ಯಾರಂಟಿ ಯೋಜನೆಯಲ್ಲಿ ಕೆಲವು ಲೋಪಗಳಾಗಿವೆ ಎಂಬುದನ್ನು ಪಕ್ಷ ಗಮನಿಸಿ ಸರಿಪಡಿಸುತ್ತದೆ ಎಂದರು.

ಬೆಂಗಳೂರಿನಲ್ಲಿ ಅಪರಾಧ ಚಟುವಟಿಕೆ ನಿಯಂತ್ರಣಕ್ಕೆ ಪೊಲೀಸ್ ಬೀಟ್ ವ್ಯವಸ್ಥೆಯನ್ನು ಬಲಪಡಿಸುವ ಕೆಲಸ ನಡೆದಿದೆ. ಬೆಂಗಳೂರು ದೊಡ್ಡ ನಗರ, ಅಲ್ಲೊಂದು ಇಲ್ಲೊಂದು ಘಟನೆಗಳು ನಡೆದಾಗ ಅದು ಜನರ ಗಮನ ಸೆಳೆಯುತ್ತದೆ ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಬಿಟಿಎಂ ಲೇಔಟ್ ಯುವತಿಯ ಮೇಲಿನ ದೌರ್ಜನ್ಯದ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸ್ ಆಯುಕ್ತರ ಜತೆ ಮಾತನಾಡಿದ್ದೇನೆ. ಬೀಟ್ ವ್ಯವಸ್ಥೆಯನ್ನು ಬಲಪಡಿಸಿ ಎಂದು ಸೂಚಿಸಿದ್ದೇನೆ. ದೊಡ್ಡ ನಗರಗವಾಗಿರುವ ಕಾರಣ ಅಲ್ಲೊಂದು ಇಲ್ಲೊಂದು ಘಟನೆಗಳು ಆಗುತ್ತವೆ ನಿಜ. ಇಂತಹ ಘಟನೆಗಳಾಗದಂತೆ ಎಚ್ಚರಿಕೆ ವಹಿಸಿದ್ದೇವೆ. ಪೊಲೀಸರು ದಿನದ 24 ಗಂಟೆಗಳಲ್ಲೂ ಮಳೆ–ಚಳಿ– ಬಿಸಿಲು ಲೆಕ್ಕಿಸದೆ ಕೆಲಸ ಮಾಡುತ್ತಿದ್ದಾರೆ. ಹಾಗಾಗಿಯೇ ಬೆಂಗಳೂರು ಶಾಂತವಾಗಿದೆ ಎಂದು ಗೃಹ ಸಚಿವರು ಹೇಳಿದರು.

## ಆಸ್ತಿ ತೆರಿಗೆ ಪಾವತಿ ಪೋರ್ಟಲ್ ಮರಳಿ ಸೇವೆಗೆ ಸಿದ್ಧ

**ಬೆಂಗಳೂರು, ಏ.7:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ (ಬಿಬಿಎಂಪಿ) ವ್ಯಾಪ್ತಿಯಲ್ಲಿ ತಾತ್ಕಾಲಿಕವಾಗಿ ಒಂದೆರಡು ದಿನ ಸ್ಥಗಿತಗೊಂಡಿದ್ದ ಆಸ್ತಿ ತೆರಿಗೆ ಪಾವತಿ ಪೋರ್ಟಲ್ ಮರಳಿ ಸೇವೆ ಸಿದ್ಧವಾಗಿದೆ. ಏ.1ರಂದು ಶುರುವಾದ ನೂತನ ಹಣಕಾಸು ವರ್ಷದಿಂದ ಗಾರ್ಬೆಜ್ ತೆರಿಗೆ ಸಮೇತ ಆಸ್ತಿ ತೆರಿಗೆ ಸ್ವೀಕಾರಕ್ಕೆ ಬಿಬಿಎಂಪಿ ಮುಂದಾಗಿತ್ತು.ಇದಕ್ಕಾಗಿ ಪೋರ್ಟಲ್‌ನಲ್ಲಿ ಒಂದಷ್ಟು ಸಣ್ಣ ಪುಟ್ಟ ಮಾರ್ಪಾಡು ಮಾಡುವುದು ಅಗತ್ಯವಾಗಿತ್ತು. ಹೀಗಾಗಿ ಆನ್‌ಲೈನ್ ತೆರಿಗೆ ಪಾವತಿ ವ್ಯವಸ್ಥೆ ಸ್ಥಗಿತಗೊಂಡಿತ್ತು. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ತೆರಿಗೆ ಪಾವತಿಯ ಪೋರ್ಟಲ್‌ನಲ್ಲಿನ ಬದಲಾವಣೆ ಕಾರ್ಯ ಪೂರ್ಣಗೊಳಿಸಿದೆ. ಏಪ್ರಿಲ್ 5 ಶನಿವಾರವೇ ಪಾವತಿಗೆ ಅವಕಾಶ ನೀಡಿದೆ. ಭಾನುವಾರ ರಜಾ ದಿನ ಹಿನ್ನೆಲೆಯಲ್ಲಿ ಇಂದು ಸೋಮವಾರದಿಂದ ತೆರಿಗೆ ಪಾವತಿದಾರರಿಗೆ ಸಂಪೂರ್ಣವಾಗಿ ಸೇವೆ ಲಭ್ಯವಾಗಿದೆ.ಇತ್ತೀಚೆಗಷ್ಟೇ ಬಿಬಿಎಂಪಿ ಕಟ್ಟಡಗಳ ವಿಸ್ತೀರ್ಣದ ಆಧಾರದಲ್ಲಿ ಕಸಕ್ಕೆ 10 ರೂಪಾಯಿಂದ 400 ರೂಪಾಯಿವರೆಗೆ ಸೆಸ್ ವಿಧಿಸಿ ಆದೇಶಿಸಿತ್ತು. ಈ ಹಣವನ್ನು ಆಸ್ತಿ ತೆರಿಗೆ ಜೊತೆಗೆ ಮಾಲೀಕರಿಂದ ವಸೂಲಿ ಮಾಡುವುದಾಗಿ ತಿಳಿಸಿತ್ತು. ಆದರೆ ಈವರೆಗೆ ಆಸ್ತಿ ತೆರಿಗೆ ಮಾತ್ರವೇ ಪಾವತಿಸುತ್ತಿದ್ದ ಪೋರ್ಟಲ್‌ನಲ್ಲಿ ಬಾಕಿ ಉಳಿಸಿಕೊಂಡ ಆಸ್ತಿ ತೆರಿಗೆ, ಬಾಕಿ ತೆರಿಗೆದಾರರಿಗೆ ಶೇ.100ರಷ್ಟು ದಂಡ ವಿಧಿಸುವುದು. ಬಡ್ಡಿ ವಿಧಿಸುವುದು ಸೇರಿದಂತೆ ಪ್ರಮುಖ ಬದಲಾವಣೆಗಳನ್ನು ಮಾಡಬೇಕಿತ್ತು.ಹೀಗಾಗಿ ಏಪ್ರಿಲ್ 1ರಿಂದ 5ರವರೆಗೆ ಆನ್ಲೈನ್ ತೆರಿಗೆ ಪಾವತಿ ವಿಧಾನ ಸ್ಥಗಿತಗೊಂಡಿತ್ತು. ಅನೇಕ ತೆರಿಗೆ ಪಾವತಿದಾರರಿಗೆ ಪಾವತಿಯು ಸಾಧ್ಯವಾಗಲಿಲ್ಲ. ಈ ಪೋರ್ಟಲ್ ಅನ್ನು ಎನ್‌ಐಸಿ ಅಭಿವೃದ್ಧಿ ಮಾಡಿದ್ದು, ಅದೇ ನಿರ್ವಹಣೆ ಮಾಡುತ್ತಿದೆ. ಪ್ರಸಕ್ತ ಸಾಲಿನ ಬಿಬಿಎಂಪಿ ವ್ಯಾಪ್ತಿಯ ಕಟ್ಟಡಗಳ ವಿಸ್ತೀರ್ಣಕ್ಕೆ ಅನುಗುಣವಾಗಿ ವಿಧಿಸಿ ಸೆಸ್ ಅನ್ನು ಇದೇ ಏಪ್ರಿಲ್ 1ರಿಂದಲೇ ಪಾಲಿಕೆ ಸ್ವೀಕರಿಸುತ್ತಿದೆ.

ಇದರಿಂದ ಆರ್ಥಿಕ ಹೊರೆ ಉಂಟಾಗುತ್ತಿದೆ ಎಂದು ಆಸ್ತಿ ಮಾಲೀಕರು ಹೇಳಿದ್ದಾರೆ. 2023–24 ರ ಸಾಲಿಗಿಂತ 2024 –25ರ ಹಣಕಾಸು ವರ್ಷದಲ್ಲಿ ಆಸ್ತಿ ತೆರಿಗೆ ಶೇಕಡಾ ಸುಮಾರು 30 ರಷ್ಟು ಹೆಚ್ಚಳವಾಗಿದೆ ಎಂದು ತಿಳಿದು ಬಂದಿದೆ.ಆಸ್ತಿ ತೆರಿಗೆ, ಉಪಕರಗಳನ್ನು ಸೇರಿ ಒಟ್ಟು ಒಬ್ಬರು ಆಸ್ತಿ ಮಾಲೀಕ ಸುಮಾರು 9450 ರೂಪಾಯಿ ತೆರಿಗೆ ಪಾವತಿಸಬೇಕಿದ್ದರೆ. ಈ ವರ್ಷ ಆತ 12.078 ರೂಪಾಯಿ ಪಾವತಿಸಬೇಕಿದೆ. ಇದರಲ್ಲಿ ಗಾರ್ಬೆಜ್ ಕಸ ಸೇರಿ ಆಗುತ್ತದೆ. ಇನ್ನೂ ಬೃಹತ್ ಕಟ್ಟಡ ಮಾಲೀಕರು ಕೊಂಚ ಹೆಚ್ಚಿನ ಹಣ ತೆರಿಗೆ ಕಟ್ಟಬೇಕಾಗುತ್ತದೆ. ಏಕೆಂದರೆ ವಿಸ್ತೀರ್ಣ ಆಧಾರದಲ್ಲಿ ಕಸ ಸೆಸ್ ವಿಧಿಸಿದ್ದರಿಂದ ತೆರಿಗೆ ಹೆಚ್ಚಳದ ಪ್ರಮಾಣದಲ್ಲಿ ಬದಲಾವಣೆ ಆಗುತ್ತದೆ. ಸದ್ಯ ಈ ಆಸ್ತಿ ತೆರಿಗೆ ಹೊರೆಯಿಂದ ನಾವು ಸಮಸ್ಯೆ ಎದುರಿಸುವಂತಾಗಿದೆ ಎಂದು ನಾಗರಿಕರು ಅಳಲು ತೋಡಿಕೊಂಡಿದ್ದಾರೆ.

**ವಸತಿ ಕಟ್ಟಡಗಳಿಗೆ ರೂ.10 ರಿಂದ ರೂ.400 ವರೆಗೆ, ವಸತಿಯೇತರ ಕಟ್ಟಡಗಳಿಗೆ ರೂ.2 ಸಾವಿರದಿಂದ 35 ಲಕ್ಷ ರೂ, ಸ್ಟಾರ್ ಹೋಟೆಲ್‌ಗಳಿಗೆ ರೂ.95 ಸಾವಿರದಿಂದ ರೂ. 87.50 ಲಕ್ಷ ರೂಪಾಯಿವರೆಗೂ ಸೆಸ್ ದರ ವಿಧಿಸಿ ಆದೇಶವನ್ನು ಹೊರಡಿಸಿದೆ. ಬಜೆಟ್‌ನಲ್ಲಿನ ಪ್ರಸ್ತಾವನೆಯ ಪ್ರಕಾರ ಸುಮಾರು 46 ಲಕ್ಷ ಮನೆಗಳು ಸೆಸ್ ದರದ ವ್ಯಾಪ್ತಿಗೆ ಬರಲಿವೆ.**

## ವಿದ್ಯಾರ್ಥಿಗಳು ಶಾಲೆಯ ಶೌಚಾಲಯ ಸ್ವಚ್ಛಗೊಳಿಸಿದರೆ ಶಿಕ್ಷಕರ ವಿರುದ್ಧ ಎಫ್‌ಐಆರ್

**ಬೆಂಗಳೂರು,ಏ.7:** ಶಾಲೆಯ ಶೌಚಾಲಯ ಸ್ವಚ್ಛಗೊಳಿಸುವ ಕಾರ್ಯದಲ್ಲಿ ವಿದ್ಯಾರ್ಥಿಗಳನ್ನು ತೊಡಗಿಸಿಕೊಂಡಿರುವುದು ಕಂಡುಬಂದರೆ ಅಂತಹ ಶಿಕ್ಷಕರ ವಿರುದ್ಧ ಎಫ್‌ಐಆರ್ ದಾಖಲಿಸಿಕೊಳ್ಳುವುದಾಗಿ ಕರ್ನಾಟಕ ಶಾಲಾ ಶಿಕ್ಷಣ ಇಲಾಖೆಯು ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಎಚ್ಚರಿಕೆ ನೀಡಿದೆ.ಈ ಕುರಿತು ಶಿಕ್ಷಣ ಇಲಾಖೆಯೂ ಅಧಿಕೃತ ಅಧಿಸೂಚನೆ ಹೊರಡಿಸಿದ್ದು, ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಶೌಚಾಲಯ ಸ್ವಚ್ಛಗೊಳಿಸುವ ಕಾರ್ಯದಲ್ಲಿ ವಿದ್ಯಾರ್ಥಿಗಳನ್ನು ಬಳಕೆ ಮಾಡಿಕೊಳ್ಳಬೇಡಿ ಎಂದು ನಿರ್ದೇಶನ ನೀಡಿದೆ.ನಿಯಮ ಉಲ್ಲಂಘಿಸಿದರೆ ಇದಕ್ಕೆ ಕಾರಣರಾದ ಸಿಬ್ಬಂದಿ ವಿರುದ್ಧ ಎಫ್‌ಐಆರ್ ದಾಖಲಿಸುವುದು ಸೇರಿದಂತೆ ಶಿಸ್ತುಕ್ರಮ ತೆಗೆದುಕೊಳ್ಳಲಾಗುತ್ತದೆ ಎಂದು ಇಲಾಖೆ ತಿಳಿಸಿದೆ. ಬೇಗೂರು ಪೊಲೀಸ್ ವ್ಯಾಪ್ತಿಯಲ್ಲಿರುವ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳನ್ನು ಶೌಚಾಲಯ ಸ್ವಚ್ಛಗೊಳಿಸುವಂತೆ ಒತ್ತಾಯಿಸಿದ ಘಟನೆಯ ನಂತರ ಈ ಸುತ್ತೋಲೆ ಹೊರಡಿಸಲಾಗಿದೆ. ಮಕ್ಕಳ ವಿಡಿಯೊಗಳು ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆದ ನಂತರ ಈ ವಿಷಯ ಬೆಳಕಿಗೆ ಬಂದಿದೆ.

ಸಾಮಾಜಿಕ ಕಾರ್ಯಕರ್ತ ನಾಗೇಶ್ ದೂರು ದಾಖಲಿಸಿದ ನಂತರ ಮಾ.29 ರಂದು ಶಾಲಾ ಮುಖ್ಯೋಪಾಧ್ಯಾಯಿನಿ ಮತ್ತು ದೈಹಿಕ ಶಿಕ್ಷಣ ಶಿಕ್ಷಕರ ವಿರುದ್ಧ ಬಾಲನ್ಯಾಯ ಕಾಯ್ದೆಯಡಿ ಪೊಲೀಸ್ ಪ್ರಕರಣ ದಾಖಲಿಸಲಾಗಿದೆ.2023ರಲ್ಲಿ ಶಾಲೆಗಳಿಗೆ ಮಕ್ಕಳನ್ನು ಶೌಚಾಲಯ ಸ್ವಚ್ಛಗೊಳಿಸಿದ ಬಳಕೆ ಮಾಡಿಕೊಳ್ಳದಂತೆ ಸೂಚಿಸಿ ಸುತ್ತೋಲೆ ಹೊರಡಿಸಿದ್ದರೂ, ಕೆಲವು ಶಾಲೆಗಳು ಆದೇಶವನ್ನು ಉಲ್ಲಂಘಿಸುತ್ತಲೇ ಇವೆ ಎಂದು ಇಲಾಖೆ ಗಮನಿಸಿದೆ.ಶಾಲಾ ಮಕ್ಕಳಿಂದ ಶೌಚಾಲಯ ಸ್ವಚ್ಛಗೊಳಿಸಲು ಆರೋಪದ ಮೇಲೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಇಬ್ಬರು ಶಿಕ್ಷಕರನ್ನು ಅಮಾನತುಗೊಳಿಸಲಾಗಿತ್ತು. ಬೇಗೂರು ಪೊಲೀಸ್ ಠಾಣೆ ವ್ಯಾಪ್ತಿಯ ಶಾಲೆಯಲ್ಲಿ ಜನವರಿಯಲ್ಲಿ ಘಟನೆ ನಡೆದಿತ್ತು. ವಿದ್ಯಾರ್ಥಿಗಳು ಶಾಲೆಯ ಶೌಚಾಲಯ ಸ್ವಚ್ಛಗೊಳಿಸುತ್ತಿರುವ ವಿಡಿಯೋ ವೈರಲ್ ಆಗಿತ್ತು.ಸಾಮಾಜಿಕ ಕಾರ್ಯಕರ್ತ ನಾಗೇಶ್ ಅವರು ನೀಡಿದ ದೂರಿನ ಆಧಾರದ ಮೇಲೆ, ಮಾ.29 ರಂದು ಶಾಲಾ ಮುಖ್ಯೋಪಾಧ್ಯಾಯಿನಿ ಸಾಕಮ ಮತ್ತು ದೈಹಿಕ ಶಿಕ್ಷಣ ಶಿಕ್ಷಕಿ ಸುಮಿತ್ರಮ ವಿರುದ್ಧ ಬಾಲನ್ಯಾಯ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿತ್ತು. ಪ್ರಾದೇಶಿಕ ಸುದ್ದಿವಾಹಿನಿಯಲ್ಲಿ ಸುದ್ದಿ ಪ್ರಸಾರವಾಗಿತ್ತು. ಬಳಿಕ ಘಟನೆಯ ಬಗ್ಗೆ ನಾಗೇಶ್ ಅವರು ಪೊಲೀಸರಿಗೆ ದೂರು ನೀಡಿದ್ದರು. ಫೆಬ್ರವರಿ ಅಂತ್ಯದಲ್ಲಿ ಇಬ್ಬರು ಶಿಕ್ಷಕರನ್ನು ಅಮಾನತುಗೊಳಿಸಲಾಗಿದೆ ಮತ್ತು ಶಿಕ್ಷಣ ಇಲಾಖೆ ಆಂತರಿಕ ವಿಚಾರಣೆ ನಡೆಸುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಉದ್ಯೋಗದೊಂದಿಗೆ ಉತ್ತಮ ಸಂಬಳವನ್ನೂ ನೀಡಿ : ಡಾ. ಶರಣ್‌ಪ್ರಕಾಶ್ ಪಾಟೀಲ್

**ಕಲಬುರಗಿ, ಏ. 7:** ಬೃಹತ್ ಉದ್ಯೋಗ ಮೇಳಗಳಲ್ಲಿ ಕಂಪೆನಿಗಳು ಅರ್ಹರಿಗೆ ಉದ್ಯೋಗ ನೀಡುತ್ತಿರುವುದು ಮಹತ್ಕಾರ್ಯವಾಗಿದೆ. ಇದರ ಜೊತೆಗೆ ಉದ್ಯೋಗ ಪಡೆಯುವವರು ಉತ್ತಮ ರೀತಿನಲ್ಲಿ ಜೀವನ ಸಾಗಿಸಲು ಅನುವಾಗುವಂತೆ ಉತ್ತಮ ವೇತನ ನೀಡಿ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಸಚಿವ ಡಾ.ಶರಣ್ ಪ್ರಕಾಶ್ ಪಾಟೀಲ್ ಸಲಹೆ ನೀಡಿದರು. ನಗರದ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ವತಿಯಿದ ಆಯೋಜಿಸಿದ್ದ 'ಉದ್ಯೋಗ ಉತ್ಸವ್ 2025-26' ಉದ್ಘಾಟಿಸಿ ಮಾತನಾಡಿದ ಅವರು, ಕಲಬುರಗಿ, ಬೆಂಗಳೂರು, ಹುಬ್ಬಳಿ, ಬೆಳಗಾವಿ, ಮಂಗಳೂರಿನಲ್ಲಿ ಕೆಲಸಕ್ಕೆ ಹೋಗುವ ವ್ಯಕ್ತಿಗೆ ಜೀವನ ಸಾಗಿಸಲು ಕೈ ತುಂಬಾ ಸಂಬಳ ಬೇಕಾಗುತ್ತದೆ. ಒಂದು ವೇಳೆ ಸಂಬಳ ಸಿಗದಿದ್ದರೆ ಆತ ಮತ್ತೆ ತನ್ನ ಗ್ರಾಮಕ್ಕೆ ತೆರಳಿ, ನಿರುದ್ಯೋಗಿಯಾಗುವ ಸಾಧ್ಯತೆ ಇರುತ್ತದೆ.

ಈ ನಿಟ್ಟಿನಲ್ಲಿ ಉದ್ಯೋಗದಾತರು ಮಾನವೀಯ ದೃಷ್ಟಿಯಿಂದ ಕುಟುಂಬ ನಿರ್ವಹಣೆಗೆ ಅನುಕೂಲವಾಗುವಂತೆ ವೇತನ ನೀಡುವ ಬಗ್ಗೆ ಚಿಂತನೆ ನಡೆಸಬೇಕು ಎಂದು ಹೇಳಿದರು. ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಸರಕಾರದ ವತಿಯಿಂದ ರಾಜ್ಯದ ವಿವಿಧೆಡೆ ಉದ್ಯೋಗ ಮೇಳಗಳನ್ನು ಆಯೋಜಿಸುವುದರ ಜತೆಗೆ ಆರೋಗ್ಯ ವೃತ್ತಿಪರರಿಗಾಗಿ ಸಾಗರೋತ್ತರ ಉದ್ಯೋಗ ಮೇಳ ಆಯೋಜಿಸಲು ನಿರ್ಧರಿಸಲಾಗಿದೆ. ಜರ್ಮನಿ, ಜಪಾನ್, ಇಟಲಿ ಮತ್ತಿತರ ರಾಷ್ಟ್ರಗಳಿಂದ ನರ್ಸ್, ಅರೆ ವೈದ್ಯಕೀಯ ಮುಂತಾದ ಆರೋಗ್ಯ ವೃತ್ತಿಪರರಿಗೆ ಸಾಕಷ್ಟು ಬೇಡಿಕೆ ಇದೆ.

ಹೀಗಾಗಿ ಮುಂದಿನ ಮೂರು ತಿಂಗಳಲ್ಲಿ ಈ ಆರೋಗ್ಯ ವೃತ್ತಿಪರರಿಗಾಗಿಯೇ ಸಾಗರೋತ್ತರ ಉದ್ಯೋಗ ಮೇಳವನ್ನು ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಆಯೋಜಿಸಲಾಗುವುದು ಎಂದು ಅವರು ತಿಳಿಸಿದರು. ರಾಜ್ಯದ ಆರೋಗ್ಯ ವೃತ್ತಿಪರರಿಗೆ ವಿದೇಶಗಳಲ್ಲಿ ಸಾಕಷ್ಟು ಬೇಡಿಕೆ ಇದ್ದರೂ, ಭಾಷೆ ಎಂಬುದು ಅವರಿಗೆ ಅಡ್ಡಿಯಾಗುತ್ತಿದೆ. ಹೀಗಾಗಿ ರಾಜ್ಯದ ನರ್ಸಿಂಗ್ ಕಾಲೇಜುಗಳಲ್ಲಿ ಜರ್ಮನ್ ಮತ್ತು ಜಾಪಾನೀಸ್ ಭಾಷೆಯನ್ನು ಪರಿಚಯಿಸಲು ನಿರ್ಧರಿಸಲಾಗಿದೆ. ಆ ಮೂಲಕ ಭಾಷಾ ಸಮಸ್ಯೆಯನ್ನು ಬಗೆಹರಿಸಲಾಗುವುದು ಎಂದು ಡಾ.ಶರಣ್ ಪ್ರಕಾಶ್ ಪಾಟೀಲ್ ತಿಳಿಸಿದರು. ಕೌಶಲ್ಯಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಇ.ವಿ.ರಮಣ ರೆಡ್ಡಿ ಮಾತನಾಡಿ, ದೇಶದಲ್ಲಿ ಶಿಕ್ಷಣಕ್ಕೆ ಮಾತ್ರ ಆದ್ಯತೆ ನೀಡುತ್ತಿದ್ದದರಿಂದ ಶಿಕ್ಷಣ ಮುಗಿಸಿ ಹೊರಬರುತ್ತಿರುವವರ ಪೈಕಿ ಶೇ.85 ಮಂದಿಯಲ್ಲಿ ಕೌಶಲ್ಯದ ಕೊರತೆ ಇದೆ.

ಈ ಹಿನ್ನೆಲೆಯಲ್ಲಿ ಉದ್ಯೋಗ ಮೇಳಗಳ ಮೂಲಕ ಕಂಪೆನಿ, ಕೈಗಾರಿಕೆಗಳಿಂದ ಬರುವ ಕೌಶಲ ಬೇಡಿಕೆ ಆಧರಿಸಿ ಕೌಶಲ್ಯಾಧಾರಿತ ಶಿಕ್ಷಣಕ್ಕೆ ಆದ್ಯತೆ ನೀಡಲಾಗುತ್ತಿದೆ. ಬೆಂಗಳೂರು ಹೊರತುಪಡಿಸಿ ಇತರೆ ಪ್ರದೇಶಗಳಲ್ಲೂ ಕೌಶಲ್ಯಾಧರಿತ ಶಿಕ್ಷಣಕ್ಕೆ ಗಮನ ಹರಿಸಲಾಗುತ್ತಿದೆ. ಇದಕ್ಕೆ ಎಫ್‌ಕೆಸಿಸಿಐ ಸಹಕಾರ ನೀಡಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಎಫ್‌ಕೆಸಿಸಿಐ ಅಧ್ಯಕ್ಷ ಎಂ.ಜಿ.ಬಾಲಕೃಷ್ಣ, ಹಿರಿಯ ಉಪಾಧ್ಯಕ್ಷ ಉಮಾರೆಡ್ಡಿ, ಉಪಾಧ್ಯಕ್ಷ ಟಿ.ಸಾಯಿರಾಂ ಪ್ರಸಾದ್, ಡೆವಲಪ್ ಸಂಸ್ಥೆಯ ಸಂಸ್ಥಾಪಕ ಮತ್ತು ಸಿಇಒ ತೇಜಸ್ ಎನ್.ಗೌಡ, ಎಫ್ ಕೆಸಿಸಿಐ ಪದಾಧಿಕಾರಿಗಳು ಮತ್ತು ಸದಸ್ಯರು ಪಾಲ್ಗೊಂಡಿದ್ದರು.

ಏ.16ಕ್ಕೆ ಕಲಬುರಗಿಯಲ್ಲಿ ಉದ್ಯೋಗ ಮೇಳ ಉದ್ಯೋಗದಾತರ ಮೂಲಕ ಉದ್ಯೋಗಾಂಕ್ಷಿಗಳಿಗೆ ಉದ್ಯೋಗ ಕಲ್ಪಿಸಲು ಈಗಾಗಲೇ ರಾಜ್ಯಾದ್ಯಂತ ಸರಕಾರದ ವತಿಯಿಂದ ಉದ್ಯೋಗ ಮೇಳ ಆಯೋಜಿಸಲಾಗುತ್ತಿದೆ. ಏ.16 ರಂದು ಕಲಬುರಗಿಯಲ್ಲಿ ಬೃಹತ್ ಉದ್ಯೋಗ ಮೇಳ




ಆಯೋಜಿಸಲಾಗಿದೆ. ಇದಾದ ಬಳಿಕ ಮೈಸೂರು, ಹುಬ್ಬಳ್ಳಿ, ಬೆಳಗಾವಿಗಳಲ್ಲಿ ವಿಭಾಗೀಯ ಮಟ್ಟದ ಬೃಹತ್ ಉದ್ಯೋಗ ಮೇಳಗಳನ್ನು ಆಯೋಜಿಸಲಾಗುವುದು. ರಾಜ್ಯದಲ್ಲಿ ಉದ್ಯೋಗ ಸಮಸ್ಯೆಗಿಂತಲೂ ಕೌಶಲ ಸಮಸ್ಯೆ ಹೆಚ್ಚಾಗಿದೆ.

ಹೀಗಾಗಿ ವಿವಿಧ ವಿಶ್ವವಿದ್ಯಾನಿಲಯಗಳಲ್ಲಿ ಕೌಶಲಭರಿತ ಶಿಕ್ಷಣ ನೀಡುವ ಕಾರ್ಯಕ್ರಮಗಳನ್ನು ನೀಡಲಾಗುತ್ತಿದೆ. ಅಲ್ಲದೆ, ಕಲಬುರಗಿ, ಕೊಪ್ಪಳ ಮತ್ತು ಮೈಸೂರನ್ನು ಕೇಂದ್ರೀಕರಿಸಿ ಮಲ್ಟಿ ಸ್ಕಿಲ್ ಡೆವಲಪ್ ಮಂಟ್ ಸೆಂಟರ್‌ಗಳನ್ನು ಸ್ಥಾಪಿಸಲಾಗುವುದು.– ಅಭಿಷೇಕ್ ಬಿ.ಎ.,ಅಧ್ಯಕ್ಷರು ಎಫ್‌ಕೆಸಿಸಿಐ ಕೌಶಲ್ಯಾಭಿವೃದ್ಧಿ ಸಮಿತಿ.

# ವೀರಶೈವರು ಮೀಸಲಾತಿ ಕೇಳಿದರೆ ಸಂವಿಧಾನ ವಿರೋಧಿ: ಮುಸ್ಲಿಂ ಮೀಸಲಾತಿ ಸಂವಿಧಾನ ವಿರೋಧಿಯಲ್ಲವೇ: ಯತ್ನಾಳ್ ಸವಾಲು

**ಹುಬ್ಬಳ್ಳಿ, ಏ. 7:** ವೀರಶೈವರ, ಲಿಂಗಾಯತರು ಮೀಸಲಾತಿ ಕೇಳಿದರೆ ಸಂವಿಧಾನ ವಿರೋಧಿ ಅಂತಾರೆ. ಆದರೆ ಮುಸ್ಲಿಂರಿಗೆ ಸಂವಿಧಾನ ವಿರೋಧಿಯಾಗಿ ಮೀಸಲಾತಿ ಕೊಟ್ಟಿದ್ದಾರೆ. ಧರ್ಮಾಧಾರಿತ ಮೀಸಲಾತಿ ಎಲ್ಲೂ ಇಲ್ಲ. ಆದರೂ ಕರ್ನಾಟಕದಲ್ಲಿ ಮೀಸಲಾತಿ ಕೊಟ್ಟಿದ್ದಾರೆ. ಸುವರ್ಣ ಸೌಧದ ಮುಂದೆ ಶಾಂತಿಯುತ ಹೋರಾಟ ಮಾಡಿದರೆ, ನಮಗೆ ಲಾಠಿ ಏಟು ಹೊಡೆದಿದ್ದರು. ನಮ್ಮ ಸಮಾಜಕ್ಕೆ ಚಿತ್ರಹಿಂಸೆ ಕೊಟ್ಟಿದ್ದರು. ಕಾನೂನು ಬಾಹಿರವಾಗಿ ಲಾಠಿ ಚಾರ್ಜ್ ಮಾಡಿಸಲಾಗಿತ್ತು. ರಾಷ್ಟ್ರೀಯ ಮನವ ಹಕ್ಕುಗಳ ನಿಯಮ ಮೀರಿ ಲಾಠಿ ಚಾರ್ಜ್ ಮಾಡಿಸಲಾಗಿತ್ತು. ನಮ್ಮ ಮೇಲೆ ನಿಯಮ ಮೀರಿ ಲಾಠಿ ಚಾರ್ಜ್ ಮಾಡಿಸಿದ್ದರು. ನಾವು ಯಾರೂ ಕಲ್ಲು ತೂರಾಟ ಮಾಡಿರಲಿಲ್ಲ ಇಲ್ಲವೇ ಬಸ್‌ಗೆ ಬೆಂಕಿ ಹಚ್ಚಿರಲಿಲ್ಲ. ನಮ್ಮ ಮೇಲೆ ಲಾಠಿ ಚಾರ್ಜ ಮಾಡಿರುವ ಪೊಲೀಸ್ ಅಧಿಕಾರಿಗೆ ಕರೆದು ಮುಖ್ಯಮಂತ್ರಿಗಳು ಸನ್ಮಾನ ಮಾಡುತ್ತಾರೆ ಇದ್ಯಾವ ನ್ಯಾಯ ಎಂದು ಬಸನಗೌಡ ಪಾಟೀಲ್ ಪ್ರಶ್ನಿಸಿದರು. ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರ್ಕಾರವು ಲಿಂಗಾಯತರದ್ದು ಬಹಳ ಆಗಿದೆ ಎಂದಿದ್ದಾರೆ. ನನ್ನ ಹೊಡೆಯೋಕೆ ಬಂದಿದ್ದರು. ಲಾಠಿಚಾರ್ಜ್ ಮಾಡಿದ ಮುಸ್ಲಿಂ ಅಧಿಕಾರಿಗೆ ಬಹುಮಾನ ಕೊಟ್ಟಿದ್ದಾರೆ. ಹಿಂದೂಗಳಿಗೆ ಈ ಸರ್ಕಾರ ಏನೂ ಮಾಡಿಲ್ಲ. ಹೀಗಾಗಿ ನಮ್ಮ ಗುರುಗಳ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗಕ್ಕೆ ದೂರು ಕೊಟ್ಟಿದ್ದರು. ಇದೀಗ ಹೈಕೋರ್ಟ್ ತನಿಖೆಗೆ ಆದೇಶ ಮಾಡಿದೆ. ನಾನು ಇದನ್ನು ಸ್ವಾಗತ ಮಾಡುತ್ತೇನೆ ಎಂದು ಅವರು ಹೇಳಿದರು. ಬಿಜೆಪಿ ನನ್ನನ್ನು ಆರು ವರ್ಷಗಳ ಅವಧಿಗೆ ಉಚ್ಚಾಟನೆ ಮಾಡಿದೆ. ಬಿಜೆಪಿಯಿಂದ ನನ್ನ ಉಚ್ಚಾಟನೆಗೆ ಕಾರಣ ಎನು ನಾನು ಎಂದಿಗೂ ಪಕ್ಷ ವಿರೋಧಿ ಚುಟುವಟಿಕೆ ಮಾಡಿದ್ದೆನಾ ಒಂದು ಭ್ರಷ್ಟ ಕುಟುಂಬದ ಮಾತು ಕೇಳಿ ಉಚ್ಚಾಟನೆ ಮಾಡಿದ್ದಾರೆ. ಹಿಂದೂ ಕಾರ್ಯಕರ್ತರು ಇಡೀ ರಾಜ್ಯದಲ್ಲಿ ಹೋರಾಟ ಮಾಡುತ್ತಿದ್ದಾರೆ. ನಾನು ಯಾವುದೇ ಹೋರಾಟಕ್ಕೂ ಯಾರಿಗೂ ಹೋರಾಟ ಮಾಡುವಂತೆ ಹೇಳಿಲ್ಲ. ಇದು ಯಾರ ಪ್ರಚೋದಿತ ಹೋರಾಟ ಅಲ್ಲ. ಜನರು ಸ್ವಯಂಪ್ರೇರಿತರಾಗಿ ಹೋರಾಟ ಮಡುತ್ತಿದ್ದಾರೆ. ಜನ ನನ್ನ ಮೇಲೆ ಪ್ರೀತಿ ವಿಶ್ವಾಸ ಇರಿಸಿದ್ದಾರೆ. ಯಾವ ನಾಯಕರಿಗೂ ಹೋರಾಟ ಆಗಿಲ್ಲ. ಯಡಿಯೂರಪ್ಪ, ಸಿದ್ದರಾಮಯ್ಯ ಹೊರಗೆ ಹಾಕಿದಾಗ ಸಹ ಇಷ್ಟು ಹೋರಾಟವಾಗಿಲ್ಲ ಎಂದರು.ರಜ್ಯ ಬಿಜೆಪಿ ನಾಯಕರು ಹಿಂದೂಪರ ನಾಯಕರನ್ನು ತುಳಿಯುತ್ತಿದ್ದಾರೆ ಎನ್ನುವುದು ಜನರ ಭಾವನೆ. ಹಿಂದೂಗಳ ಕೊಲೆಯಾದಾಗ ಯಾವ ಬಿಜೆಪಿ ನಾಯಕರು ಹೋಗಿಲ್ಲ. ಯಡಿಯೂರಪ್ಪ ಅವರ ಜಿಲ್ಲೆಯಲ್ಲಿ ಕೊಲೆಯಾಗಿದೆ. ಯಾರಿಗಾದರೂ ಶಿಕ್ಷೆಯಾಗಿದೆಯೇ ಎಲ್ಲೆ ಅನ್ಯಾಯ ಆದರೂ ನಾನು ಹೋಗಿದ್ದೇನೆ. ಬಿಜೆಪಿಯ ಕಾನೂನು ಘಟಕದಿಂದ ಯಾರಿಗೂ ಸಹಾಯ ಮಾಡಿಲ್ಲ ಎಂದೂ ಅವರು ದೂರಿದರು.

ನಮ್ಮ ಸಮುದಾಯದವರು ಹೋರಾಟ ಮಾಡುತ್ತಿದ್ದಾರೆ. ನಾನು ಸ್ವಾಮೀಜಿಗೆ ಹೋರಾಟ ಮಾಡಿ ಅಂತ ಹೇಳಿಲ್ಲ. ಅವರೇ ನಮ್ಮ ಪರವಾಗಿ ಮಾತಾಡುತ್ತಿದ್ದಾರೆ. ಪಂಚಮಸಾಲಿ ಮೀಸಲಾತಿ ಹೋರಾಟ ಆರಂಭ ಮಾಡಿದ್ದೇ ನಾನು. ಬೆಂಗಳೂರುವರೆಗೂ ಪಾದಯಾತ್ರೆ ಮಾಡಿದ್ದೆವು ಎಂದರು. ಹುಬ್ಬಳ್ಳಿಯ ಮಹಾನ್ ವಕೀಲ ಸ್ವಾಮೀಜಿಗೆ ಭೇಟಿಗೆ ಬಂದಿದ್ದ.

ಹೋರಾಟ ಸ್ಥಗಿತ ಮಾಡುವಂತೆ ಹೇಳಲು ಬಂದಿದ್ದ. ಯಡಿಯೂರಪ್ಪ ಅವರ ಆದೇಶದಂತೆ ವಕೀಲ ಬಂದಿದ್ದ ಎಂದು ಹೇಳುವ ಮೂಲಕ ಪರೋಕ್ಷವಾಗಿ ನಿನ್ನೆ ಸುದ್ದಿಗೋಷ್ಠಿ ನಡೆಸಿದ ಮೋಹನ ಲಿಂಬಿಕಾಯಿ ವಿರುದ್ಧ ಯತ್ನಾಳ ವಾಗ್ದಾಳಿ ನಡೆಸಿದರು. ಸ್ವಾಮೀಜಿ ಸಮುದಾಯರ ಪರ ಹೋರಾಟ ಮಾಡುತ್ತಿದ್ದಾರೆ. ಸಮುದಾಯದವರಿಗೆ ಅನ್ಯಾಯದ ಆದಾಗ ಹೋರಾಟ ಮಾಡಿದ್ದಾರೆ. ವಿನಯ ಕುಲಕರ್ಣಿ, ಲಕ್ಷ್ಮೀ ಅಕ್ಕನ ಪರ ಮಾತಾಡಿದ್ದಾರೆ. ಅಖಿಲ್ ಭಾರತೀಯ ಪಂಚಮಸಾಲಿ ಟ್ರಸ್ಟ್ ನಿಂದ ಸುದ್ದಿಗೋಷ್ಠಿ ಮಾಡಿದ್ದಾರೆ



ಎಂದರು. ಅಧ್ಯಕ್ಷ ಕೂಡಲಸಂಗಮ ಆಸ್ತಿಯನ್ನು ತನ್ನ ಕುಟುಂಬಕ್ಕೆ ಮಾಡಿಕೊಂಡಿದ್ದಾನೆ. ಕೆಲವರು ಸಮುದಾಯದ ಹೆಸರಲ್ಲಿ ರೊಕ್ಕ ತಂದಿದ್ದಾರೆ. ಟ್ರಸ್ಟ್‌ನಲ್ಲಿ ಎಲ್ಲರೂ ಕುಟುಂಬಸ್ಥರೇ. ಒಂದು ದಿನ ಹೋರಾಟ ಮಾಡಿಲ್ಲ. ಯಡಿಯೂರಪ್ಪ ಅವರ ಚೇಲಾ ನಿನ್ನೆ ಮಾತಾಡಿದರು ಎನ್ನುವ ಮೂಲಕ ಮೋಹನ ಲಿಂಬಿಕಾಯಿಗೆ ಯಡಿಯೂರಪ್ಪ ಚೇಲಾ ಎಂದು ಯತ್ನಾಳ್ ಹೇಳಿದರು. ನಾನು ಮಠಾಧೀಶರ ಸಹಾಯ ತಗೆದುಕೊಂಡಿಲ್ಲ. ಪ್ರಹ್ಲಾದ್ ಜೋಶಿ, ಅರವಿಂದ್ ಬೆಲ್ಲದ್ ಹಾಗೂ ಜಗದೀಶ್ ಶೆಟ್ಟರ್ ಅರನ್ನು ಸೋಲಿಸಲು ಯಡಿಯೂರಪ್ಪ ತನ್ನ ಚೇಲಾರನ್ನು ಕಾಂಗ್ರೆಸ್‌ಗೆ ಕಳುಹಿಸಿದ್ದರು. ಯಡಿಯೂರಪ್ಪ ವೀರಶೈವರ ಹೆಸರು ಹೇಳಿಕೊಂಡು ಬ್ಲಾಕ್ ಮೇಲ್ ಮಾಡಿ ದೊಡ್ಡ ವ್ಯಕ್ತಿಯಾದ್ದಾರೆ ಎಂದು ಆರೋಪಿಸಿದರು.

ಯಡಿಯೂರಪ್ಪ ಅವರು ಮಾಡಿದ ಭ್ರಷ್ಟಾಚಾರದಿಂದ ಮುಖ್ಯಮಂತ್ರಿ ಸ್ಥಾನದಿಂದ ಕೆಳಗೆ ಇಳಿಸಿದ್ದರು. ವಿಜಯೇಂದ್ರ ನಕಲಿ ಸಹಿ ಮಾಡಿದ್ದ. ಆ ಕುಟುಂಬದಿಂದ ಮೋಸ ಆಗಿದೆ. ಇಂದು ನನ್ನನ್ನೇ ಹೊರೆಗೆ ಹಾಕಿರಬಹುದು. ಈ ರಾಜ್ಯದಲ್ಲಿ ಹಿಂದೂತ್ವದ ನಾಯಕರು ಬೇಕು ಎನ್ನುವ ಕೂಗು ಕೇಳಿ ಬರುತ್ತಿದೆ ಎಂದರು. ಇನ್ನು ಇದೇ ಸಂದರ್ಭದಲ್ಲಿ ಬಸನಗೌಡ ಪಾಟೀಲ್ ಯತ್ನಾಳ್ ಅವರು, ಕಾಂಗ್ರೆಸ್ ಪಕ್ಷ ಸೇರುವ ಬಗ್ಗೆಯೂ ಮಾತನಾಡಿ, ನಾನು ಅಲ್ಲ, ನನ್ನ ಹೆಣ ಹಾಗೂ ಚಪ್ಪಲಿನೂ ಕಾಂಗ್ರೆಸ್‌ಗೆ ಹೋಗಲ್ಲ ಎಂದು ಹೇಳಿದ ಅವರು, ಹೊಸ ಪಕ್ಷದ ಬಗ್ಗೆ ಆಲೋಚನೆ ಇದೆ. ಅದು ಅಷ್ಟು ಸುಲಭವೂ ಇಲ್ಲ. ಹಿಂದೂಗಳ ಮತ ವಿಭಜನೆ ಆಗಬಾರದು ಎನ್ನುವುದು ನನ್ನ ಪ್ಲಾನ್. ನಾನು ಪಕ್ಕಾ ಪ್ಲಾನ್ ಮಾಡ್ದೀನಿ ಎನ್ನುವ ಮೂಲಕ ಪರೋಕ್ಷವಾಗಿ ಹೊಸ ಪಕ್ಷದ ಸುಳಿವು ನೀಡಿದರು.

# ಹಣಕ್ಕೆ ಬೇಡಿಕೆಯಿಟ್ಟ ಸಿಂದೋಲ ಪಿಡಿಓ ಅಮಾನತಿಗೆ ಆಗ್ರಹ

**ಬೀದರ್, ಏ. 7:** ತಾಲ್ಲೂಕಿನ ಸಿಂದೋಲ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ಡೇವಿಡ್ ಸೋನೆ ಅವರು ಶೌಚಾಲಯಕ್ಕಾಗಿ ಅನುದಾನ ನೀಡುವಂತೆ ಮನವಿ ಮಾಡಿಕೊಂಡಾಗ ಅಧಿಕಾರಿಯವರು 5000 ರೂ.ಗಳ ಬೇಡಿಕೆಯನ್ನು ಇಟ್ಟಿದ್ದು, ಕೂಡಲೇ ಅವರನ್ನು ಅಮಾನತ್ತುಗೊಳಿಸಬೇಕು ಎಂದು ಆಗ್ರಹಿಸಿ ಅಂಬೇಡ್ಕರ್ ಸೇನೆಯ ಕಾರ್ಯಕರ್ತರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿ ಮುಂದೆ ಧರಣಿ ಮಾಡಿದರು. ಜಿಲ್ಲಾಧ್ಯಕ್ಷ ಪ್ರದೀಪ್ ಹೆಗ್ಡೆ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಉಪಾಧ್ಯಕ್ಷ ರಾಜಕುಮಾರ್ ಹಳ್ಳಿಖೇಡಕರ್, ಪ್ರಧಾನ ಕಾರ್ಯದರ್ಶಿ ಶಿವರಾಜ್ ದೊಡ್ಡಿ, ಸಂಘಟನಾ ಕಾರ್ಯದರ್ಶಿ ಡೇವಿಡ್ ಸೋನೆ, ರಾಜಕುಮಾರ್ ಭಟಾರೆ, ಪ್ರಮೋದ್ ಸಿಂಧೆ, ಮಹೇಶ್ ಚಿಟ್ಟೆ, ವಿಶಾಲ್, ಅಬ್ರಾಹಂ ಸೋನೆ, ಕಪೀಲ್ ಕಾಂಬಳೆ ಮುಂತಾದವರು ಪಾಲ್ಗೊಂಡಿದ್ದರು.




ಪ್ರತಿಭಟನೆಕಾರರು ನಂತರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ, ಸಿಂದೋಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ತಡಪಳ್ಳಿ ಗ್ರಾಮದ ನಿವಾಸಿಯಾ ದಲಿತ ಸಮುದಾಯ ಮಹಿಳೆ ಆದ ಬಸಮ್ಮಾ ಗಂಡ ಹಣಮಂತ್ ವರಿಗೆ ಪಿಎಂಇಜಿಪಿ ಯೋಜನೆಯಡಿಯಲ್ಲಿ ಮನೆ ಮಂಜೂರಾಗಿದೆ. ಖಾಲಿ ನಿವೇಶನ (ಜಿಪಿಎಸ್) ಮಾಡಿಕೊಡುವಂತೆ ಮನವಿ ಮಾಡಿಕೊಂಡಾಗ ಸದರಿ ಪಿಡಿಓ ಅವರು 10,000 ರೂ. ಗಳ ಬೇಡಿಕೆ ಇಟ್ಟರು. ಹೀಗೆ ಬೇರೆ ಯಾರಾದರೂ ತಮ್ಮ ಕೆಲಸಕ್ಕೆಂದು ಹೋದಾಗ ಪ್ರತಿಯೊಬ್ಬರಿಗೆ ಹಣದ ಬೇಡಿಕೆ ಇಡುತ್ತಿದ್ದಾರೆ ಎಂದು ದೂರಿದರು.

ಅಲ್ಲದೇ ಬಸಮ್ಮ ಗಂಡ ಹಣಮಂತ್ ಅವರ ಮನೆಯ ಹತ್ತಿರ ಚರಂಡಿಯ ಇರದ ಕಾರಣ ಗ್ರಾಮದ ಚರಂಡಿಯ ಹೊಲಸು ನೀರು ಹೋಗುತ್ತಿದ್ದು, ಬಸಮ್ಮಾ ಅವರು ಪಿಡಿಓ ಅವರಿಗೆ ಚರಂಡಿ ನಿರ್ಮಿಸುವಂತೆ ಕಳೆದ 3 ತಿಂಗಳಿಂದ ಮನವಿ ಮಾಡುತ್ತಾ ಬಂದರೂ ಸಹ ಚರಂಡಿ ನಿರ್ಮಿಸುತ್ತಿಲ್ಲ, ಅಲ್ಲದೇ ನೀರು ಬಸಮ್ಮಾ ಅವರ ಮನೆಯ ಒಳಗೆ ಹೋಗುತ್ತಿದೆ ಅದಕ್ಕೆ ಏನು ಮಾಡಲಿ ಎಂದು ಹಾರಿಕೆ ಉತ್ತರ ನೀಡುತ್ತಾರೆ.

ಸದರಿ ಪಂಚಾಯಿತಿ ಯೋಜನೆಯಡಿಯಲ್ಲಿ ಅಭಿವೃದ್ಧಿ ಅಧಿಕಾರಿಗಳು ಕೆಲಸ ಮಾಡದೇ ಸರ್ಕಾರದ 15ನೇ ಹಣಕಾಸು ಹಣ ದುರುಪಯೋಗ ಮಾಡಿಕೊಂಡಿದ್ದಾರೆ ಹಾಗೂ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕಾರ್ಮಿಕ ಕೆಲಸ ನೀಡದೇ, ಜೆಸಿಬಿಯಿಂದ ಕೆಲಸ ಮಾಡಿ, ಕೆಲಸ ನಡೆಯುತ್ತಿರುವ ಸ್ಥಳದಲ್ಲಿ ಕೆಲ ಕೂಲಿಕಾರ್ಮಿಕರನ್ನು ನಿಲ್ಲಿಸಿ, ಭಾವಚಿತ್ರ ತೆಗೆದು, ಕೂಲಿಕಾರ್ಮಿಕರ ಖಾತೆಗೆ ಹಣ ಜಮೆ ಮಾಡಿ, ಅವರಿಂದ ಹಣ ಹಿಂಪಡೆಯುತ್ತಿದ್ದಾರೆ ಎಂದು ಅವರು ಆರೋಪಿಸಿದರು.


ಪಂಚಾಯಿತಿಗೆ ಹೋಗಿ ಸಮಸ್ಯೆ ಹೇಳಿಕೊಂಡು ಹೋದಾಗ ಸದರಿ ಅಧಿಕಾರಿಯವರು ನಿಮ್ಮ ಒಂದೇ ಊರಿಲ್ಲ, ನನಗೆ 6 ಗ್ರಾಮಗಳು ಬರುತ್ತವೆ ಎಂದು ಹೇಳಿ, ಅವಾಚ್ಯ ಶಬ್ದಗಳಿಂದ ಬೈದು, ಕಚೇರಿಯಿಂದ ಓಡಿಸುತ್ತಿದ್ದಾರೆ. ಈ ವಿಷಯದ ಕುರಿತು ಈ ಹಿಂದೆ ದೂರುಗಳು ನೀಡಿದರೂ ಸಹ ಇಲ್ಲಿಯವರೆಗೆ ಸದರಿ ಪಿಡಿಓ ಅವರ ವಿರುದ್ಧ ಕ್ರಮ ಕೈಗೊಂಡಿಲ್ಲ. ಆದ್ದರಿಂದ ಕೂಡಲೇ ಪಿಡಿಓ ಅವರನ್ನು ಅಮಾನತ್ತು ಮಾಡಬೇಕು ಎಂದು ಅವರು ಒತ್ತಾಯಿಸಿದರು.

# ಹೋಟೆಲ್ ಉದ್ಯಮದ ಪೈಪೋಟಿಗೆ ಬಾಲ ಹೋಟೆಲ್ ಬಲಿಯಾಯಿತೇ? ಪ್ರತಿಷ್ಠಿತ ಬಾಲಾ ರೀಜೆನ್ಸಿಯಲ್ಲಿ ಅನೈತಿಕ ಚಟುವಟಿಕೆ ನಡೆಯುತ್ತಿತ್ತೆ? ಇದು ಯಾರ ಹುನ್ನಾರ?

**ನಮ್ಮ ಜೀವಿತ ಚರಿತ್ರೆಯಲ್ಲಿ ಇಂತಹ ನೀಚ ಕೆಲಸ ಮಾಡುವುದಿಲ್ಲ, ಯಾರೋ ನೀಚರು ಬೇಕಂತ ಮಾಡಿದ್ದಾರೆ- ರಾಧಾಕ್ರಿಷ್ಣ**

**ಬಳ್ಳಾರಿ ಏ 06:** ಬಳ್ಳಾರಿ ನಗರದ ಬಾಲಾ ರಿಜೆನ್ಸಿ ಹೋಟೆಲ್ ಅವರಣದಲ್ಲಿರುವ ಸ್ಪಾ ನಲ್ಲಿ ವೇಶ್ಯವಾಟಿಕೆ ನಡೆಯುತ್ತಿದೆ ಎಂಬ ಅನುಮಾನದ ಹಿನ್ನೆಲೆಯಲ್ಲಿ ಎಸ್ಪಿ ಡಾ.ಶೋಭರಾಣಿಯವರ ನೇತೃತ್ವದಲ್ಲಿ ಪೊಲೀಸರು ದಾಳಿ ನಡೆಸಿದ್ದಾರೆ. ನಗರದ ಪ್ರತಿಷ್ಠಿತ ಹೋಟೆಲ್‌ನಲ್ಲಿ ಇಂತಹ ಅನೈತಿಕ ಚಟುವಟಿಕೆ ನಡೆಯುತ್ತಿತ್ತಾ, ನಡೆದಿದೆ ಎಂದರೆ, ನಂಬಲು ಸಾಧ್ಯವಾಗುತ್ತಿಲ್ಲ ಅಂತಾರೆ ಬಳ್ಳಾರಿ ಜನ. ಯಾಕೆಂದರೆ, ನಗರದ ಪ್ರತಿಷ್ಠಿತ ಹೋಟೆಲ್‌ಗಳ ಸಾಲಿನಲ್ಲಿ ಈ ಬಾಲ ರಿಜೆನ್ಸಿ ಅಗ್ರ ಸ್ಥಾನದಲ್ಲಿ ಇರುವಂತಹ ಹೋಟೆಲ್‌ನಲ್ಲಿ ಅನೈತಿಕ ಚಟುವಟಿಕೆಯೇ ಎಂದು ಜನ ಬಾಯಿ ಮೇಲೆ ಬೇರಳಿಟ್ಟುಕೊಳ್ಳುತ್ತಿದ್ದಾರೆ. 2005 ರಿಂದ ನಗರದಲ್ಲಿ ತಲೆ ಎತ್ತಿ ನಿಂತಿರುವ ಈ ಬಾಲ ರಿಜೆನ್ಸಿ ಹೋಟೆಲ್‌ನ ಇತಿಹಾಸದಲ್ಲಿ ಇದೇ ಮೊಟ್ಟಮೊದಲ ಬಾರಿಗೆ ಪೋಲಿಸರು ಹೋಟೆಲ್ ಆವರಣದಲ್ಲಿರುವ ಸ್ಪಾ ಮೇಲೆ ದಾಳಿ ಮಾಡಿದ್ದಾರೆ. ಇಲ್ಲಿ ಕಳೆದ 10 ವರ್ಗಳಿಂದ ಸ್ಪಾ ನಡೆಯುತ್ತಿದೆ. ಬಾಲ ರಿಜೆನ್ಸಿಯವರಿಂದ ಖಾಸಗಿ ವ್ಯಕ್ತಿಗಳು ಬಾಡಿಗೆ ಪಡೆದು ನಡೆಸುತ್ತಿದ್ದರು. ಆದರೆ, ಕಳೆದ 10 ವರ್ಗಗಳಿಂದ ಇಂತಹ ಘಟನೆ ಯಾವತ್ತೂ ಕೂಡ ನಡೆದಿರಲಿಲ್ಲ. ಆದರೆ ನಿನ್ನೆಯ ಘಟನೆ ಬಳ್ಳಾರಿಯ ಜನರಿಗೆ ದಿಗ್ಭ್ರಮೆಗೊಳ್ಳುವಂತಾಗಿದೆ. ಯಾಕೆಂದರೆ, ಈ ಬಾಲ ರಿಜೆನ್ಸಿ ಹೋಟೆಲ್ ನಲ್ಲಿ ಸಿನಿ ನಟರು, ದೊಡ್ಡ ದೊಡ್ಡ ರಾಜಕಾರಣಿಗಳು ತಂಗುವ ಹಾಗೂ ಕಾರ್ಯಕ್ರಮಗಳನ್ನು ಮಾಡುವ ಫೇವರೆಟ್ ಹೋಟೆಲ್ ಆಗಿದೆ. ಸೆನ್ ಪೋಲಿಸರು ಸ್ಪಾ ಮೇಲೆ ದಾಳಿ ಮಾಡಿ ಪರಿಶೀಲನೆ ಮಾಡಿದ್ದಾರೆ. ಏನೂ ದೊರೆತಿಲ್ಲ. ಬಳಿಕ ಜಿಲ್ಲಾ ಎಸ್ಪಿ ಡಾ.ಶೋಭಾರಾಣಿಯವರು ಸ್ಪಾ ಬಳಿ ಧಾವಿಸಿದ್ದಾರೆ.

ಸ್ಪಾ ಪರಿಶೀಲನೆ ಮಾಡಿ ಇಡೀ ಬಾಲ ರಿಜೆನ್ಸಿ ಹೋಟೆಲ್ ಜಾಲಾಡಿದ್ದಾರೆ. ಆದರೆ,




ಎಲ್ಲೂ ಅಂತಹ ಅನೈತಿಕ ಚಟುವಟಿಕೆ ನಡೆಯುವುದು ಕಂಡು ಬಂದಿಲ್ಲ. ಆದರೆ ಹೋಟೆಲ್ ಪರಿಶೀಲನೆ ಮಾಡಿ ಕೆಳಗೆ ಬರುವ ವೇಳೆ ಡಸ್ಟಬೀನ್ ಯೊಂದರಲ್ಲಿ ಹೊಸ ಕಾಂಡೋಮ್ ಪಾಕೇಟ್ ಸಿಕ್ಕಿದೆ ಅಂತೆ ಈ ಹಿನ್ನೆಲೆಯಲ್ಲಿ ಕೆಲವರನ್ನ ಗಾಂಧಿನಗರ ಪೋಲಿಸ್ ಠಾಣೆಗೆ ಕರೆದೊಯ್ದು ಪ್ರಕರಣ ದಾಖಲಿಸಿದ್ದಾರೆ ಪೋಲಿಸರು. ದಾಳಿ ವೇಳೆ ನಾಲ್ವರನ್ನು ಬಂಧಿಸಿ ಮೂವರು ಮಹಿಳೆಯರನ್ನು ರಕ್ಷಿಸಿದ್ದೀವಿ ಎಂದು ಪೋಲಿಸ್ ಮೂಲಗಳು ತಿಳಿಸಿವೆ. ಡೆಹರಡೂನ್, ಮಧ್ಯಪ್ರದೇಶ, ವಿಜಯವಾಡದಿಂದ ಬಂದಿದ್ದ ಮಹಿಳೆಯರನ್ನು ಬಳಸಿಕೊಂಡು ಬಳ್ಳಾರಿಯ ಎಂ.ಡಿ.ಮಥಿಲ್ ಮತ್ತು ಮುಂಬೈನ ಮೀನಜ್ ಎಂಬ ಮಹಿಳೆ ಈ ಸ್ಪಾ ನಡೆಸುತ್ತಿದ್ದರು. ಬಹುತೇಕ ಸ್ಪಾಗಳಲ್ಲಿ ಹೊರ ರಾಜ್ಯದ ಅವರೇ ಇರುತ್ತಾರೆ, ಇಲ್ಲಿ ವೇಶ್ಯಾವಾಟಿಕೆ ನಡೆಸಲಾಗುತ್ತಿದೆಂಬ ದೂರಿನ ಹಿನ್ನಲೆಯಲ್ಲಿ ದಾಳಿ ನಡೆಸಿ ಮೂವರು ಮಹಿಳೆಯರನ್ನು ರಕ್ಷಿಸಿ ಲೈಂಗಿಕ ಕ್ರಿಯೆಗೆ ಆಗಮಿಸಿದ್ದ ಬಳ್ಳಾರಿಯ ಇಬ್ಬರು, ಗಂಗಾವತಿ ಮೂಲದ ಓರ್ವ ಪುರುನನ್ನು ವಶಕ್ಕೆ ಪಡೆಯಲಾಗಿದೆ. ಮತ್ತೋರ್ವ ತಪ್ಪಿಸಿಕೊಂಡಿದ್ದಾನೆ ಎಂದು ಪೋಲಿಸರು ತಿಳಿಸಿದ್ದಾರೆ. ನಗರದ ಪ್ರತಿಷ್ಠಿತ ಬಾಲ ರಿಜೆನ್ಸಿ ಹೋಟೆಲ್ ಆವರಣದಲ್ಲಿರುವ ಸ್ಪಾ ಯೊಂದರಲ್ಲಿ ಇಂತಹ ಅನೈತಿಕ ಚಟುವಟಿಕೆ ನಡೆದಿದೆಯಾ ನಡೆಯುತ್ತಿತ್ತಾ ಇಲ್ಲ ಹೋಟೆಲ್ ಘನತೆ, ಗೌರವ, ಹಾಳು ಮಾಡಲು ನಡೆದಿರುವ ಹುನ್ನಾರವಾ ಎಂದು ಹೋಟೆಲ್ ಮಾಲೀಕರಿಗೆ ಕೇಳಿದರೆ ಹೌದು ಅಂತಾರೆ. ನಮ್ಮ ಬಾಲಾ ರೆಜೆನ್ಸಿಯಲ್ಲಿ ಯಾವತ್ತು ಇಂತಹ ಘಟನೆಗಳು ನಡೆದಿಲ್ಲ, ನಾವು ಅಂತಹ ಕೆಲಸಗಳಿಗೆ ಅವಕಾಶ ನೀಡುವುದಿಲ್ಲ, ನಮ್ಮ ಮೇಲೆ ಆಗಬಾರದವರು ಯಾರೋ ಈ ತರದ ಕೆಲಸಕ್ಕೆ ಕೈ ಹಾಕಿದ್ದಾರೆ ಎಂದರು. ನಮ್ಮ ಜೀವನ ಚರಿತ್ರೆಯಲ್ಲಿ ಇಂತಹ ಕೆಲಸಗಳು ಮಾಡಲ್ಲ, ಮುಂದೆನೂ ಮಾಡೋದು ಇಲ್ಲ, ನಮಗೆ ವ್ಯಾಪಾರ ಆಗದಿದ್ದರೂ ಪರವಾಗಿಲ್ಲ, ನಾವು ಅಂತಹ ನೀಚ ಕೆಲಸಕ್ಕೆ ಕೈ ಹಾಕುವುದಿಲ್ಲ, ನಾವು ಬಹಳಷ್ಟು ಸಂಘ ಸಂಸ್ಥೆಗಳನ್ನು, ದಾನ,ಧರ್ಮಗಳನ್ನು ನಡೆಸಿಕೊಂಡು ಹೋಗುತಿದ್ದೇವೆ, ಒಟ್ಟಾರೆ ಇದು ನಮ್ಮ ಮೇಲೆ ಹುನ್ನಾರ ನಡೆದಿದೆ, ನಮಗೆ ದೇವರ ಮೇಲೆ ನಂಬಿಕೆ ಇದೆ, ಎಲ್ಲವನ್ನು ಆ ದೇವರೇ ನೋಡಿಕೊಳ್ಳಲಿದ್ದಾರೆ ಎಂದರು. ಮನುಜರು ಮೋಸ,ದ್ರೋಹ ಬಗೆಯ ಬಹುದು, ದೇವರು ನಮಗೆ ನ್ಯಾಯ ದೊರಕಿಸಿಕೊಡುತ್ತಾನೆ ಎಂದರು.ನಗರದ ಬಾಲ ಹೋಟೆಲ್ ನಲ್ಲಿ ಇಂತಹ ಅನೈತಿಕ ಚಟುವಟಿಕೆ ನಡೆಯುತ್ತಿತ್ತಾ? ಇಲ್ಲ ಹೋಟೆಲ್ ಉದ್ಯಮದ ಪೈಪೋಟಿಯಲ್ಲಿ ಹೋಟೆಲ್ ಗೆ ಕೆಟ್ಟ ಹೆಸರು ತರುವ ಹುನ್ನಾರವಾ ಇಲ್ಲ ಹೋಟೆಲ್ ಮಾಲೀಕರ ಸಂರ್ಘಕ್ಕೆ 'ಬಾಲ' ಹೋಟೆಲ್ ಬಲಿಯಾಯಿತೇ ಗೊತ್ತಿಲ್ಲ ಈ ಎಲ್ಲಾ ಪ್ರಶ್ನೆಗಳಿಗೆ ಉತ್ತರ ಪೋಲಿಸರ ಸಂಪೂರ್ಣ ತನಿಖೆಯಿಂದ ಹೊರಬೀಳಬೇಕಿದೆ.

# ನಾರಾಯಣಪುರ ಡ್ಯಾಂ ನೀರಿಗಾಗಿ ಅನ್ನದಾತರ ಭಾರೀ ಪ್ರತಿಭಟನೆ

**ಕಾಲುವೆಗೆ ನಾರಾಯಣಪುರ ಡ್ಯಾಮ್ ನೀರು ಹರಿಸುವಂತೆ ಆಗ್ರಹಿಸಿ ವಿಷ ಕುಡಿಯುವ ಬೆದರಿಕೆ**



**ಯಾದಗಿರಿ, ಏ. 7:** ಕಲ್ಯಾಣ ಕರ್ನಾಟಕದ ಜೀವನಾಡಿ ನಾರಾಯಣಪುರ ಡ್ಯಾಂನ ನೀರಿಗಾಗಿ ಅನ್ನದಾತರ ಪ್ರತಿಭಟನೆ ಮತ್ತೊಂದು ಹಂತಕ್ಕೆ ತಲುಪಿದೆ. ಸರ್ಕಾರದ ವಿರುದ್ಧ ಸಿಡಿದೆದ್ದ ರೈತರು ಡ್ಯಾಂನ ಗೇಟ್ ಮುರಿದು ಜಮೀನಿಗೆ ನೀರು ಹರಿಸಿದ್ದಾರೆ. ಜಮೀನಿಗೆ ನೀರು ಬಿಡದೇ ಇದ್ದರೆ ವಿಷ ಕುಡಿಯುವುದಾಗಿ ಪಟ್ಟು ಹಿಡಿದಿದ್ದಾರೆ.ನಾರಾಯಣಪುರ ಡ್ಯಾಂ ರಾಯಚೂರು, ಕಲಬುರಗಿ ಮತ್ತು ಯಾದಗಿರಿ ಭಾಗದ ಜನರ ಜೀವ ನಾಡಿ. ಸಾವಿರಾರು ರೈತರ ಕುಟುಂಬಕ್ಕೆ ಆಧಾರವಾಗಿರುವ ಜೀವ ಜಲ. ಅದೆಷ್ಟೋ ಬಡ ರೈತ ಕುಟುಂಬಗಳು ಈ ಡ್ಯಾಂ ನೀರನ್ನು ನಂಬಿ ಬದುಕು ಕಟ್ಟಿಕೊಂಡಿವೆ. ಆದರೆ ಆದರೀಗ ಸಾಲ ಸೋಲ ಮಾಡಿ ಬೆಳೆದ ಬೆಳೆಗೆ ನೀರು ಇಲ್ಲದಂತಾಗಿದೆ.ಹೌದು ನೀರಿಲ್ಲದೆ ಸಮೃದ್ಧವಾಗಿ ಬೆಳೆದ ಬೆಳೆ ನೆಲಕ್ಕಚ್ಚುವಂತಹ ಪರಿಸ್ಥಿತಿ ಇದೆ. ಹೀಗಾಗಿ ನೀರು ಹರಿಸದ ಸರ್ಕಾರದ ವಿರುದ್ಧ ಸಿಡಿದ ಅನ್ನದಾತರು ಎಡದಂಡೆ ಕಾಲುವೆ ಗೇಟ್ ಉಡೀಸ್ ಮಾಡಿದ್ದಾರೆ. ಗೇಟ್ ಮುರಿದು ನೀರು ಹರಿಸಿದ್ದಾರೆ. ಕಳೆದ ಹದಿನೈದು ದಿನಗಳಿಂದ ನೀರು ಹರಿಸುವಂತೆ ರೈತರು ಬೀದಿಗಿಳಿದು ಹೋರಾಟ ಮಾಡುತ್ತಿದ್ದಾರೆ. ಏಪ್ರಿಲ್ ಹದಿನೈದರವರೆಗೆ ಮಾತ್ರ ನೀರು ಬಿಡಿ ಎಂದು ರೈತರು ಬೇಡಿಕೊಂಡಿದ್ದಾರೆ. ಆದರೂ ಕೂಡ ಅನ್ನದಾತರ ಕೂಗು ಸರ್ಕಾರದ ಕಿವಿಗೆ ಬೀಳಲಿಲ್ಲ.

ಅದೆಷ್ಟೇ ಗೋಳಾದರು ಕೂಡ ಅಧಿಕಾರಿಗಳು ತಲೆ ಕೆಡಿಸಿಕೊಂಡಿರಲಿಲ್ಲ. ಇದರಿಂದ ರೊಚ್ಚಿಗೆದ್ದ ರೈತರು ರಾತ್ರೋ ರಾತ್ರಿ ಅಧಿಕಾರಿಗಳಿಗೆ ಬಿಸಿ ಮುಟ್ಟಿಸಿದ್ದಾರೆ. ಯಾದಗಿರಿ ಮುದನೂರು ಬಳಿಯ 10ಎ ಮತ್ತು 11ಡಿ ಎರಡು ಗೇಟ್‌ಗಳನ್ನು ಮುರಿದು ಜಮೀನುಗಳಿಗೆ ನೀರು ಹರಿಸಿದ್ದಾರೆ. ಅಲ್ಲದೆ ಸ್ಥಳದಲ್ಲಿ ಟೆಂಟ್ ಹಾಕಿ ಕುಟುಂಬ ಸಮೇತ ಧರಣಿ ಕೂಡ ಮಾಡುತ್ತಿದ್ದಾರೆ. ಅಧಿಕಾರಿಗಳು ಗೇಟ್ ಬಂದ್ ಮಾಡಿದರೆ ವಿಷ ಕುಡಿದು ಜೀವ ಬಿಡುತ್ತೇವೆ ಎಂದು ಪಟ್ಟು ಹಿಡಿದಿದ್ದಾರೆ. ಈ ಬಗ್ಗೆ ಮಾತನಾಡಿದ ರೈತ ಸಿದ್ದಾರೆಡ್ಡಿ, 'ನನ್ನದು ತುಂಬು ಕುಟುಂಬ. 25 ಎಕರೆ ಜಮೀನು ಇದೆ. ಆದರೆ ನೀರು ಇಲ್ಲದೆ ಬೆಳೆ ಹಾಳಾಗಿ ಹೋಗುತ್ತಿದೆ. ಒಂದು ಎಕರಿಗೆ ನಾವು 30–40 ಸಾವಿರ ಖರ್ಚು ಮಾಡಿದ್ದೇವೆ. ನೀರಿನ ಗೇಟ್ ಬಂದ್ ಮಾಡಿದರೆ ನಾವು ಕುಟುಂಬ ಸಮೇತ ವಿಷ ಕುಡಿದು ಪ್ರಾಣ ಬಿಡುತ್ತೇವೆ. ಆರು ದಿನ ನೀರು ಬಿಡಿ ಸಾಕು' ಎಂದು ಗೋಗರೆದಿದ್ದಾರೆ.

ಇನ್ನೂ ಅನ್ನದಾತರ ಹೋರಾಟಕ್ಕೆ ಮಾಜಿ ಸಚಿವ ರಾಜುಗೌಡ ಸಾಥ್ ಕೊಟ್ಟಿದ್ದಾರೆ. ಇದು ರೈತರ ಬಂಡಾಯದ ಮೊದಲ ಹೆಜ್ಜೆ. ಸರ್ಕಾರ ಈಗಲೇ ಎಚ್ಚೆತ್ತುಕೊಳ್ಳಬೇಕು. ನನಗೆ ಕರೆ ಮಾಡಿ ರೈತರು ಸಮಸ್ಯೆ ಹೇಳಿಕೊಳ್ಳುತ್ತಿದ್ದಾರೆ. ನಾನು ಕಾನೂನು ಕೈಗೆ ತೆಗೆದುಕೊಳ್ಳಬೇಡಿ ಎಂದು ಹೇಳುತ್ತಿದ್ದೇನೆ. ಆದರೂ ರೈತರು ನನ್ನನ್ನು ಬೈಯುತ್ತಿದ್ದಾರೆ. ನಮ್ಮ ಬೆಳೆ ಹಾಳಾದರೆ ಅದಕ್ಕೆ ಯಾರು ಹೊಣೆ ಎಂದು ಪ್ರಶ್ನೆ ಮಾಡುತ್ತಿದ್ದಾರೆ. ಸರ್ಕಾರ ಇದರ ಬಗ್ಗೆ ಎಚ್ಚೆತ್ತುಕೊಳ್ಳಬೇಕು ಎಂದು ಎಚ್ಚರಿಕೆ ಕೊಟ್ಟಿದ್ದಾರೆ. ಒಂದೆಡೆ ರೈತರು ನೀರಿಗಾಗಿ ಪ್ರತಿಭಟನೆ ಮಾಡುತ್ತಿದ್ದರೆ ಅತ್ತ ಸರ್ಕಾರ ಆಗಾಗ ನಾರಾಯಣಪುರ ಜಲಾಶಯದಿಂದ ತೆಲಂಗಾಣಕ್ಕೆ ನೀರು ಹರಿಸುತ್ತಲೇ ಇರುತ್ತದೆ. ಇದರಿಂದ ನಮಗಿಲ್ಲದ್ದು ನೆರೆ ರಾಜ್ಯಕ್ಕೆ ಯಾಕೆ ಅನ್ನೋ ಪ್ರಶ್ನೆ ಕೂಡ ರೈತರು ಹಾಕುತ್ತಿದ್ದಾರೆ. ಒಟ್ಟಾರೆ ತಾಳ್ಮೆ ಕಟ್ಟೆ ಒಡೆದ ರೈತರು ಡ್ಯಾಂ ಗೇಟ್ ಮುರಿದು ನೀರು ಹರಿಸುತ್ತಿದ್ದಾರೆ. ಇದರಿಂದ ಅಧಿಕಾರಿಗಳ ಮುಂದಿನ ನಡೆ ಏನು ಅನ್ನೋದೇ ಪ್ರಶ್ನೆಯಾಗಿದೆ.




# ಭ್ರಷ್ಟ ಕಾಂಗ್ರೆಸ್ ಸರ್ಕಾರದ

ಬೆಲೆ ಏರಿಕೆ
ಮುಸ್ಲಿಂ ಓಲೈಕೆ
ದಲಿತರ ಹಣ ಲೂಟಿ
ವಿರುದ್ಧ

ರಾಜ್ಯಾದ್ಯಂತ

# ಜನಾಕ್ರೋಶ ಯಾತ್ರೆ




**ಹಂತ 1**

- ದಿನಾಂಕ : 07-04-2025 — ಮೈಸೂರು & ಚಾಮರಾಜನಗರ
- ದಿನಾಂಕ : 08-04-2025 — ಮಂಡ್ಯ, ಹಾಸನ
- ದಿನಾಂಕ : 09-04-2025 — ಕೊಡಗು, ಮಂಗಳೂರು
- ದಿನಾಂಕ : 10-04-2025 — ಉಡುಪಿ, ಚಿಕ್ಕಮಗಳೂರು
- ದಿನಾಂಕ : 11-04-2025 — ಉತ್ತರಕನ್ನಡ
- ದಿನಾಂಕ : 12-04-2025 — ಶಿವಮೊಗ್ಗ

**ಹಂತ 2**

- ದಿನಾಂಕ : 16-04-2025 — ಬೆಳಗಾವಿ, ಹುಬ್ಬಳ್ಳಿ
- ದಿನಾಂಕ : 17-04-2025 — ಬಾಗಲಕೋಟೆ, ವಿಜಯಪುರ
- ದಿನಾಂಕ : 18-04-2025 — ಕಲ್ಬುರ್ಗಿ, ಬೀದರ್

**ಹಂತ 3**

- ದಿನಾಂಕ : 21-04-2025 — ದಾವಣಗೆರೆ, ಹಾವೇರಿ
- ದಿನಾಂಕ : 22-04-2025 — ಗದಗ, ಕೊಪ್ಪಳ
- ದಿನಾಂಕ : 23-04-2025 — ಯಾದಗಿರಿ, ರಾಯಚೂರು
- ದಿನಾಂಕ : 24-04-2025 — ಬಳ್ಳಾರಿ, ವಿಜಯನಗರ
- ದಿನಾಂಕ : 25-04-2025 — ಚಿತ್ರದುರ್ಗ, ತುಮಕೂರು

**ಹಂತ 4**

- ದಿನಾಂಕ : 27-04-2025 — ಕೋಲಾರ, ಚಿಕ್ಕಬಳ್ಳಾಪುರ
- ದಿನಾಂಕ : 03-05-2025 — ಬೆಂಗಳೂರು ಮಹಾನಗರ, ಬೆಂಗಳೂರು ಗ್ರಾಮಾಂತರ, ರಾಮನಗರ

ಪ್ರಕಟಣೆ: ನಮ್ಮ ಬಿಜೆಪಿ ಕಾರ್ಯಕರ್ತರು

**ಬನ್ನಿ ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಭಾಗವಹಿಸಿ - ಭ್ರಷ್ಟ ಕಾಂಗ್ರೆಸ್ ಸರ್ಕಾರವನ್ನು ತೊಲಗಿಸೋಣ**